ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 42 ಸಂಚಿಕೆ- 42 | PAGE- 8 ಪುಟ-8 | ಗುರುವಾರ 20.03.2025 | RS.2/- ಬೆಲೆ 2/-

## ರಾಜ್ಯಗಳ ಮೇಲೆ ಯಾವುದೇ ಭಾಷೆ ಹೇರಲ್ಲ: ಕೇಂದ್ರ ಸ್ಪಷ್ಟನೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.19:ಯಾವುದೇ ರಾಜ್ಯದ ಮೇಲೆ ಯಾವುದೇ ಭಾಷೆಯನ್ನು ಹೇರುವುದಿಲ್ಲ ಎಂದು ಕೇಂದ್ರ ಸರ್ಕಾರ ಬುಧವಾರ ರಾಜ್ಯಸಭೆಗೆ ತಿಳಿಸಿದೆ.2020 ರ ರಾಷ್ಟ್ರೀಯ ಶಿಕ್ಷಣ ನೀತಿ(ಎನ್‌ಇಪಿ), ಇತರ ವಿಷಯಗಳ ಜೊತೆಗೆ, ಪ್ಯಾರಾ 4.13 ರಲ್ಲಿ, ಸಾಂವಿಧಾನಿಕ ನಿಬಂಧನೆಗಳು, ಜನರು, ಪ್ರದೇಶಗಳು, ಒಕ್ಕೂಟ-ದ ಆಕಾಂಕ್ಷೆಗಳು ಮತ್ತು ಬಹುಭಾಷಾವಾದ ಹಾಗೂ ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸುವ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ತ್ರಿಭಾಷಾ ಸೂತ್ರವನ್ನು ಜಾರಿಗೆತರುವುದನ್ನು ಮುಂದುವರಿಸಲಾಗುವುದು ಎಂದು ಶಿಕ್ಷಣ ಖಾತೆ ರಾಜ್ಯ ಸಚಿವ ಡಾ. ಸುಕಾಂತ ಮಜುಂದಾರ್ ಅವರು ರಾಜ್ಯಸಭೆಗೆ ಲಿಖಿತ ಉತ್ತರ ನೀಡಿದ್ದಾರೆ."ಆದಾಗ್ಯೂ, ತ್ರಿಭಾಷಾ ಸೂತ್ರದಲ್ಲಿ ಹೆಚ್ಚಿನ ನಮ್ಯತೆ ಇರುತ್ತದೆ ಮತ್ತು ಯಾವುದೇ ರಾಜ್ಯದ ಮೇಲೆ ಯಾವುದೇ ಭಾಷೆಯನ್ನು ಹೇರಲಾಗುವುದಿಲ್ಲ" ಎಂದು



ಅವರು ಹೇಳಿದ್ದಾರೆ.ಸಿಪಿಐ(ಎಂ) ನಾಯಕ ಡಾ. ಜಾನ್ ಬ್ರಿಟ್ಟಾಸ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು,"ಮೂರು ಭಾಷೆಗಳಲ್ಲಿ ಕನಿಷ್ಠ ಎರಡು ಭಾರತೀಯ ಸ್ಥಳೀಯ ಭಾಷೆಗಳನ್ನು ಕಲಿಸಲಾಗುವುದು. ಮಕ್ಕಳು ಕಲಿಯುವ ಮೂರು ಭಾಷೆಗಳು ರಾಜ್ಯಗಳು, ಪ್ರದೇಶಗಳು ಮತ್ತು ಸಹಜವಾಗಿ ವಿದ್ಯಾರ್ಥಿಗಳ ಆಯ್ಕೆಯಾಗಿರುತ್ತವೆ" ಎಂದು ತಿಳಿಸಿದ್ದಾರೆ.ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಅಡಿಯಲ್ಲಿ ಹಿಂದಿ ಹೇರಿಕೆಯ ವಿರುದ್ಧ ತಮಿಳುನಾಡಿನಲ್ಲಿ ನಡೆಯುತ್ತಿರುವ ಕಳವಳಗಳು ಮತ್ತು ಅಭಿಯಾನದ ಬಗ್ಗೆ ಸರ್ಕಾರಕ್ಕೆ ತಿಳಿದಿದೆಯೇ ಎಂದು ಸಿಪಿಎಂ ನಾಯಕ ಪ್ರಶ್ನಿಸಿದ್ದರು.ವಿಶೇಷವಾಗಿ, ತಾವು ಕಲಿಯುತ್ತಿರುವ ಮೂರು ಭಾಷೆಗಳಲ್ಲಿ ಒಂದು ಅಥವಾ ಹೆಚ್ಚಿನದನ್ನು ಬದಲಾಯಿಸಲು ಬಯಸುವ ವಿದ್ಯಾರ್ಥಿಗಳು 6 ಅಥವಾ 7ನೇ ತರಗತಿಯಲ್ಲಿ ಹಾಗೆ ಮಾಡಬಹುದು ಎಂದು ಸಚಿವರು ಹೇಳಿದರು.NEP 2020 ವಿದ್ಯಾರ್ಥಿಗಳು ತಾವು ಅಧ್ಯಯನ ಮಾಡಲು ಬಯಸುವ ಭಾಷೆಯನ್ನು ಆಯ್ಕೆ ಮಾಡಲು ಅನುಮತಿಸುತ್ತದೆ. ಮೂರು ಭಾಷೆಗಳಲ್ಲಿ ಕನಿಷ್ಠ ಎರಡು ಸ್ಥಳೀಯ ಭಾಷೆಯಾಗಿರಬೇಕು ಎಂದು ಅವರು ಹೇಳಿದರು.



ಕಲಬುರಗಿ: ಮಹಾದಾಸೋಹಿ ಶರಣಬಸವೇಶ್ವರರ 203 ನೆಯ ಜಾತ್ರಾ ಮಹೋತ್ಸವದ ಅಂಗವಾಗಿ ಬುಧವಾರ ಸಂಜೆ ರಥೋತ್ಸವ ನಡೆಯಿತು. ಲಕ್ಷಾಂತರ ಭಕ್ತರು ಭಾಗವಹಿಸಿದ್ದರು.

## ಕುರಿಗಾಹಿಗಳ ಮೇಲಿನ ದೌರ್ಜನ್ಯ ತಡೆಗೆ ಶೀಘ್ರ ಕಾನೂನು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.19:ಕುರಿಗಾಹಿಗಳ ಮೇಲೆ ನಡೆಯುವ ಹಲ್ಲೆ, ದೌರ್ಜನ್ಯವನ್ನು ತಡೆಯಲು ಶೀಘ್ರ ಕಾನೂನು ತರಲಾಗುವುದು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ವಿಧಾನಪರಿಷತ್‌ಗೆ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ ಚಿದಾನಂದ್ ಎಂ.ಗೌಡ ಅವರ ಪ್ರಶ್ನೆಗೆ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಕುರಿಗಾಹಿಗಳ



ಮೇಲೆ ಹಲ್ಲೆ ನಡೆದಿರುವ ಘಟನೆಗಳು ಬೆಳಕಿಗೆ ಬಂದಿವೆ. ಹೀಗಾಗಿ ಶೀಘ್ರ ಕಾನೂನು ತರಲಾಗುವುದು ಎಂದರು.

ಶಿರಾ ತಾಲ್ಲೂಕಿನಲ್ಲಿ 4,78,500 ಕುರಿಗಳಿವೆ. ಹೆಚ್ಚಿನ ಪ್ರೊ?ತ್ಸಾಹ ನೀಡಬೇಕೆಂಬುದು ಸದಸ್ಯರ ಒತ್ತಾಯವಾಗಿದ್ದು, ಆ ನಿಟ್ಟಿನಲ್ಲಿ ಕುರಿ ಸಾಗಾಣಿಕೆಗೆ ಹೆಚ್ಚು ಪ್ರೊ?ತ್ಸಾಹ ಕೊಡಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು.

ಆಗ ಸಚಿವರು, ನಮ

(2ನೇ ಪುಟ ನೋಡಿ)

## ಚಲಿಸುತ್ತಿದ್ದ ಸರ್ಕಾರಿ ಬಸ್ ಗೆ ಬೆಂಕಿ

### ಚಾಲಕನ ಸಮಯಪ್ರಜ್ಞೆಯಿಂದ ತಪ್ಪಿದ ಭಾರಿ ಅನಾಹುತ.!



ಮಲ್ಲಮ್ಮನುಡಿವಾರ್ತೆ ಬೀದರ. ಮಾ. 19 : ಬೀದರ್ ನಲ್ಲಿ ಇಂದು ಭೀಕರ ಘಟನೆಯೊಂದು ಸಂಭವಿಸಿದ್ದು, ಚಲಿಸುತ್ತಿದ್ದ ಸರ್ಕಾರಿ ಬಸ್ ಗೆ ಏಕಾಏಕಿ ಹೊತ್ತಿ ಉರಿದಿದೆ.

ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಕಪ್ಪಿಕೇರಿ ಬಳಿ ಚಲಿಸುತ್ತಿದ್ದ ಸರ್ಕಾರಿ ಬಸ್ ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಕೂಡಲೇ ಚಾಲಕನ ಸಮಯಪ್ರಜ್ಞೆಯಿಂದ ಭಾರಿ ಅನಾಹುತ ತಪ್ಪಿದಂತಾಗಿದೆ.

ಬಸ್ ಎಂಜಿನ್ ನಲ್ಲಿ ಬೆಂಕಿ ಕಾಣಿಸಿಕೊಳ್ಳುತ್ತಿದ್ದ ಬಸ್ ನಿಲ್ಲಿಸಿದ ಚಾಲಕ ಕೂಡಲೇ ಪ್ರಯಾಣಿಕರನ್ನು ಇಳಿಯುವಂತೆ ಹೇಳಿದ್ದಾರೆ. ಹೀಗಾಗಿ 25 ಪ್ರಯಾಣಿಕರು ಬಸ್ ನಿಂದ ಕೆಳಗಿಳಿದು ಪ್ರಾಣ ಉಳಿಸಿಕೊಂಡಿದ್ದಾರೆ.ಸದ್ಯ ಬೆಂಕಿ ಸುಟ್ಟು ಕರಕಲಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು, ಪರಿಶೀಲನೆ ನಡೆಸಿದ್ದಾರೆ.

## ಠಾಣೆಯಲ್ಲಿ ಇಸ್ಪಿಟ್ : ಎಎಸ್‌ಐ ಸೇರಿ ಐವರು ಸಸ್ಪೆಂಡ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.19: ವಾಡಿ ಪೊಲೀಸ್ ಠಾಣೆಯಲ್ಲಿ ಇಸ್ಪಿಟ್ ಆಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಎ.ಎಸ್.ಐ ಸೇರಿದಂತೆ ಐವರನ್ನು ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಆದೇಶ ಹೊರಡಿಸಿದ್ದಾರೆ.

ಎ.ಎಸ್.ಐ ಮೆಹಮೂದ್ ಮಿಯಾ, ಹೆಡ್ ಕಾನ್ ಸ್ಟೇಬಲ್‌ಗಳಾದ ನಾಗರಾಜ್, ಸಾಯಬಣ್ಣ , ಇಮಾಮ್ ಹಾಗೂ ಪೇದೆ ನಾಗಭೂಷಣ ಅಮಾನತುಗೊಂಡವರು. ಈ ಐವರಿಗೂ ಎಸ್ಪಿ ಶ್ರೀನಿವಾಸಲು ಕಾರಣ ಕೇಳಿ ನೋಟಿಸ್ ಸಹ ಜಾರಿಗೊಳಿಸಿದ್ದಾರೆ.

ಈ ಮಧ್ಯೆ, ಠಾಣೆಯ ಪಿ.ಎಸ್.ಐ ತಿರುಮಲೇಶ್ ಅವರಿಗೂ ಎಸ್ಪಿ ಶ್ರೀನಿವಾಸಲು ನೋಟಿಸ್ ಜಾರಿ ಮಾಡಿ ನಿಗದಿತ ಸಮಯದಲ್ಲಿ ಉತ್ತರಿಸುವಂತೆ ಲಿಖಿತವಾಗಿ ತಾಕೀತು ಮಾಡಿದ್ದಾರೆ.

(2ನೇ ಪುಟ ನೋಡಿ)

## ಪ್ಲಾಸ್ಟಿಕ್ ಸಂಪೂರ್ಣ ನಿಷೇಧ ಕಷ್ಟ : ಸಚಿವ ಸಿ.ಸುಧಾಕರ್

ಬೆಂಗಳೂರು,ಮಾ.19:ರಾಜ್ಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧವಿದ್ದರೂ ಸಂಪೂರ್ಣವಾಗಿ ನಿಷೇಧಿಸುವುದು ಕಷ್ಟ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ವಿಧಾನಪರಿಷತ್‌ಗೆ ತಿಳಿಸಿದರು.

2025-26ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಚರ್ಚೆಯ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಅವರು, ಪ್ಲಾಸ್ಟಿಕ್ ಉತ್ಪನ್ನಗಳ ಬಳಕೆ ನಿಷೇಧವಿದೆ. ಬಳಸುವವರಿಗೆ ಮತ್ತು ನಿಷೇದಿತ ಪ್ಲಾಸ್ಟಿಕ್ ಉತ್ಪಾದಿಸುವವರಿಗೆ ದಂಡ ಹಾಕುತ್ತಿದ್ದೇವೆ ಎಂದರು.

ಪ್ಲಾಸ್ಟಿಕ್ ಲೋಟ, ತ-ಟ್ಟೆ, ಹಾರ ಇತ್ಯಾದಿಗಳು ಬಳಕೆಯಾಗುತ್ತಿವೆ. ಇದನ್ನು ನಿಷೇಧಿಸಲಾಗಿದೆ. ಆದರೂ ಒಂದಲ್ಲ ಒಂದು ರೀತಿಯಲ್ಲಿ ಪ್ಲಾಸ್ಟಿಕ್ ಬಳಕೆಯಲ್ಲಿವೆ. ಹೀಗಾಗಿ ಇದನ್ನು ಸಂಪೂರ್ಣವಾಗಿ ನಿಷೇಧ ಮಾಡಲು ಕಷ್ಟ ಸಾಧ್ಯ ಎಂದು ಹೇಳಿದರು.

## ಬಸ್-ಬೈಕ್ ಮಧ್ಯೆ ಡಿಕ್ಕಿ: ಸ್ಥಳದಲ್ಲೇ ಮೃತಪಟ್ಟ ಬೈಕ್ ಸವಾರ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.19: ತಾಲ್ಲೂಕಿನ ದಾಡಗಿ ಕ್ರಾಸ್ ಸಮೀಪ ಸರ್ಕಾರಿ ಬಸ್ ಮತ್ತು ಬೈಕ್ ಮಧ್ಯೆ ಡಿಕ್ಕಿಯಾದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾನೆ.

ಔರಾದ್ ತಾಲ್ಲೂಕಿನ ಚೌದ್ರಿ ಬೆಳಕುಣಿಯ ಆಕಾಶ ದಿಲೀಪರಾವ್



ಬುಹೆ (28) ಮೃತ ಯುವಕ.

ಮೃತ ಯುವಕನು ಭಾಲ್ಕಿಯಿಂದ ಗೋರಟಾ ಗ್ರಾಮದಲ್ಲಿರುವ ಸಹೋದರಿ ಮನೆಗೆ ತೆರಳುತ್ತಿದ್ದಾಗ ಹುಮನಾಬಾದ್ ನಿಂದ ಭಾಲ್ಕಿ ಕಡೆಗೆ ಆಗಮಿಸುತ್ತಿದ್ದ ಬಸ್ ಮಧ್ಯೆ ಡಿಕ್ಕಿ ಸಂಭವಿಸಿದೆ.ಈ ಸಂಬಂಧ ಖಟಕಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಜಕಾರಣಿಗಳ ವಿರುದ್ಧ 193 ಪ್ರಕರಣ, ಎರಡರಲ್ಲಿ ಶಿಕ್ಷೆ

ಮಲ್ಲಮ್ಮನುಡಿ ವಾರ್ತೆ




ನವದೆಹಲಿ:ಮಾ.19: ಕಳೆದ 10 ವರ್ಷಗಳಲ್ಲಿ (2015-2025) ಜಾರಿ ನಿರ್ದೇಶನಾಲಯ ಸಂಸದರು, ಶಾಸಕರು ಸೇರಿದಂತೆ ರಾಜಕಾರಣಿಗಳ ವಿರುದ್ಧ ಅಕ್ರಮ ಹಣ ವರ್ಗಾವಣೆ ಆರೋಪದಡಿ ಒಟ್ಟು 193 ಪ್ರಕರಣಗಳನ್ನು ದಾಖಲಿಸಿದ್ದು ಈ ಪ್ರಕರಣಗಳಲ್ಲಿ ಕೇವಲ ಇಬ್ಬರಿಗೆ ಮಾತ್ರ ಶಿಕ್ಷೆಯಾಗಿದೆ ಎಂದು ಕೇಂದ್ರ ಸರ್ಕಾರ ಮಾಹಿತಿ ನೀಡಿದೆ.

ಕೇಂದ್ರ ಸರ್ಕಾರದ ಮಾಹಿತಿ ಪ್ರಕಾರ, 2015ರಿಂದ 2025ರವರೆಗೆ ದಾಖಲಾದ 193 ಪ್ರಕರಣಗಳಲ್ಲಿ ಒಂದು ಪ್ರಕರಣದಲ್ಲಿ 2016-17ರಲ್ಲಿ ಮತ್ತು ಮತ್ತೊಂದರಲ್ಲಿ 2019-20ರಲ್ಲಿ ಶಿಕ್ಷೆ ದೊ-ರೆತಿದೆ. ಉಳಿದಂತೆ ಬಹುತೇಕ ಪ್ರಕರಣಗಳಲ್ಲಿ ತನಿಖೆ ಮುಗಿದಿಲ್ಲ ಅಥವಾ ಅಪರಾಧ ಸಾಬೀತಾಗಿಲ್ಲ ಎಂದು ಹೇಳಿದೆ.

ಇಡಿ ತನಿಖೆಗೆ ತೆಗೆದುಕೊಂಡ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಹೆಚ್ಚಿದೆ. ಆದರೆ ಶಿಕ್ಷೆಯ ಪ್ರಮಾಣ ಕೇವಲ 1%ಕ್ಕಿಂತ ಕಡಿಮೆ ಇರುವುದು ಗಮನಾರ್ಹ.ಈ ಅಂಕಿಅಂಶಗಳು ಇಡಿಯ ಕಾರ್ಯವೈಖರಿಯ ಬಗ್ಗೆ ಚರ್ಚೆಗೆ ಕಾರಣವಾಗಿವೆ. ಕೇಂದ್ರ ಸರ್ಕಾರವು ಇಡಿ ತನಿಖೆಗಳು ವಿಶ್ವಾಸಾರ್ಹ ಸಾಕ್ಷ್ಯಗಳ ಆಧಾರದ ಮೇಲೆ ನಡೆಯುತ್ತವೆ ಮತ್ತು ರಾಜಕೀಯ ಸಂಬಂಧಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದು ಸಮರ್ಥಿಸಿಕೊಂಡಿದೆ.

ವಿರೋಧ ಪಕ್ಷಗಳು ಈ ಮಾಹಿತಿಯನ್ನು ಆಧರಿಸಿ ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿವೆ. ಇಡಿ ಎಂಬುದು ಬಿಜೆಪಿ ಸರ್ಕಾರದ ಅಸ್ತ್ರವಾಗಿದ್ದು, ವಿರೋಧ ಪಕ್ಷಗಳ ನಾಯಕರನ್ನು ಗುರಿಯಾಗಿಸಿ

(2ನೇ ಪುಟ ನೋಡಿ)

## ದೇವಾಲಯಗಳ ಹೆಸರಿಗೆ 15 ಸಾವಿರ ಎಕರೆ ಪಹಣಿ ದಾಖಲು : ಸಚಿವ ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.19:ರಾಜ್ಯದಲ್ಲಿ 34 ಸಾವಿರ ಮುಜರಾಯಿ ದೇವಾಲಯಗಳಿದ್ದು, ಈಗಾಗಲೇ 15 ಸಾವಿರ ಎಕರೆ ಜಮೀನನ್ನು ದೇವಾಲಯಗಳ ಹೆಸರಿಗೆ ಪಹಣಿ ದಾಖಲಿಸಲಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಶಾಸಕ ಸಿ.ಟಿ.ರವಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಮುಜರಾಯಿ ದೇವಾಲಯಗಳ ಎಲ್ಲ ಆಸ್ತಿಯನ್ನು ಆಯಾ ದೇವಾಲಯಗಳ ಹೆಸರಿಗೆ ಪಹಣಿ ದಾಖಲು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಶೀಘ್ರವೇ ಈ ಕಾರ್ಯ ಪೂರ್ಣಗೊಳ್ಳಲಿದೆ



ಎಂದರು.ಚಿಕ್ಕಮಗಳೂರು ಜಾಗರ ಹೋಬಳಿ ಇನಾಮು ದತ್ತಾತ್ರೆ?ಯ ಪೀಠ ಗ್ರಾಮದ ಆಕಾರಬಂಧಿನಂತೆ 6,213 ಎಕರೆ 25 ಗುಂಟೆ ಆಸ್ತಿ ಇದೆ. 104 ಎಕರೆ 39 ಗುಂಟೆ ಜಮೀನು ಮಂಜೂರಾಗಿದೆ. ದತ್ತಾತ್ರೆ?ಯ ಪೀಠಕ್ಕೆ ಒಟ್ಟು 1861 ಎಕರೆ 31 ಗುಂಟೆ ಜಮೀನಿದೆ ಎಂದು ಸಚಿವರು ಹೇಳಿದರು.

ಅಕ್ರಮವಾಗಿ ಭೂ ಮಂಜೂರಾಗಿದ್ದರೆ ಅದರ ಬಗ್ಗೆ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಯಿಂದ ತನಿಖೆ ನಡೆಸಲಾಗುವುದು. ಒಬ್ಬರಿಗೆ 6 ಎಕರೆಗಿಂತ ಹೆಚ್ಚು ಮಂಜೂರಾಗಿರುವ ಬಗ್ಗೆಯೂ ತನಿಖೆ ನಡೆಸಲಾಗುವುದು ಎಂದರು.

ಇದಕ್ಕೂ ಮುನ್ನ ಮಾತನಾಡಿದ ಸಿ.ಟಿ.ರವಿ, ಕಂದಾಯ ಹಾಗೂ ಮುಜರಾಯಿ ಇಲಾಖೆಯ ವಿಶೇಷ ತನಿಖಾ ತಂಡವನ್ನು ರಚಿಸಿ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು. ಸದಸ್ಯ ಡಿ.ಟಿ.ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರಿಸಿದ ಮುಜರಾಯಿ ಸಚಿವರು, ಹಿಂದು ಧಾರ್ಮಿಕ ಸಂಸ್ಥೆಗಳು

(2ನೇ ಪುಟ ನೋಡಿ)

## ಭೂಮಿಗೆ ಮರಳಿದ ಸುನಿತಾ

ಮಲ್ಲಮ್ಮ ನುಡಿ ವಾರ್ತೆ

ಫ್ಲೋರಿಡಾ:ಮಾ.19: 286 ದಿನಗಳ ಬಾಹ್ಯಾಕಾಶವಾಸದ ಬಳಿಕ ಭೂಮಿಗೆ ಮರಳಿರುವ ಭಾರತೀಯ ಮೂಲದ ಗಗನಯಾತ್ರಿ ಸುನಿತಾ ವಿಲಿಯಮ್ಸ್ ಸುದೀರ್ಘ ಬಾಹ್ಯಾಕಾಶ ನಡಿಗೆ ಮಾಡುವ ಮೂಲಕ ವಿಶ್ವದಾಖಲೆ ನಿರ್ಮಿಸಿದ್ದಾರೆ.

ಬೋಯಿಂಗ್ ಸ್ಟಾರ್ ಲೈನರ್ ಕ್ಯಾಪ್ಸುಲ್‌ನಲ್ಲಿ ಬಾಹ್ಯಾಕಾಶಕ್ಕೆ ತೆರಳಿದ್ದ ಸುನಿತಾ ಅವರು 62 ಗಂಟೆ 6 ನಿಮಿಷಗಳ ಕಾಲ ಬಾಹ್ಯಾಕಾಶ ನಡಿಗೆ ಪೂರೈಸಿದ್ದಾರೆ. ಈ ಮೂಲಕ ಸುದೀರ್ಘ ಬಾಹ್ಯಾಕಾಶ ನಡಿಗೆ ಪೂರೈಸಿದ ಮೊದಲ ಮಹಿಳಾ ಗಗನಯಾತ್ರಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದಾರೆ. ಒಟ್ಟಾರೆ



ಬಾಹ್ಯಾಕಾಶ ನಡಿಗೆ ಪೂರೈಸಿದ ಗಗಯಾತ್ರಿಗಳ ಸಾರ್ವಕಾಲಿಕ ದಾಖಲೆ ಪಟ್ಟಿಯಲ್ಲಿ 4ನೇ ಸ್ಥಾನ ಪಡೆದುಕೊಂಡಿದ್ದಾರೆ.

ಮತ್ತೊಂದು ದಾಖಲೆ

ಅಲ್ಲದೇ ಬಾಹ್ಯಾಕಾಶದಲ್ಲಿ ಸುದೀರ್ಘ ವಾಸದ ದಾಖಲೆ ಬರೆದ 2ನೇ ಗಗನಯಾತ್ರಿ ಎಂಬ ಹೆಗ್ಗಳಿಕೆಗೂ ಸುನಿತಾ ಅವರು ಪಾತ್ರರಾಗಿದ್ದಾರೆ. ಒಟ್ಟು 608 ದಿನಗಳನ್ನು ಬಾಹ್ಯಾಕಾಶದಲ್ಲಿ ಕಳೆದಿದ್ದು, ಇತಿಹಾಸದ ಪುಟ ಸೇರಿದ್ದಾರೆ. ವೃತ್ತಿಜೀವನದಲ್ಲಿ ಮೂರು ಬಾರಿ ಬಾಹ್ಯಾಕಾಶ ಹಾರಾಟಗಳನ್ನು ಪೂರ್ಣಗೊಳಿಸಿರುವ ಸುನಿತಾ ಅವರು, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಕೆಲವು ಮಹತ್ವದ ಸಂಶೋಧನೆ ಮತ್ತು ಪರಿಶೋಧನಾ ಕಾರ್ಯಾಚರಣೆಗಳಿಗೆ ಕೊಡುಗೆ ನೀಡಿದ್ದಾರೆ. ಅವರ ಕೆಲಸ, ವಿಶೇಷವಾಗಿ ದೀರ್ಘಾವಧಿಯ ಕಾರ್ಯಾಚರಣೆಗಳಲ್ಲಿ, ಅವರನ್ನು ನಾಸಾದ ಪ್ರಮುಖ ವ್ಯಕ್ತಿಯಾಗಿ ಗುರುತಿಸುತ್ತದೆ. ಇದೀಗ ವಿಶ್ವದಾಖಲೆ ಬರೆದಿರುವುದು ವಿಶ್ವದ ಹಾಗೂ ಭಾರತೀಯರ ಗಮನ ಸೆಳೆದಿದೆ.

2024ರ ಜೂನ್ 6ರಂದು ಸುನಿತಾ ಮತ್ತು ವಿಲ್ಮೋರ್ 8 ದಿನಗಳ ಕಾರ್ಯಾಚರಣೆಗಾಗಿ ಬೋಯಿಂಗ್ ಸ್ಟಾರ್ ಲೈನರ್ ಕ್ಯಾಪ್ಸುಲ್‌ನಲ್ಲಿ ಬಾಹ್ಯಾಕಾಶಕ್ಕೆ

(2ನೇ ಪುಟ ನೋಡಿ)



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ದಾಸೋಹ ಮನೆಯಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಕಲಬುರ್ಗಿಯ ಶ್ರೀ ಶರಣಬಸವೇಶ್ವರರ 203ನೇ ಜಾತ್ರಾ ಮಹೋತ್ಸವದ ನಿಮಿತ್ಯ ಮಹಾದಾಸೋಹಿ ಶ್ರೀ ಶರಣಬಸವೇಶ್ವರರ ಮೂರ್ತಿಗೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಅಲ್ಲಮಪ್ರಭು ಹಿರೇಮಠ, ಹೇಮಲತಾ ಎಂ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಚಿಂತೆಯನ್ನು ಅಚಲವಾದ ಆತ್ಮ ವಿಶ್ವಾಸವನ್ನಾಗಿ ಪರಿವರ್ತಿಸುವುದು:ಬಿ.ಕೆ. ವೀಣಾ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಚಿಂತೆಯನ್ನು ಅಚಲವಾದಆತ್ಮವಿಶ್ವಾಸವನ್ನಾಗಿ ಪರಿವರ್ತಿಸುವುದು,ಚಿಂತೆಯನ್ನು ಸಕರಾತ್ಮವಾಗಿ ಮಾಡಿ ಎಂದು ಬಿ. ಕೆ. ವೀಣಾ ಬಹನಜಿ ನುಡಿದರು.

ಪಟ್ಟಣದ ಶರಣಬಸಪ್ಪ ಪಬ್ಲಿಕ ಶಾಲೆಯಲ್ಲಿ ಪ್ರಜಾಪಿತಾ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಶಾಖೆ ಕಮಲನಗರ ವತಿಯಿಂದ ಆಯೋಜಿಸಿದ "ಶರಣರು ಕಂಡ ಶಿವ"ಮೂರು ದಿವಸದ ರಾಜಯೋಗ ಶಿಬಿರದ ಮೊದಲ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜೀವನದಲ್ಲಿಪ್ರತಿಯೊಬ್ಬರಿಗೂ ಕಷ್ಟಗಳು ಚಿಂತೆಗಳು ಬರುವದು ಸರ್ವೇಸಾಮಾನ್ಯ ಹೀಗಂತ ನಾವು ಅದರಿಂದ ಮಾನಸಿಕ ಒತ್ತಡಕ್ಕೆ ಒಳಗಬಾರದು ಎಂದು ತಿಳಿಸಿದರು,

ಶಿವ ಪರಮಾತ್ಮನ ಧ್ಯಾನ ಮಾಡಿ ನಮ್ಮ ಮನಸ್ಸನ್ನು ಸಮಾಧಾನ ಮಯ ಹಾಗೂ ಶಾಂತ ವಾಗಿ ಇಡಬೇಕೆಂದು ಹೇಳಿದರು.

ಬಿ.ಕೆ. ಸುನಂದಾ, ಬಿ.ಕೆ. ಸುಮಂಗಲಾ ಮಾತನಾಡಿದರು, ಈ ಸಂದರ್ಭದಲ್ಲಿ

ಬಿ.ಕೆ.ಜಯಶ್ರೀಬೆಹನಜಿಯರು, ಗೋಲ್ಡನ ವ್ಯಾಲಿ ಶಾಲೆಯ ಅಧ್ಯಕ್ಷೆ ಶ್ರೀಮತಿ ಜಯಶ್ರೀ ಪ್ರವೀಣಬಿರಾದಾರ,ಬೆಂಗಳೂರು ಉದ್ಯಮಿ ಹಾಗೂ ಸಮಾಜ ಸೇವಕರಾದ ಶಿವಲಿಂಗಯ್ಯ ಸ್ವಾಮಿ ಡಿಗ್ಗಿ, ಎಸ್. ಐನ್ ಶಿವಣಕರ, ಪಿ. ಎಸ್. ಐ ಚಂದ್ರಶೇಖರ ಏನ್. ಬಸವ ಕಲ್ಯಾಣ ಮಂಟಪ ಅಧ್ಯಕ್ಷರಾದ ದೇವೇಂದ್ರಪ್ಪಿ.ಪಾಟೀಲ,ಪ್ರಕಾಶ ಮಾನಕರೆ,ಶರಣಬಸಪ್ಪಪಬ್ಲಿಕ್ ಶಾಲೆಯ ಅಧ್ಯಕ್ಷ ಶರಣಬಸಪ್ಪ ಮಾನಕರಿ, ರಾಜಕುಮಾರ ಬಿರಾದಾರ,ಸೋಮನಾಥ ರಾಂಪುರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪತ್ರಕರ್ತರ ರೈಲ್ವೆ ಪಾಸ್ ವಿಷಯಕ್ಕೆ ಸ್ಪಂದಿಸಿದ ಬೀದರ ಲೋಕಸಭೆ ಸದಸ್ಯರಿಗೆ ಅಭಿನಂದನೆ



ಮಲ್ಲಮ್ಮನುಡಿವಾರ್ತೆ


ಬೀದರ: ಸುಮಾರು ವರ್ಷಗಳಿಂದನೆನೆಗುದಿಗೆ ಮಾನ್ಯತೆ ಪಡೆದಿರುವ ಪತ್ರಕರ್ತರ ರೈಲ್ವೆ ರಿಯಾಯಿತಿ ಪಾಸ್ ಮರುಸ್ಥಾಪನೆಗೆಬೀದರ ಯುವ ಸಂಸದರಾದ ಸಾಗರ ಈಶ್ವರ ಖಂಡ್ರೆ ಅವರು ಲೋಕಸಭೆಯಲ್ಲಿ ಪ್ರಶ್ನೆ ಎತ್ತುವುದರ ಮೂಲಕ ಜಿಲ್ಲೆಯ ಪತ್ರಕರ್ತರ ಮನವಿಗೆ ಸ್ಪಂದನೆ ಮಾಡಿದ್ದಾರೆ.

ಈ ಹಿಂದೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ ಬೀದರ ಜಿಲ್ಲಾ ಘಟಕದ ವತಿಯಿಂದ ಯುವ ಸಂಸದರಾದ ಉತ್ಸಾಹಿ ಸಾಗರ ಈಶ್ವರ ಖಂಡ್ರೆಅವರಿಗೆ ಪತ್ರಕರ್ತರಿಗೆ ಜಾರಿಯಲ್ಲಿದ್ದ ರೈಲ್ವೆ ರಿಯಾಯಿತಿ ಪಾಸ್ ಕೋವಿಡ್ ಸಮಯದಲ್ಲಿ ನಿಲ್ಲಿಸಲಾಗಿತ್ತು. ಈ ಬಗ್ಗೆ ಲೋಕಸಭೆಯಲ್ಲಿ ನಮ್ಮ ಪರವಾಗಿ ಧ್ವನಿ ಎತ್ತುವಂತೆ ನಾವು ಮಾಡಿರುವ ಮನವಿಗೆ ಸ್ಪಂದಿಸಿ ನಿನ್ನೆ ರಾತ್ರಿ ಮಾರ್ಚ.17 ರಂದು ಲೋಕಸಭೆಯಲ್ಲಿ ಸುಧೀರ್ಘಕಾಲರೈಲ್ವೆವಿಷಯದ ಮೇಲೆ ನಡೆದಿರುವ ಚರ್ಚೆ ಸಮಯದಲ್ಲಿ ಪ್ರಜಾಪ್ರಭುತ್ವದ ನಾಲ್ಕನೇಸ್ತಂಭವಾಗಿರುವಪತ್ರಕರ್ತರ ರೈಲ್ವೆ ರಿಯಾಯಿತಿ ಪಾಸ್ ಮರು ಚಾಲನೆ ಮಾಡುವಂತೆ ಅವರು ಕೇಂದ್ರರೈಲ್ವೆಸಚಿವರಿಗೆ ಪ್ರಶ್ನೆ ಎತ್ತುವ ಮೂಲಕ ಗಮನ ಸೆಳೆದಿದಿದ್ದಾರೆ. ಇದಕ್ಕಾಗಿ ಬೀದರ ಜಿಲ್ಲಾ ಸಂಘದ ವತಿಯಿಂದ ಸಂಸದರಿಗೆ ಹಾರ್ಧಿಕ ಅಭಿನಂದನೆ ಹಾಗೂ ಕೃತಜ್ಞತೆ ಸಲ್ಲಿಸುತ್ತೇವೆ.

ಇದಲ್ಲದೇ ಬೀದರ ಜಿಲ್ಲೆಯ ರೈಲ್ವೆ ಸಂಬಂಧಿಸಿದ ಇತರೆ ವಿಷಯಗಳಾದ:ಎನ್.ಚಿ.ಆರ್.ಬಿ. ವರದಿ ಪ್ರಕಾರ ಕಳೆದ ದಶಕದಲ್ಲಿ 2.6 ಲಕ್ಷಕ್ಕೂ ಹೆಚ್ಚು ಜನರು ರೈಲ್ವೆ ಅಪಘಾತಗಳಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ.ಈಸಮಸ್ಯೆಗೆ ತ್ವರಿತ ಪರಿಹಾರವಾಗಿ ಏಂ–ಗಿಂಅಉ ತಂತ್ರಜ್ಞಾನವನ್ನು ಎಲ್ಲೆಡೆ ಶೀಘ್ರಜಾರಿಗೆತರಬೇಕು. ಅಮೃತ ಭಾರತ ನಿಲ್ದಾಣ ಯೋಜನೆ ನಿಧಾನಗತಿಯಲ್ಲಿ ನಡೆಯುತ್ತಿದ್ದು ಇದನ್ನು ಶೀಘ್ರಗತಿಯಲ್ಲಿಮುನ್ನಡೆಸುವಂತೆ ಆಗ್ರಹಿಸಿದರು. ನನ್ನ ಕ್ಷೇತ್ರದ ಭಾಲ್ಕಿಮತ್ತು ಕಮಲನಗರ ರೈಲ್ವೆ ನಿಲ್ದಾಣಗಳನ್ನುಅಮೃತ ಭಾರತ ಯೋಜನೆಯಡಿ ಸೇರ್ಪಡಿಸಿ ಅಭಿವೃದ್ಧಿ ಪಡಿಸಬೇಕು.ಬೀದರ–ಬೆಂಗಳೂರು ರೈಲುಗಳಲ್ಲಿ ಜನಸಂದಣಿಹೆಚ್ಚಾಗುತ್ತಿದ್ದು,ಇನ್ನು ಹೆಚ್ಚುವರಿ 2 ಬೋಗಿಗಳನ್ನು ಸೇರಿಸಲು ಅವಕಾಶವಿದ್ದು, ಬೋಗಿಗಳನ್ನು ಸೇರಿಸಬೇಕು. ಬೀದರ ಕ್ಷೇತ್ರದವರನ್ನು ದೆಹಲಿಗೆ ಸಂಪರ್ಕ ಕಲ್ಪಿಸಲು ದಕ್ಷಿಣ ಎಕ್ಸಪ್ರೆಸ್ ರೈಲನ್ನು ಹೈದರಾಬಾದ್‌ನಿಂದ ಬೀದರ–ಕ್ಕೆ ವಿಸ್ತರಿಸಬೇಕು. ಬೀದರ–ಬೆಂಗಳೂರು ವಂದೇ ಭಾರತ ರೈಲು ಆರಂಭಿಸಬೇಕು. ತಾಂಡೂರು–ಜಹೀರಾಬಾದ ಹೊಸ ರೈಲು ಮಾರ್ಗವನ್ನು ಕ್ಷೇತ್ರದ ಚಿಂಚೋಳಿ ಮೂಲಕ ಸಾಗುವಂತೆ ಮಾಡಬೇಕು. ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾದ ಮಾಧ್ಯಮ ಕ್ಷೇತ್ರಕ್ಕೆ ನೀಡಲಾಗುತ್ತಿದ್ದ 50% ರಿಯಾಯಿತಿಯನ್ನು ಮರುಪ್ರಾರಂಭಿಸಬೇಕು. ರೈಲ್ವೆ ಸುರಕ್ಷತೆ,ಮೂಲಸೌಕರ್ಯಹಾಗೂ ಪ್ರಯಾಣಿಕರ ಅನುಕೂಲತೆಗಳ ಸುಧಾರಣೆಗೆಕೇಂದ್ರಸರ್ಕಾರವು ತ್ವರಿತ ಕ್ರಮಕ್ಕೈಗೊಳ್ಳಬೇಕೆಂದು ಒತ್ತಾಯಿಸಬೇಕೆಂದರು.

ಬೀದರ ಜಿಲ್ಲೆ ಬಗ್ಗೆ ಲೋಕಸಭೆಯಲ್ಲಿ ಪ್ರಸ್ತಾಪ ಮಾಡಿರುವ ಸಂಸದ ಸಾಗರ ಈಶ್ವರ ಖಂಡ್ರೆಅವರಿಗೆಮತ್ತೊಮ್ಮೆ ಬೀದರ ಜನತೆ ಹಾಗೂ ಸಮಸ್ತ ಪತ್ರಕರ್ತರ ಪರವಾಗಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರಸಂಘದಅಧ್ಯಕ್ಷರಾದ ವಿಜಯಕುಮಾರ ಪಾಟೀಲ ಹಾಗೂ ಪ್ರಧಾನ ಕಾರ್ಯದರ್ಶಿ ಶಶಿಕುಮಾರ ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ.

# ಮಹಿಳೆಯರಿಗೆ ಸಮಾನತೆ ನೀಡಿದ ಬಸವಾದಿ ಶಿವಶರಣರು



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 19 ನಗರದ ವಿದ್ಯಾಶ್ರೀ ಕಾಲೋನಿಯ ಹನುಮಾನ ಮಂದಿರದಲ್ಲಿ ವಿದ್ಯಾಶ್ರೀ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಹಮ್ಮಿಕೊಂಡ ಮಹಿಳಾ ದಿನಾಚರಣೆಯ ಕಾರ್ಯಕ್ರಮವನ್ನು ಖ್ಯಾತೇ ಸ್ತ್ರೀ ತಜ್ಞೆ ಡಾ.ಶಾಂತಾ ದುರ್ಗೆ ಉದ್ಘಾಟಿಸಿ ಮಾತನಾಡಿ ಮಹಿಳಾ ಸ್ವಾ ಲಂಬನೆ, ಸ್ತ್ರೀ ಸಮಾನತೆ ಸಾಮಾಜಿಕ ಕ್ರಾಂತಿ ಮಾಡಿದ ಶರಣ ನಾಡಿನಲ್ಲಿ ನಾವುಗಳು ಶರಣರ ನಡೆ ನುಡಿಗಳನ್ನುನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ನುಡಿದರು.

ಮುಖ್ಯ ಅತಿಥಿಯಾಗಿ ಡಾ. ಸ್ಮಿತಾ ಎಸ್ ಕಳ್ಳಿಗುಡ್ಡಿಯವರು ಮಾತನಾಡಿ ಮಹಿಳೆಯರು ಆರ್ಥಿಕ ಸ್ವಾಲಂಬನೆಯನ್ನು ಹೊಂದಬೇಕುತಮ್ಮಸೌಂದರ್ಯತೆಗೆ ಹೆಚ್ಚು ಒತ್ತು ನೀಡದೆ ನಿಮ್ಮ ಕಾರ್ಯ ಚಾಕಚಕ್ಕೇತೆ ಚಾಣಾಕ್ಷತೆ ಹಾಗೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ನುಡಿದರು. ಉಪನ್ಯಾಸಕಿ ಡಾ. ಶಿವಲೀಲಾ ಮಠಪತಿ ಮಾತನಾಡಿ ಕೌಟುಂಬಿಕ ಕಲಹದಿಂದ ಪ್ರಗತಿ ಕುಂಠಿತವಾಗಿದೆ. ಪರಿಸರದಲ್ಲಿ ಸ್ನೇಹ ಪ್ರೀತಿ ಇರಲಿ ಎಂದರು.

ಇದೇ ಸಂದರ್ಭದಲ್ಲಿ ಉಜ್ವಲ ನಿಷಿಕಾಂತ್ ಜೋಶಿಯವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಹಾಗೂ ವಿವಿಧ ಆಟೋಟಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟ್ ನ ಅಧ್ಯಕ್ಷ ಕೀರ್ತಿಲತಾ ಅಗ್ರೆ, ಡಾ. ಸ್ಮಿತಾ ಶ್ರೀನಿವಾಸ್ ಕಳ್ಳಿಗುಡ್ಡಿ, ಡಾ. ಭುವನೇಶ್ವರಿ ಖಂಡ್ರೆ. ಡಾ. ಜ್ಯೋತಿ ಖಂಡ್ರೆ. ಜ್ಯೋತಿ ಬೆಲ್ಲೆ. ಜೈಶ್ರೀ ಅನಿತಾ ಕಾಳಗಿ. ಕಾಶಮ್ಮ ಬಿರಾದಾರ. ಶೋಭಾ ಮಾಶೆಟ್ಟಿ. ಚಿನ್ನಮ್ಮ. ರಾಜೇಶ್ವರಿ ನಿಮಾಣೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದ ಶಾಸಕ ಚನ್ನಾರಡ್ಡಿ ಪಾಟೀಲ್.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ತಮ್ಮ ಕ್ಷೇತ್ರದ ಬಹುತೇಕ ಪ್ರಮುಖ ಮತ್ತು ಜ್ವಲಂತ ಸಮಸ್ಯೆಗಳ ಬಗ್ಗೆ ಸ್ಥಳಿಯ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಅಧಿವೇಶನದಲ್ಲಿ ಸಭಾಧ್ಯಕ್ಷರ ಮೂಲಕ ಸರ್ಕಾರ ಗಮನ ಸೆಳೆದರು.

ಯಾದಗಿರಿ ಮತಕ್ಷೇತ್ರದ ವಡಗೇರಾ ವ್ಯಾಪ್ತಿಯ ಕಂದಳ್ಳಿ, ಅರ್ಜುಣಗಿ, ಬಾಡಿಯಾಳ್, ಕುಮ್ಮನೂರ ಸೇರಿದಂತೆಯೇ ವಿವಿಧ ಹಳ್ಳಿಗಳಲ್ಲಿ ಕುಡಿಯುವ ನೀರಿನ ಭೀಕರ ಸಮಸ್ಯೆ ಆಗಿದ್ದು, ಕೂಡಲೇ ಆ ಎಲ್ಲ ಹಳ್ಳಿಗಳಿಗೆ ವ್ಯವಸ್ಥೆ ಮಾಡಬೇಕೆಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ತೆ–ಊಗರಿ ಬೆಳೆ ಹಾನಿಗಿಡಾಗಿದ್ದು, ಈ ನಿಟ್ಟಿನಲ್ಲಿ 368 ರೈತರು ಇನ್ಸೂರೇಶನ್ ಮಾಡಿಸಿದ್ದು, ಸರ್ಕಾರ ತನ್ನ ಪಾಲಿನ ಶೇ 2 ರಷ್ಟು ಕಟ್ಟಿದರೇ ಹಾನಿಯಿಂದ ಆದ ಪರಿಹಾರ ದೊರೆ–ಯುತ್ತದೆ. ಕೂಡಲೇ ಹಣ ಪಾವತಿಸಬೇಕೆಂದು ಶಾಸಕರು ಆಗ್ರಹಿಸಿದರು.

ಜಿಲ್ಲೆಯಲ್ಲಿನ ಸರ್ಕಾರಿ ಶಾಲೆಗಳಿಗೆ ದೈಹಿಕ ಶಿಕ್ಷಕರ ನೇಮಕ ಮಾಡಿಕೊಳ್ಳಬೇಕು. ಇದರಿಂದ ಮಕ್ಕಳಿಗೆ ಪಠ್ಯದ ಜೊತೆ ಕ್ರೀಡೆಗಳಲ್ಲೂ ತಮ್ಮ ಸಾಧನೆ ತೊರಿಸಲು ಸಾಧ್ಯವಾಗುತ್ತದೆ ಎಂದು ವಿವರಿಸಿದರು.

ಯಾದಗಿರಿ ಜಿಲ್ಲೆಯಾಗಿ 14 ವರ್ಷಗಳು ಕಳೆದರೂ ಇನ್ನೂ ಉನ್ನತ ವ್ಯಾಸಂಗದ ಕೊರ್ಸಗಳು ಮತ್ತು ಕಾಲೇಜುಗಳು ಸ್ಥಾಪನೆ ಆಗಿಲ್ಲ, ಕಾರಣ ಜಿಲ್ಲೆಗೆ ಇಂಜಿನಿಯರಿಂಗ,ಆಯುರ್ವೇದ, ಹೋಮಿಯೋಪತಿಕ್ ಕಾಲೇಜುಗಳು ಆರಂಭಿಸುವ ಮೂಲಕ ವಿದ್ಯಾರ್ಥಿಗಳಿಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚಿನ ಶಿಕ್ಷಣ ಪಡೆಯುವ ವ್ಯವಸ್ಥೆ ಮಾಡಬೇಕೆಂದು ಶಾಸಕ ತುನ್ನೂರು ಒತ್ತಾಯಿಸಿದರು.

ಬಹುದಿನಗಳ ಬೇಡಿಕೆಯಾದ ತಮ್ಮ ಮತಕ್ಷೇತ್ರದ ದೊರನಹಳ್ಳಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೆ ಏರಿಸಬೇಕು. ಈ ಹಿಂದೆಯೇ ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಿದಾಗ ಅದು ವಿವಿದ ಕಾರಣಗಳಿಂದ ವಾಪಸ್ ಬಂದಿದೆ. ಆದರೇ ಈಗ ಅಲ್ಲಿ 20 ಸಾವಿರಕ್ಕೂ ಅಧಿಕ ಜನಸಂಖ್ಯೆ ಇದ್ದು, ಪಟ್ಟಣ ಪಂಚಾಯಿತಿ ಆಗಲು ಎಲ್ಲ ಅರ್ಹತೆ ಹೊಂದಿದ್ದು, ಕೂಡಲೇ ಈ ಬೇಡಿಕೆ ಈಡೆರೀಸಬೇಕೆಂದು ಶಾಸಕ ಚನ್ನಾರಡ್ಡಿ ಒತ್ತಾಯಿಸಿದರು.

CITATION

IN THE COURT OF THE PRL, CIVIL JUDGE AND JMFC HUMNABAD AT HUMNABAD

CRL MISC NO.40/2025

PETITIONERS:-

1. Mastan Miyan S/o Nabi Sab Age. 41
2. Sayyad Ali S/o Nabi Sab Age. 56
3. Munwar S/o Nabi Sab Sayyad Age. 48
4. Chand Pasha S/0 Nabi Sab Age. 71
5. Shareef bee D/o Nabi Sab Age. 40

All R/o Hudgi village Tq. Humnabad, Dist: Bidar

RESPONDENT:-

The Registrar of Birth and Death-through the Tahasildar, Humnabad.

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate of of petitioner No.1 and father of petitioners No.2 to 4 namely, LATE Nabi Sab S/o Phatru sab died on 08.02.2003 at Hudgi village. Tq. Humnabad. The petitioners claiming the death certificate of deceased Mastan for transfer of property and other official purpose and home record.

Therefore it is hereby proclaimed that if any person or persons have got any objection in this regard he/they may approach to this Honorable court on 16.04.2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this 11th day of March-2025

Sd/-
Chief Ministerial Officer.
Prl. Civil Judge and JMFC
Court Humnabad

# ಕಾರ್ಮಿಕ ಇಲಾಖೆಯಿಂದ ಆಹಾರಧಾನ್ಯ ಕಿಟ್ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.19 –ಕಾರ್ಮಿಕ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಬಾಲಕಾರ್ಮಿಕತೆಯಿಂದ ಬಿಡುಗಡೆಗೊಳಿಸಿ ಪುನರ್ವಸತಿ ಕಲ್ಪಿಸಲಾದ ಎಸ್.ಸಿ/ಎಸ್.ಟಿ ಮಕ್ಕಳಿಗೆ ಎಸ್.ಸಿ.ಎಸ್.ಪಿಮತ್ತು ಟಿ.ಎಸ್.ಪಿಉಪಯೋಜನೆಯಡಿ ಶೈಕ್ಷಣಿಕ ಮತ್ತು ಆಹಾರಧಾನ್ಯ ಕಿಟ್‌ಗಳನ್ನು ಬುಧವಾರ ವಿತರಿಸಲಾಯಿತು.

ಜಿಲ್ಲಾ ಬಾಲಕಾರ್ಮಿಕ ಯೋಜನೆ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಮಾತನಾಡಿ, ಮಕ್ಕಳಿಗೆ ಕಿಟ್‌ಗಳನ್ನುಸರಿಯಾಗಿ ಬಳಸಿಕೊಳ್ಳಬೇಕು.

ಪ್ರತಿನಿತ್ಯ ಮಕ್ಕಳನ್ನು ಶಾಲೆಗೆ ಕಳುಹಿಸಬೇಕು ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ ಎಂದು ಪಾಲಕರಿಗೆ ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರಿನ 1ನೇ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಹ್ಮದ್ ಉಮರ್ ಅಬ್ದುಲ್, ರಾಯಚೂರಿನ 2ನೇ ವೃತ್ತದ ಕಾರ್ಮಿಕ ನಿರೀಕ್ಷಕರಾದ ಕು.ಪ್ರಿಯಾಂಕ ಸೇರಿದಂತೆ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಇದ್ದರು.

# ಕೆಂಭಾವಿ ಪಟ್ಟಣದಲ್ಲಿ ಶ್ರೀ ಶ್ರೀ ಶರಣಬಸವೇಶ್ವರ ಅದ್ದೂರಿ ರಥೋತ್ಸವ



ನಮಗೆ ದೊರಕಿದ ದೈವಿಕ ಅನುಗ್ರಹ

ಈ ರಥೋತ್ಸವವು ಕೆಂಭಾವಿ ಪಟ್ಟಣದ ಇತಿಹಾಸದಲ್ಲಿ ನೆನೆಸಿಕೊಳ್ಳುವ ಹಬ್ಬವಾಗಿ ಪರಿಣಮಿಸಿತ್ತು. ಶ್ರೀ ಶರಣಬಸವೇಶ್ವರ ಆಶೀರ್ವಾದ ಪಡೆದುಕೊಂಡು ಧನ್ಯರಾದ ಕೆಂಭಾವಿ ಜನತೆ.!

ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ,19 ಮಾರ್ಚ್ 2025 – ಕೆಂಭಾವಿ ಪಟ್ಟಣದ ಶ್ರೀ ಶ್ರೀ ಶರಣಬಸವೇಶ್ವರ ದೇವಸ್ಥಾನದಲ್ಲಿ ಇದೇ ವರ್ಷವೂ ಅದ್ದೂರಿಯಾಗಿ ಹಮ್ಮಿಕೊಂಡ ರಥೋತ್ಸವವು ಅದ್ಭುತವಾಗಿ ನಡೆಯಿತು. ಈ ರಥೋತ್ಸವದಲ್ಲಿ ಭಾಗವಹಿಸಿದ ಭಕ್ತರು ತಮ್ಮ ಆಧ್ಯಾತ್ಮಿಕ ಅನುಭವವನ್ನು ಹಂಚಿಕೊಂಡು, ಶರಣಬಸವೇಶ್ವರನ ಅನುಗ್ರಹದಿಂದ ತಮ್ಮ ಜೀವನವನ್ನು ಧಾರ್ಮಿಕವಾಗಿ ನವೀಕರಿಸಿಕೊಂಡರು. ವೀರೇಶ್ ಟಕ್ಕಳಕಿ ಅವರು "ಈ ರಥೋತ್ಸವವು ನಮ್ಮ ಕೆಂಭಾವಿ ಪಟ್ಟಣದ ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯ ಪ್ರತಿಬಿಂಬವಾಗಿದೆ. ಶರಣಬಸವೇಶ್ವರನ ಮಹತ್ವವನ್ನು ಗುರುತಿಸುವ ಈ ರಥೋತ್ಸವವು ಪ್ರತಿಯೊಂದು ಭಾಗದಲ್ಲಿ ಭಕ್ತರ ಹೃದಯಗಳನ್ನು ಸ್ಪರ್ಶಿಸುವಂತೆ ಆಗಿರುತ್ತದೆ. ಈ ಸಮಾರಂಭವು ಕೇವಲ ಧಾರ್ಮಿಕ ಆಚರಣೆಗಷ್ಟೇ ಸೀಮಿತವಲ್ಲ, ಇದು ಸಮಾಜದ ವಿವಿಧ ವರ್ಗಗಳನ್ನು ಒಂದಾಗಿ ಕಟ್ಟಿ ಹಾಕುತ್ತದೆ. ಇದರಿಂದ ನಮಗೆ ನೈತಿಕ ಹಾಗೂ ಆಧ್ಯಾತ್ಮಿಕ ಶಕ್ತಿಯ ಅನ್ವೇಷಣೆಯ ಅವಕಾಶ ಸಿಗುತ್ತದೆ." "ಶ್ರೀ ಶರಣಬಸವೇಶ್ವರನ ಆಶೀರ್ವಾದದಿಂದ, ಇಲ್ಲಿ ನಡೆಯುವ ಪ್ರತಿಯೊಂದು ಆಚಾರವು ಶಕ್ತಿಶಾಲಿಯ ಹಾಗೂ ಪವಿತ್ರವಾಗಿದೆ. ಈ ರಥೋತ್ಸವವು ವಿವಿಧ ಕೃತಿಗಳ ಮೂಲಕ ಪ್ರಾಚೀನ ಶರಣಬಸವೇಶ್ವರ ಪರಂಪರೆಯನ್ನು ಮುಂದುವರೆಸಲು ಸಹಾಯ ಮಾಡುತ್ತದೆ. ನಾವೆಲ್ಲರೂ ಅವರ ತತ್ವಗಳನ್ನು ಪಾಲಿಸಿ, ನಮ್ಮ ಜೀವನವನ್ನು ಉನ್ನತ ಮಟ್ಟಕ್ಕೆ ತಲುಪಿಸೋಣ."

ಪೂಜಾ ವಿಧಿಗಳು ಮತ್ತು ಭಕ್ತರ ಸ್ಪಂದನೆ: "ಈ ವರ್ಷದ ರಥೋತ್ಸವವು ವಿಶೇಷವಾಗಿ ತುಂಬಾ ಜ್ಞಾನಮಯ ಹಾಗೂ ಪ್ರಗತಿಪರವಾಗಿದೆ. ನಮ್ಮ ದೇವಾಲಯದಲ್ಲಿ ನಡೆದ ಪ್ರತಿಯೊಂದು ಕಾರ್ಯಕ್ರಮವು ಭಕ್ತರಿಗೆ ಆಧ್ಯಾತ್ಮಿಕ ಅನುಭವ ನೀಡಿದೆ. ಕಳೆದ ಕೆಲವು ದಿನಗಳಲ್ಲಿ ನಾವು ನೋಡಿದ ಭಕ್ತರ ಉತ್ಸಾಹ, ಪರಿಶ್ರಮ ಮತ್ತು ಶ್ರದ್ಧೆ ನಮ್ಮ ನಂಬಿಕೆಯನ್ನು ಮತ್ತಷ್ಟು ಬಲಪಡಿಸಿದೆ."

ಸಾಂಸ್ಕೃತಿಕ ವೈಭವ ಮತ್ತು ಹಮ್ಮುವ ಕಾರ್ಯಕ್ರಮಗಳು:

"ಹೀಗೆ ಧಾರ್ಮಿಕ ಆಚಾರ–ವಿಚಾರಗಳನ್ನು ಆಚರಿಸುವುದರ ಜೊತೆಗೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಸಹ ಪ್ರೇರಣಾ ದಾಯಕವಾಗಿವೆ. ಕವಿತೆಗಳು, ನೃತ್ಯ, ಭಜನೆ ಪ್ರವಚನ ಹಾಗೂ ವಿವಿಧ ಕಲೆಗಳು ಕೆಂಭಾವಿಯಲ್ಲಿ ಒಂದು ಹೊಸ ಆಧ್ಯಾತ್ಮಿಕ ಹಬ್ಬವನ್ನು ಆರಂಭಿಸಿವೆ."

ಕೋನಕೋನದಲ್ಲಿನ ಭಕ್ತರ ಪ್ರತಿಕ್ರಿಯೆಗಳು:

"ನಾವು ಈ ಸಮಾರಂಭದಲ್ಲಿ ಪಾಲ್ಗೊಂಡು, ದೇವರ ಆಶೀರ್ವಾದವನ್ನು ಪಡೆದು ಹೊರಟಿದ್ದೇವೆ. ಕೆಂಭಾವಿ ಪಟ್ಟಣದಲ್ಲಿ ನಡೆಯುವ ಈ ರಥೋತ್ಸವವು ನಮ್ಮಲ್ಲಿರುವ ಆತ್ಮಶಕ್ತಿ ಹಾಗೂ ಪವಿತ್ರತೆಯನ್ನು ಬೆಳಗಿಸಿದೆ" ಎಂದು ಹಲವು ಭಕ್ತರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ. "ಈ ರಥೋತ್ಸವದ ಸವಾಲುಗಳನ್ನು ಸರಿಯಾಗಿ ನಿಭಾಯಿಸಿ, ದೇವಾಲಯದ ವತಿಯಿಂದ ಭಕ್ತರಿಗೆ ಉತ್ತಮ ಅನುಭವ ನೀಡಲು ನಾವು ಸದಾ ಸಿದ್ಧರಾಗಿದ್ದೇವೆ. ನಮ್ಮ ಸಮಿತಿ ಈ ರಥೋತ್ಸವವನ್ನು ಪೂರ್ಣವಾಗಿ ಯಶಸ್ವಿಯಾಗಿ ಆಯೋಜಿಸಲು ಶ್ರಮಿಸುತ್ತಿದೆ" ಎಂದು ದೇವಸ್ಥಾನದ ಕಮಿಟಿಯ ಪ್ರಮುಖರು ಮಲ್ಲಮ್ಮನುಡಿ ಪತ್ರಿಕೆಗೆ ತಿಳಿಸಿದರು. ಮುಂದುವರಿಯುವ ಧಾರ್ಮಿಕ ಕಾರ್ಯಕ್ರಮಗಳು:

ಈ ರಥೋತ್ಸವವನ್ನು ಯಶಸ್ವಿ ಆಯಿತು. ಇದು ಎಲ್ಲಾ ಭಕ್ತರಿಗೆ ಆಧ್ಯಾತ್ಮಿಕ ಶಾಂತಿ ಮತ್ತು ಸಂತೋಷವನ್ನು ತರಲಿ" ಎಂದು ವೀರೇಶ್ ಟಕ್ಕಳಕಿಯವರು ತಮ್ಮ ಮಾತುಗಳನ್ನು ಕೊನೆಗೊಮ್ಮಲು ನೀಡಿದ್ದಾರೆ.

# ಬೀದರನಲ್ಲಿ ಜರುಗಿದ ಶೃಂಗೇರಿ ಮಠದ ಭೂಮಿ ಪೂಜೆ







ಮಲ್ಲಮ್ಮನುಡಿವಾರ್ತೆ ಬೀದರ. ಮಾ.19 : ಶಂಕರಾಚಾರ್ಯರು ಸನಾತನ ಧರ್ಮದ ಸಂರಕ್ಷಣೆ ಸಂವರ್ಧನೆ ಕಾರ್ಯಕೈಗೊಂಡ ಯೋಗಿಗಳಲ್ಲಿ ಅಗ್ರಗಣ್ಯರಾಗಿದ್ದಾರೆ. ಇವರ ಜೀವನ ಇದಕ್ಕಾಗಿ ಸಮರ್ಪಿತ ಜೀವನವಾಗಿದೆ. ಕ್ರಿ.ಶ. 7 ಮತ್ತು 8ನೇ ಶತಮಾನದಲ್ಲಿ ಹಿಂದು ಧರ್ಮದಲ್ಲಿ ವಿಪ್ಲವ ಘಟಿಸಿದಾಗ ಅದರ ನಿವಾರಣೆಗಾಗಿ ಅವತರಿಸಿ ಬಂದ ದೇವಸ್ವರೂಪಿ ಇವರಾಗಿದ್ದಾರೆ. ಅವರು ಕೇವಲ 32 ವರ್ಷ ಬದುಕಿದ್ದರೂ ಮೂರು ಸಲ ಭಾರತ ಪರ್ಯಟನೆ ಮಾಡಿದ್ದಾರೆ. ಭಾರತದ ನಾಲ್ಕೂ ದಿಕ್ಕುಗಳಲ್ಲಿ ಪೀಠ ಸ್ಥಾಪಿಸಿ, ಧರ್ಮ ಸಂರಕ್ಷಣೆ ಗೈದಿದ್ದಾರೆ ಎಂದು ಶೃಂಗೇರಿ ಶಾರದ ಪೀಠಾಧೀಶರಾದ ವಿದುಶೇಖರ ಸ್ವಾಮಿ ಹೇಳಿದರು. ಅವರು ಬೀದರನ ರಾಂಪೂರೆ ಕಾಲೋನಿಯಲ್ಲಿರುವ ಸತ್ಯನಾರಾಯಣ ಮಂದಿರದಲ್ಲಿ ಜರುಗಿದ ಶೃಂಗೇರಿಯ ಸನಾತನ ಧರ್ಮ ವಿಜಯ ಯಾತ್ರಾ ಹಾಗೂ ಶೃಂಗೇರಿ ಶಾಖಾ ಪೀಠದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಹೇಳಿದರು. ಮುಂದುವರೆದು, ಶಂಕರಾಚಾರ್ಯರು ಗೈದ ಧರ್ಮಕಾರ್ಯ ಚೇತೋಹಾರಿಯಾಗಿದೆ. ಸನಾತನ ಧರ್ಮಕ್ಕೆಸ್ಪೂರ್ತಿದಾಯಕವಾಗಿದೆ. ಸನಾತನ ಶಕ್ತಿ ಮತ್ತು ಅದರ ವೈಭವ ಜನಮಾನಸದಲ್ಲಿ ಅಚ್ಚಳಿಯದಂತೆ ಉಳಿಯಲು ಛಾಪು ಮೂಡಿಸಿದ್ದಾರೆ. ಅವರು ಸ್ಥಾಪಿಸಿದ 4 ಪೀಠಗಳು ಸನ್ಯಾಸತ್ವದ ಗುರುಪರಂಪರೆಯಿಂದ ಕೂಡಿದ್ದಾಗಿವೆ. ಭಾರತದ ಸನಾತನ ಧರ್ಮದ ಅಳವಡಿಕೆಗೆ ಬೆಳವಣಿಗೆಗೆ ಬೇಕಾಗುವ ಮಾರ್ಗೋಪಾಯಗಳು ಈ ಪೀಠಗಳು ನಿರಂತರ ಮಾಡುತ್ತಾ ಬಂದಿವೆ. ಶೃಂಗೇರಿ ಶಾರದಾ ಪೀಠದ 36ನೇ ಆಚಾರ್ಯರಾದ ಭಾರತಿ ತೀರ್ಥ ಶ್ರೀಗಳು ಈ ಆಚಾರ್ಯ ಪೀಠಕ್ಕೆ ತಮ್ಮ ಮಾನವೀಯ ಕಾರ್ಯಗಳಿಂದಾಗಿ ಘನತೆ ತಂದವರಾಗಿದ್ದಾರೆ. ಅವರು ಈ ಹಿಂದೆ ಬೀದರಕ್ಕೂ ಬಂದು ಹೋಗಿದ್ದಾರೆ. ಅವರ ಪ್ರಭಾವದಿಂದಾಗಿಯೇ ಇಲ್ಲಿನವರು ಇಲ್ಲಿ ಶೃಂಗೇರಿ ಪೀಠದ ಶಾಖೆ ಪ್ರತಿಷ್ಠಾಪನೆಗೆ ಒಲವು ತೋರಿದ್ದಾರೆ. ಅವರೆಲ್ಲರ ಇಚ್ಛೆಯಂತೆ ಇಲ್ಲೀಗ ಶೃಂಗೇರಿ ಪೀಠದ ಮಂದಿರಕ್ಕೆ ಶಿಲನ್ಯಾಸವಾಗುತ್ತಿದೆ. ಇದಕ್ಕೆ ಕೈ ಜೋಡಿಸಿದ ಬೀದರನ ಸಜ್ಜನರ ಸನಾತನ ಶೃದ್ಧಾಳುಗಳ ಕಾರ್ಯಕ್ಕೆ ಶಾರದಾ ಪೀಠ ಸಂತುಷ್ಟವಾಗಿದೆ. ಬೀದರನಲ್ಲಿ ಬರುವ ದಿನಗಳಲ್ಲಿ ಇಲ್ಲಿ ಶಂಕರಾಚಾರ್ಯರ ಮತ್ತು ಶಾರದಾಮಾತೆಯ ಮಂದಿರಗಳು ಸ್ಥಾಪನೆಗೊಂಡು, ಇಲ್ಲೂ ಶಾರದಾ ಪೀಠದ ಧರ್ಮ ಕಾರ್ಯಗಳು ಆರಂಭವಾಗಲಿವೆ. ಶಾರದಾ ಪೀಠದ ಯತಿವರಣ್ಯರು, ಆಚಾರ್ಯರು ಮೇಲಿಂದ ಮೇಲೆ ಇಲ್ಲಿಗೆ ಆಗಮಿಸಿ, ಇಲ್ಲಿನ ಶೃದ್ಧಾಳುಗಳನ್ನು ಉದ್ಧರಿಸುವ ಕಾರ್ಯ ಮುಂದೆ ನಿರಂತರ ಮಾಡಲಿದ್ದಾರೆ. ಭವಿಷ್ಯದಲ್ಲಿ ಬೀದರನ ಈ ಕ್ಷೇತ್ರ ಸನಾತನ ಧರ್ಮದ ಮಹಾನ್ ಶಕ್ತಿ ಕ್ಷೇತ್ರವಾಗಿ ಕಂಗೊಳಿಸಲಿದೆ ಎಂದರು. ಶಂಕರಾಚಾರ್ಯರ ಬೋಧೆಗಳು ಜೀವನ ಉದ್ಧರಿಸುವ ಬೋಧೆಗಳಾಗಿವೆ. ಶಂಕರಾಚಾರ್ಯರ ಅನುಯಾಯಿಗಳು ಸನಾತನ ಧರ್ಮದಂತೆ ಜೀವನ ಸಾಗಿಸುವುದರಿಂದ ಸತ್ಕಾರ್ಯಗಳು, ಸದ್ವಿಚಾರಗಳು ಇಲ್ಲಿ ಹೆಚ್ಚಾಗಲಿವೆ. ಮಂಗಲ ಕಾರ್ಯಗಳು ಇಲ್ಲಿ ನಿತ್ಯ ನಡೆಯಲಿವೆ. ಶಂಕರಾಚಾರ್ಯರು ಹಲವಾರು ಗ್ರಂಥಗಳನ್ನು ರಚಿಸಿದ್ದಾರೆ. ಅದರಲ್ಲಿ ಮನುಷ್ಯನ ಯಶಸ್ವಿ ಜೀವನಕ್ಕೆ ಅನುಸರಿಸಬೇಕಾದ ಮಾರ್ಗೋಪಾಯಗಳನ್ನು ಹೇಳಿದ್ದಾರೆ. ಅವನ್ನು ಪಾಲನೆ ಮಾಡುವುದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ. ಜೀವನ ಸಾರ್ಥಕವಾಗುತ್ತದೆ ಎಂದರು. ಶಂಕರಾಚಾರ್ಯರು ಸ್ಥಾಪಿಸಿದ ಈ ನಾಲ್ಕು ಆಮ್ನಾಯ ಪೀಠಗಳ ಮೂಲ ಉದ್ದೇಶ ಸನಾತನ ಧರ್ಮಜಾಗೃತಿ ಧರ್ಮಪಾಲನೆಯಾಗಿದೆ. ಈ ಪೀಠದ ಕಾರ್ಯಗಳು ವೇದೋಕ್ತ, ಶಾಸ್ತ್ರೋಪ್ತವಾಗಿ ನಡೆಯುತ್ತವೆ. ಅವು ಜನರಲ್ಲಿ ಸನಾತನ ಧರ್ಮದ ತಿರುಳನ್ನು ಹಾಸುಹೊಕ್ಕಾಗಿಸುತ್ತವೆ ಎಂದರು. ಮಾನವನ ಮೂಲ ಆಶಯ ಸುಖ, ಪುಣ್ಯಪ್ರಾಪ್ತಿ, ಜೀವನ್ಮುಕ್ತತೆಯೇ ಆಗಿದೆ. ಶಂಕರಾಚಾರ್ಯರ ಪೀಠಗಳು ಒಳ್ಳೆಯ ಜೀವನಕ್ಕಾಗಿ ಒಳ್ಳೆಯ ಮಾರ್ಗ ತೋರುತ್ತವೆ. ಈ ಪೀಠಗಳ ಆಚಾರ್ಯರ ಸಂಪರ್ಕಕ್ಕೆ ಬಂದವರು ತಾವಾಗಿಯೇ ಬದಲಾಗಿ, ಶಾಸ್ತ್ರೋಕ್ತ, ಪ್ರಾಮಾಣಿಕ ಹಾಗೂ ಸೇವಾಜೀವನ ಅನುಸರಿಸುತ್ತಾರೆ. ಇವತ್ತು ಕೆಲವರು ಒಳ್ಳೆಯ ಕಾರ್ಯಗಳಲ್ಲಿ ಕುತರ್ಕ ಮಾಡುವವರು ವಿಘ್ನತಾರುವವರು ಇರುತ್ತಿದ್ದಾರೆ. ಇವರಿಂದ ಎಚ್ಚರಿಕೆಯಿಂದಿರಬೇಕು ಎಂದರು. ದೇವರು ಎಲ್ಲರಿಗೂ ಒಂದೊಂದು ಸಾಮರ್ಥ್ಯ ಕೊಟ್ಟಿರುತ್ತಾನೆ. ಆ ಸಾಮರ್ಥ್ಯ ಸದ್ಬಳಕೆ ಮಾಡಿಕೊಂಡು, ಸಾತ್ವಿಕ ಕಾರ್ಯಗಳಿಗೆ ವಿನಿಯೋಗಿಸಬೇಕು. ಅದಕ್ಕೆ ದೇವರ ಬಲ ರಕ್ಷೆ ಕೂಡ ಇರುತ್ತದೆ. ಶಾರದಾ ಪೀಠದ ಈ ಸ್ಥಾಪನೆಗೆ ಭೂಮಿ ನೀಡಿದ ಪ್ರಭು ಮೈಲಾಪೂರ ಅವರ ಕಾರ್ಯ ಶಾರದಾ ಪೀಠಕ್ಕೆ ಮೆಚ್ಚುಗೆಯ ಕಾರ್ಯವಾಗಿದೆ. ಇವರ ತ್ಯಾಗ ಸೇವೆ ಮಾದರಿಯಾಗಿದೆ. ಈ ಕಾರ್ಯಕ್ಕೆ ಕೈಜೋಡಿಸಿದ ಎಲ್ಲರಿಗೂ ಶಾರದಾಂಬೆಯ ಕೃಪೆ ಪ್ರಾಪ್ತಿಯಾಗಲಿದೆ ಎಂದರು.

ನಾವು ಒಳ್ಳೆಯ ಇಚ್ಛೆಗಳನ್ನು ಇಟ್ಟುಕೊಂಡರೆ ಅದರಿಂದೇನೂ ಪ್ರಯೋಜನವಿಲ್ಲ. ಒಳ್ಳೆಯ ಇಚ್ಛೆಯ ಜೊತೆ ಒಳ್ಳೆಯ ಕಾರ್ಯಗಳನ್ನು ಮಾಡುತ್ತಿರಬೇಕು. ವಿದ್ಯಾರ್ಥಿ ತನ್ನ ಪರೀಕ್ಷೆಯಲ್ಲಿ ಒಳ್ಳೆಯ ರೀತಿಯಿಂದ ಪಾಸಾಗಬೇಕಾದರೆ ಆತನಿಗೆ ಸೆಲೆಬಸ್‌ನ ಅರಿವಿರಬೇಕು ಮತ್ತು ಆತನ ಹಿಂದೆ ದಕ್ಷ ಶಿಕ್ಷಕನಿರಬೇಕಾಗುತ್ತದೆ. ಹಾಗೆಯೇ ಮನುಷ್ಯನು ತನ್ನ ಜೀವನದ ಪರೀಕ್ಷೆಗಳಲ್ಲೂ ಪಾಸಾಗಬೇಕಾದರೆ ಒಳ್ಳೆಯ ಮಾರ್ಗೋಪಾಯಗಳು ಹೇಳುವ ಮಾರ್ಗದರ್ಶಕ ಗುರುಗಳು ಬೇಕಾಗುತ್ತಾರೆ. ಆಗಲೇ ಜೀವನದಲ್ಲಿ ಯಶಸ್ಸು ಸಾಧ್ಯವಾಗುತ್ತದೆ. ಈ ಕೆಲಸ ಶಂಕರಾಚಾರ್ಯರ ಪೀಠಾಚಾರ್ಯರು ತಮ್ಮ ಅನುಯಾಯಿಗಳಿಗಾಗಿ ನಿರಂತರ ಮಾಡುತ್ತಾ ಬರುತ್ತಿದ್ದಾರೆ. ಬೀದರನಲ್ಲಿ ಈ ಪೀಠದ ಸ್ಥಾಪನೆಯಿಂದಾಗಿ ಇಲ್ಲಿ ಶಾಸ್ತ್ರೋಕ್ತ, ವೇದೋಕ್ತ ಸನಾತನಧರ್ಮ ಪಾಲಿಸುವವರ ಶೃದ್ಧಾಳುಗಳ ಸಂಖ್ಯೆ ಹೆಚ್ಚಾಗಲಿದ್ದು, ಇಲ್ಲಿನವರ ಮಾನಸಿಕ, ಬೌದ್ಧಿಕ ಹಾಗೂ ಭೌತಿಕ ಅಭಿವೃದ್ಧಿಗೆ ಇದು ಕಾರಣವಾಗುತ್ತದೆ ಎಂದರು. ಸನಾತನ ಧರ್ಮದ ಅಪಪ್ರಚಾರದ ಹಿಂದೆ ಅಜ್ಞಾನ ಸ್ವಾರ್ಥ ಮತ್ತು ದುರುದ್ದೇಶಗಳಿರುತ್ತವೆ. ಅದನ್ನು ಅರ್ಥ ಮಾಡಿಕೊಳ್ಳಬೇಕು. ಗುರುಗಳಾದವರು ಜಗದ್ಗುರುಗಳಾದವರು ಒಳ್ಳೆ ಕಾರ್ಯಗಳ ಬೋಧೆ ಮಾಡಬೇಕು ಹಾಗೂ ಅದರಂತೆ ನಡೆಯಬೇಕಾದುದು ಅವಶ್ಯಕವಾಗಿರುತ್ತದೆ ಎನ್ನುವುದನ್ನು ಎಲ್ಲರೂ ಅರಿಯಬೇಕು ಎಂದರು. ಸನಾತನ ಧರ್ಮದ ಪಾಲನೆಯಿಂದಾಗಿ ಭಾರತದ ಅಭಿವೃದ್ಧಿ ಹಾಗೂ ವಿಶ್ವದ ಅಭಿವೃದ್ಧಿಯಾಗಲಿದೆ. ಇದು ಎಲ್ಲರ ಒಳಿತನ್ನು ಬಯಸುವ ಧರ್ಮವಾಗಿದೆ. ಇದು ಮನುಷ್ಯನಲ್ಲಿ ಅಸುರ ಶಕ್ತಿ ನಾಶಗೊಳಿಸಿ, ದೇವಶಕ್ತಿ ಪ್ರತಿಷ್ಠಾಪಿಸುತ್ತದೆ ಎಂದರು. ಪ್ರಸಕ್ತ ದಿನಮಾನದಲ್ಲಿ ಸನಾತನ ಧರ್ಮದ ಸುವರ್ಣಕಾಲ ತರಲೋಸುಗ ಸನಾತನ ಧರ್ಮ ವಿಜಯಯಾತ್ರೆ ರಾಜ್ಯಾದ್ಯಂತ ಶಾರದಾ ಪೀಠದಿಂದ ಆರಂಭಿಸಲಾಗಿದೆ. ಸನಾತನ ಶಕ್ತಿಗೆ ನಾವೆಲ್ಲ ಹೆಮ್ಮೆಪಟ್ಟುಕೊಂಡು, ಕಂಕಣ ಬದ್ಧರಾಗಬೇಕು. ಇದಕ್ಕಾಗಿ ಬದ್ಧತೆಯಿಂದ ಶ್ರಮಿಸಬೇಕು. ತಾವು ಈ ಅಭಿಯಾನದಲ್ಲಿ ಭಾಗಿಯಾಗಬೇಕು ಮತ್ತು ತಮ್ಮ ಸಂಪರ್ಕದವರಿಗೂ ಭಾಗಿಯಾಗಿಸಬೇಕು. ಇದರಲ್ಲಿ ಎಲ್ಲರ ಶ್ರೇಯವೂ ಅಡಗಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಸ್ತಾವಿಕವಾಗಿ ಮಾತನಾಡಿದ ಸತ್ಯನಾರಾಯಣ ಮಂದಿರದ ಪ್ರಧಾನ ಅರ್ಚಕರಾದ ಶ್ರೀ ನರಸಿಂಹ ದಿಕ್ಷಿತರು ಮಾತಾಡುತ್ತಾ ಬೀದರ ಪುರಾಣೇತಿಹಾಸಿಕ ಕಾಲದಿಂದಲೂ ದೇವಭೂಮಿಯಾಗಿದೆ. ಇಲ್ಲಿ ಬಹಳಷ್ಟು ಯೋಗಿಪುರುಷರು, ಸಂತ ಮಹಾಂತರು ಆಗಿ ಹೋಗಿದ್ದಾರೆ. ಸಾಕ್ಷಾತ್ ಪಂಢರಪೂರದ ವಿಠಲನೇ ಬೀದರಗೆ ಬಂದು, ತನ್ನ ಶಿಷ್ಯ ದಾಮೋಧರ ಪಂತ್‌ಗೆ ರಕ್ಷಣೆ ಗೈದಿದ್ದಾರೆ. ದತ್ತಾತ್ರೇಯ ಚತುರ್ಥ ಅವತಾರರಾದ ಮಾಣಿಕಪ್ರಭುಗಳು ಬೀದರನಲ್ಲಿ ವಿಶ್ವರೂಪ ದರ್ಶನ ಗೈದಿದ್ದಾರೆ. ಇಲ್ಲಿನ ನರಸಿಂಹಕ್ಷೇತ್ರ ಪಾಪನಾಶಕ್ಷೇತ್ರ ಕ್ಷೇತ್ರಗಳಿಗೆ ದೈವಿಕ ಹಿನ್ನೆಲೆ ಇದೆ. ಗುರುನಾನಕರು ಕೂಡ ಬೀದರನಲ್ಲಿ ನೆಲೆಸಿ ಹೋಗಿದ್ದಾರೆ. ಇದು ಸೌಹಾರ್ದತೆಗೆ ಹೆಸರಾದ ನೆಲವಾಗಿದೆ. ಹಿಂದು ಧರ್ಮದ ಕಾರ್ಯದಲ್ಲಿ ಬಹುದೊಡ್ಡ ಪಾತ್ರ ವಹಿಸುತ್ತಿರುವ ಈ ಶೃಂಗೇರಿ ಪೀಠವು ಬೀದರನಿಂದ ದೂರವಿದ್ದು, ಅದು ಈಗ ಬೀದರನಲ್ಲೂ ಸ್ಥಾಪನೆಯಾಗುತ್ತಿದ್ದರಿಂದ ಇಲ್ಲಿನ ಅನುಯಾಯಿಗಳಿಗೆ ಸಂತಸವನ್ನುಂಟು ಮಾಡಿದೆ ಎಂದರು. ವಿದುಶೇಖರರು ಇಲ್ಲಿಗೆ ಆಗಮಿಸಿ ಇಲ್ಲಿನ ಅನುಯಾಯಿಗಳಿಗೆ ದರ್ಶನವಿಯ್ಯುತ್ತಿರುವುದು ಮತ್ತು ಇಲ್ಲಿ ಶಾರದಾಪೀಠದ ಮಂದಿರ ಸ್ಥಾಪಿಸುತ್ತಿರುವುದು ಹರ್ಷವನ್ನುಂಟು ಮಾಡಿದೆ ಎಂದರು. ಇಲ್ಲಿ ಸತ್ಯನಾರಾಯಣ ಮಂದಿರ ಸ್ಥಾಪನೆಯಾದಾಗ ಆರಂಭದಲ್ಲಿ 10 ಆಕಳುಗಳನ್ನಿಟ್ಟು ಗೋಶಾಲೆ ಆರಂಭಿಸಲಾಗಿತ್ತು. ಈಗ ಇಲ್ಲಿ 150 ಆಕಳುಗಳಿರುವ ಬೃಹತ್ ಗೋಶಾಲೆ ಇಲ್ಲಿ ಕಾಣಬಹುದಾಗಿದೆ. ಹಾಗೆಯೇ ಮುಂದಿನ ದಿನಗಳಲ್ಲಿ ಶಾರದಾ ಮಂದಿರ ಇಲ್ಲಿ ಬೃಹತ್ತಾಗಿ ಕಾರ್ಯನಿರ್ವಹಿಸುವುದರಲ್ಲಿ ಸಂದೇಹವಿಲ್ಲ ಎಂದರು.

ಕಾರ್ಯಕ್ರಮದಲ್ಲಿ ರೇಖಾ ಅಪ್ಪಾರಾವ ಸೌದಿಯವರಿಂದ ಭಕ್ತಿಯ ಸ್ವಾಗತ ಗೀತೆ ಜರುಗಿತು. ಹರಿಕೇಶ ಕುಲಕರ್ಣಿ ರವರಿಂದ ಸ್ವಾಗತ, ಗೀತಾ ಭಟ್‌ರ ತಂಡದಿಂದ ಗೀತಾಪಾರಾಯಣ ನಡೆಯಿತು. ಕಾರ್ಯಕ್ರಮದ ಮುಂಚೆ ಎಂ.ಎಸ್. ಫಂಕ್ಷನ್ ಹಾಲ್‌ನಿಂದ ಸತ್ಯನಾರಾಯಣ ಮಂದಿರದವರೆಗೆ ವಿದುಶೇಖರರ ಶೋಭಾಯಾತ್ರೆ ವಿಜೃಂಭಣೆಯಿಂದ ಜರುಗಿತು. ಶೋಭಾಯಾತ್ರೆಯಲ್ಲಿ ಸಾಧುಘಾಟನ ಪಾಂಡುರಂಗ ಮಹಾರಾಜರ ತಂಡದಿಂದ ಚಕ್ರಿ ಭಜನೆ, ನರ್ಮದಾ ದೇಶಪಾಂಡೆಯುವರಿಂದ ಭಜನೆ ಹಾಗೂ ಜೈಪ್ರದಾ ಪ್ರಕಾಶ ಕುಲಕರ್ಣಿ ತಂಡದವರು ಕಳಸಹೊತ್ತು ಸಾಗಿದರು. ಈ ಶೋಭಾಯಾತ್ರೆಯಲ್ಲಿ ಜಗನ್ನಾಥ ಮಂದಿರದ ಹಾಗೂ ಚಿದಂಬರಾಶ್ರಮದ ಪ್ರಮುಖರು ಪಾಲ್ಗೊಂಡಿದರು. ಕಾರ್ಯಕ್ರಮದಲ್ಲಿ ಪಂಡಿತರಿಂದ ವೇದ ಪಠಣ ನಡೆಯಿತು ಹಾಗೂ ಕೋಲಾಟ ಜರುಗಿದವು. ಕಾರ್ಯಕ್ರಮದಲ್ಲಿ ಪ್ರಮುಖರಾದ ಡಾ. ಶೈಲೇಂದ್ರ ಬೆಲ್ದಾಳೆ ಪರಿವಾರದವರಿಗೆ ಹಾಗೂ ಸೂರ್ಯಕಾಂತ ನಾಗಮಾರಪಳ್ಳಿ ಪರಿವಾರದವರಿಗೆ ಸತ್ಕರಿಸಲಾಯಿತು. ಕಾರ್ಯಕ್ರಮದಲ್ಲಿ ರಮೇಶ ಕುಲಕರ್ಣಿ, ಶಾಮಕಾಂತ ಕುಲಕರ್ಣಿ, ಬಾಬುರಾವ ಕುಲಕರ್ಣಿ, ರಾಮಕೃಷ್ಣ ಸಾಳೆ, ರವಿ ಸ್ವಾಮಿ, ಪ್ರಭಾಕರ ಮೈಲಾಪೂರ, ವೆಂಕಟೇಶ ಮೋರಖಂಡಿಕರ್, ಹಣಮಯ್ಯ ಅರ್ಥಮ್, ಎನ್.ಆರ್. ವರ್ಮಾ, ವಸಂತ ಪಟೇಲ್, ಭೀಮಸೇನ್ ಸಿನಿಯಾಲ್, ಶಂಕರ ಕೊಟರ್ಕಿ, ರಮೇಶ ಗೋಯಲ್, ಜಾಧವ ಪಟೇಲ್, ಪ್ರಮೋದ ಗಾದೇವಾರ, ಸೂರ್ಯಕಾಂತ ಕುಲಕರ್ಣಿ, ದಿನಕರರಾವ ಕುಲಕರ್ಣಿ, ರಾಜಶೇಖರ ಹಣಕುಣಿ ಮತ್ತೀತರರಿದ್ದರು.

# ಒಳ ಮೀಸಲಾತಿ ಜಾರಿ ಆಗುವವರೆಗೂ ಬ್ಯಾಕ್‌ಲಾಗ್ ಹುದ್ದೆ ಭರ್ತಿ ತಡೆಗೆ ಸಿಎಂಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ.19: ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಯಾಗುವವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯಾವುದೇ ಬ್ಯಾ???ಲಾಗ್ ಹುದ್ದೆಗಳನ್ನು ಭರ್ತಿ ಮಾಡಬಾರದು ಎಂದು ಮಾದಿಗ ಮುಖಂಡ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಒತ್ತಾಯಿಸಿದ್ದಾರೆ.

ಈ ಕುರಿತ ಬೆಂಗಳೂರಿನಲ್ಲಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ನಾಗ ಮೋಹ???ದಾಸ್ ಏಕ ಸದಸ್ಯ ಸಮಿತಿಯ ಮಧ್ಯಂತರ ವರದಿ ಪಡೆದು ಮಾದಿಗ ಮತ್ತು ಮಾದಿಗ ಸಮುದಾಯದ ಉಪಜಾತಿಗಳಿಗೆ ಶೇ 6 ರಷ್ಟು ಒಳ ಮೀಸಲಾತಿ ಕೂಡಲೇ ಜಾರಿಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ. ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ನಾಗಮೋಹ???ದಾಸ್ ಏಕ ಸದಸ್ಯ ಸಮಿತಿಯ ಮಧ್ಯಂತರ ವರದಿ ಪಡೆದು ಮಾದಿಗ ಮತ್ತು ಮಾದಿಗ ಸಮುದಾಯದ ಉಪ ಜಾತಿಗಳಿಗೆ ಶೇ 6 ರಷ್ಟು ಒಳ ಮೀಸಲಾತಿ ಕೂಡಲೇ ಜಾರಿಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

# ಮಾ.22 ರಂದು ಕಲ್ಯಾಣ ಕರ್ನಾಟಕ ನಾರಿ ಶಕ್ತಿ ಪ್ರಶಸ್ತಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 19 : ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಮಹಿಳೆಯರಿಗೆ ಮತ್ತು ಶಿಕ್ಷಣ, ಆರೋಗ್ಯ, ಕೈಗಾರಿಕೆ, ಕೃಷಿ, ಸಾಮಾಜಿಕ ಮತ್ತು ಒಟ್ಟಾರೆ ಆರ್ಥಿಕ ಅಭಿವೃದ್ಧಿಯಂತಹ ಕ್ಷೇತ್ರಗಳಲ್ಲಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾರತದ ಹೆಮ್ಮೆಯ ಪತಾಕೆಯನ್ನು ಹಾರಿಸಿದ ಮಹಿಳೆಯರಿಗೆ ಕಲ್ಯಾಣ ಕರ್ನಾಟಕ ನಾರಿ ಶಕ್ತಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಗುರು ನಾನಕ ಪಬ್ಲಿಕ್ ಶಾಲೆ ಆರಂಭಿಸಿ 2025ರ ಜನೆವರಿ 12 ರಂದು 50 ವರ್ಷ ಪೂರೈಸುವ ಪ್ರಯುಕ್ತ ಸೂವರ್ಣ ಮಹೋತ್ಸವ ಸಂದರ್ಭದಲ್ಲಿ ಗುರು ನಾನಕ ಶಿಕ್ಷಣ ಸಂಸ್ಥೆಯೂ ನಗರದ ಮೈಲೂರ ರಸ್ತೆಯಲ್ಲಿರುವ ಗುರು ನಾನಕ ದೇವ್ ಇಂಜೀನಿಯರಿಂಗ್ ಕಾಲೇಜ್‌ನ ಗುರು ನಾನಕ ಭವನದಲ್ಲಿ ಶನಿವಾರ ದಿನಾಂಕ 22–03–2025 ರಂದು ಸಂಜೆ 4:00 ಗಂಟೆಗೆ ಕಲ್ಯಾಣ ಕರ್ನಾಟಕ ನಾರಿ ಶಕ್ತಿ ಪ್ರಶಸ್ತಿ ಪ್ರದಾನ ನಡೆಯಲಿದೆ.

ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಆರು ಮಹಿಳೆಯರನ್ನು ಈಗಾಗಲೇ ಗುರುತಿಸಲಾಗಿದೆ, ಕಲ್ಯಾಣ ಕರ್ನಾಟಕ ನಾರಿ ಶಕ್ತಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ ಎಂದು ಗುರುನಾನಕ ಸಮೂಹ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ॥ ರೇಷ್ಮಾ ಕೌರ್ ತಿಳಿಸಿದರು. 1969 ರಲ್ಲಿ "ಬುದ್ಧಿವಂತಿಕೆಯ ಸಾರವು ಮಾನವೀಯತೆಯ ಸೇವೆ" ಎಂಬ ಧ್ಯೇಯವಾಕ್ಯದೊಂದಿಗೆ ಶ್ರೀ ನಾನಕ ಝಿರಾ ಸಾಹೇಬ್ ಫೌಂಡೆಷನ್ ಸಂಸ್ಥೆ ಪ್ರಾರಂಭಿಸುವ ಮೂಲಕ ತನ್ನ ಪ್ರಯಾಣವನ್ನು ಪ್ರಾರಂಭಿಸಿದ ಸರ್ದಾರ್ ಜೋಗಾ ಸಿಂಗ್‌ಜಿಯವರ ಸಮಾಜಕ್ಕೆ ಸೇವೆ ಸಲ್ಲಿಸುವ ಪರಂಪರೆಯನ್ನು ಮುಂದುವರೆದಿದೆ ಹಾಗೂ ನಿರಂತರವಾಗಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ನೀಡುತ್ತಿದೆ. ಅಗತ್ಯವಿರುವವರಿಗೆ ಆರೋಗ್ಯ ಮತ್ತು ಪರೋಪಕಾರಿ ಸೇವೆಗಳು ನಡೆಯುತ್ತಿವೆ. ಹೀಗಾಗಿ, ಸಮಗ್ರ ಮತ್ತು ವಿಶೇಷವಾದ ವಿಧಾನದೊಂದಿಗೆ ಬೀದರ್ ಜಿಲ್ಲೆಯ ಜನರ ಉನ್ನತಿಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತಿದೆ ಎಂದು ತಿಳಿಸಿದರು.

# ಕನ್ನಡದ ರಕ್ಷಣೆ ನಮ್ಮೆಲ್ಲರ ಹೊಣೆ: ಶ್ರೀನಿವಾಸ್




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ.19 : ಎಲ್ಲಾ ಭಾಷೆಗಳಲ್ಲಿ ಕನ್ನಡ ಭಾಷೆ ಅತ್ಯಂತ ಶ್ರೇಷ್ಠವಾದ ಭಾಷೆ ಕನ್ನಡ ಭಾಷೆಯು ಪ್ರಾಚೀನ ಭಾಷೆಯಾಗಿದ್ದು ನಾಡು ನುಡಿ ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದು ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ವ್ಯವಸ್ಥಾಪಕರಾದ ಶ್ರೀನಿವಾಸ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು, ಮಂಜರಾ ಶಿಕ್ಷಣ ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಎಫ್ ಪಿ ಏ ಐ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಕನ್ನಡ ಭಾಷೆ ಜಾಗೃತಿ ವಿಚಾರ ಸಂಕಿರ್ಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಾ. ಇಂಗ್ಲಿಷ್ ವ್ಯಾಮೋಹಕ್ಕೆ ಒಳಗಾಗಿ ಇಂದಿನ ಮಕ್ಕಳು ಕನ್ನಡವನ್ನು ಮರೆಯುತ್ತಿದ್ದಾರೆ. ಅರ್ಧ ಮರ್ದ ಇಂಗ್ಲಿಷ್ ಕಲಿತು ಯಾವ ಭಾಷೆಯಲ್ಲಿಯೂ ಪರಿಣತಿಯನ್ನು ಹೊಂದದೆ ತಮ್ಮ ಮುಂದಿನ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ ಪಾಲಕರು ಇದನ್ನು ಆಲೋಚಿಸಿ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಕಲಿಸಬೇಕು ಎಂದು ಕಿವಿಮಾತು ಹೇಳಿದರು.

ಮಂಜರಾ ಶಿಕ್ಷಣ ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆಯ ಶಿವಕುಮಾರ ಬೆಳ್ಳೂರೆ ಮಾತನಾಡಿ ಗಡಿಭಾಗದ ಬೀದರ್ ಜಿಲ್ಲೆಯಲ್ಲಿ ಕನ್ನಡ ದೊಂದಿಗೆ, ತೆಲುಗು, ಉರ್ದು, ಮರಾಠಿ, ಹಿಂದಿ ಮುಂತಾದ ಭಾಷೆಗಳು ಇರುವುದರಿಂದ ಕನ್ನಡವೂ ಮರೆಯಾಗುತ್ತಿದೆ ದೈನಂದಿನ ಜೀವನದಲ್ಲಿ ಎಲ್ಲರೊಂದಿಗೆ ಕನ್ನಡವನ್ನೇ ಮಾತನಾಡಲು ರೂಢಿಸಿಕೊಳ್ಳಬೇಕು ಇತರನ್ನು ಕನ್ನಡದಲ್ಲಿ ಮಾತನಾಡಲು ಜಾಗೃತಿ ಮೂಡಿಸಬೇಕು ಭಾಷಾಭಿಮಾನ ಎಲ್ಲರಲ್ಲಿ ಬೆಳೆದಾಗ ಮಾತ್ರ ಕನ್ನಡವು ಉಳಿಯುತ್ತದೆ ಎಂದು ನುಡಿದರು.

ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಮೇಲ್ವಿಚಾರಕರಾದ ಸೂರ್ಯಕಾಂತ್ ಸಂಗೋಳ್ಕರ್ ಅವರು ಮಾತನಾಡಿ ಕನ್ನಡ ಭಾಷೆಯ ಬಗ್ಗೆ ಜಾಗೃತಿ ಮೂಡಿಸುವುದು ಕೇವಲ ವೇದಿಕೆಗೆ ಸೀಮಿತವಾಗಿರಬಾರದು ಎಂದು ಹೇಳುತ್ತಾ ಪ್ರಾಥಮಿಕ ಶಿಕ್ಷಣದಿಂದ ಹತ್ತನೆಯ ತರಗತಿವರೆಗೆ ಕಡ್ಡಾಯವಾಗಿ ಕನ್ನಡದಲ್ಲಿ ಕನ್ನಡ ಶಾಲೆಯಲ್ಲಿ ಸೇರಿಸಬೇಕು ಮತ್ತು ನಮ್ಮ ಕಲೆ ಸಂಸ್ಕೃತಿಯನ್ನು ಉಳಿಸಲು ಕನ್ನಡ ಮನಸುಗಳು ನಿರಂತರ ಶ್ರಮಿಸಬೇಕು ಎಂದು ಹೇಳಿದರು.

ಬಸವಣ್ಣ ಗ್ರಾಮೀಣ ಹಾಗೂ ನಗರಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಬಸವರಾಜ್ ಖಂಡ್ರೆ, ಸಂಜುಕುಮಾರ್ ಪೋಶೆಟ್ಟಿ, ಭೀಮ್, ಯೋಗೇಶ್ ಅತಿಥಿಗಳಾಗಿ ಉಪಸ್ಥಿತರಿದ್ದರು 150 ಕನ್ನಡ ಮಾಧ್ಯಮ ವಿದ್ಯಾರ್ಥಿ ಮತ್ತು ಕನ್ನಡ ಅಭಿಮಾನಿಗಳಿಗೆ ಪ್ರಮಾಣ ಪತ್ರವನ್ನು ನೀಡಿ ಗೌರವಿಸಲಾಯಿತು.

# ಮಾ.25 ರಂದು ಹದಿನಾಲ್ಕನೆಯ ಘಟಿಕೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.19: ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ ವತಿಯಿಂದ ಮಾರ್ಚ.25 ರಂದು ಬೆಳಿಗ್ಗೆ 11 ಗಂಟೆಗೆ ವಿಶ್ವವಿದ್ಯಾಲಯದ ಸಭಾಂಗಣ ಬೀದರದಲ್ಲಿ ಹದಿನಾಲ್ಕನೆಯ ಘಟಿಕೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಘಟಿಕೋತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೌರವಾನ್ವಿತ ಕರ್ನಾಟಕ ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರ್‌ಚಂದ್ ಗೆಹ್ಲೋಟ್ ಅವರು ವಹಿಸಲಿದ್ದಾರೆ.

ಕಾರ್ಯಕ್ರಮದ ಉಪಸ್ಥಿತಿಯನ್ನು ಪಶುಸಂಗೋಪನೆ ಹಾಗೂ ರೇಷ್ಮೆ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಹ ಕುಲಾಧಿಪತಿಗಳಾದ ಕೆ.ವೆಂಕಟೇಶ್ ಅವರು ವಹಿಸಲಿದ್ದಾರೆ. ಐ.ಸಿ.ಎಂ.ಆರ್. ರಾಷ್ಟ್ರೀಯ ವೈರಾಲಜಿ ಸಂಸ್ಥೆ ಪುಣೆ ನಿರ್ದೇಶಕರಾದ ಡಾ.ನವೀನ ಕುಮಾರ್ ಭಾಗವಹಿಸಲಿದ್ದಾರೆ.

# ಕಿರಣ ಸಜ್ಜನಶೆಟ್ಟಿಗೆ ಪಿಎಚ್‌ಡಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮಾ.19: ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ವಾಣಿಜ್ಯ ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಕಿರಣ ಸಜ್ಜನಶೆಟ್ಟಿ ಅವರು ಪಿಎಚ್.ಡಿ ಪದವಿ ಪಡೆದಿದ್ದಾರೆ. ಗೀತಂ ವಿಶ್ವವಿದ್ಯಾಲಯ, ಬೆಂಗಳೂರಲ್ಲಿ ಅವರು ಹೈಬ್ರಿಡ್ ನ್ಯಾನೊಪರ್ಟಿಕಲ್ಸ್ ಅಮಾನತುಗೊಳಿಸುವಿಕೆಯಲ್ಲಿ ದ್ರವ ಹರಿವು ಮತ್ತು ಶಾಖ ವರ್ಗಾವಣೆಗೆ ವಿಶ್ಲೇಷಣಾತ್ಮಕ ಮತ್ತು ಸಂಖ್ಯಾತ್ಮಕ ವಿಧಾನಗಳು ಎಂಬ ವಿಷಯದಲ್ಲಿ ಸಂಶೋಧನೆ ನಡೆಸಿ ಪಿಎಚ್.ಡಿ ಪಡೆದಿದ್ದಾರೆ. ಡಾ. ಚಕ್ರವರ್ತುಲ ಎಸ್.ಕೆ.ರಾಜು ಅವರ ಮಾರ್ಗದರ್ಶನದಲ್ಲಿ ಅವರು ಈ ಮಹತ್ವದ ಅಧ್ಯಯನ ಮಾಡಿದ್ದಾರೆ.

ಅವರ ಈ ಸಾಧನೆಗೆ ಕಾಲೇಜು ಆಡಳಿತ ಮಂಡಳಿ, ಸಹೋದ್ಯೋಗಿಗಳು, ವಿದ್ಯಾರ್ಥಿಗಳು ಹಾಗೂ ಸ್ನೇಹಿತರು ಹರ್ಷ ವ್ಯಕ್ತಪಡಿಸಿದ್ದಾರೆ.

# ಉಚಿತ ಆರೋಗ್ಯ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 19 : ತಾಲೂಕಿನ ಯಾಕತಪೂರ ಗ್ರಾಮ ಪಂಚಾಯತ್ ಆವರಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ ಫೌಂಡೇಶನ್ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಆಯೋಜಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಾಗೋರಾ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಫುಲಮ್ಮ ಸುಮಂತ, ಗ್ರಾ.ಪಂ. ಉಪಾಧ್ಯಕ್ಷರು ನರಸಪ್ಪಾ ಬಿ. ಜಾನಕೆ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಬಸವರಾಜ ಅಂಬಣ್ಣಾ, ಚಂದ್ರಶೇಖರ ಪಾಟೀಲ, ಸಂಜುಕುಮಾರ ಕುತ್ತಾಬಾದೆ, ಸಂಪಾವತಿ ಬಸವರಾಜ, ಉದಯಪ್ರತಾಪ, ರಾಜಕುಮಾರ ಪ್ರಸಾದೆ, ಬಾಬುರಾವ ಬಿಟ್ಟೆ, ಸಂಜುಕುಮಾರ ಕೋಲಿ, ಸುರೇಶ ಪಾಟೀಲ, ಪ್ರಶಾಂತ ಬಕ್ಕಾ ಹಾಗೂ ಫೌಂಡೇಶನ್ ಅಧ್ಯಕ್ಷರಾದ ಚಕ್ರಧರ ಬಿ. ಹೊಸಳ್ಳಿ ಹಾಗೂ ಫೌಂಡೇಶನ್‌ನ ಸರ್ವ ಸದಸ್ಯರು ಉಪಸ್ಥಿತರಿದ್ದರು ಎಂದು ಡಾ. ಬಿ,ಆರ್ ಅಂಬೇಡ್ಕರ್ ಫೌಂಡೇಶನ್ ಅಧ್ಯಕ್ಷರಾದ ಚಕ್ರಧರ ಬಿ ಹೊಸಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಕುಡಿಯುವ ನೀರು ನಿರ್ವಹಣೆ ಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:2024ನೇ ಸಾಲಿನಲ್ಲಿ ಯಾದಗಿರಿ ಜಿಲ್ಲೆಯ ಎಲ್ಲಾ 6 ತಾಲೂಕುಗಳನ್ನು ಬರಪೀಡಿತ ತಾಲ್ಲೂಕುಗಳನ್ನಾಗಿ ರಾಜ್ಯ ಸರ್ಕಾರ ಘೋಷಿಸಿರುತ್ತದೆ, ಕಳೆದ ವರ್ಷ 59 ಗ್ರಾಮಗಳಿಗೆ ಬಾಡಿಗೆ ಕೊಳವೆಬಾವಿಗಳ ಮುಖಾಂತರ ಮತ್ತು 1 ಗ್ರಾಮಕ್ಕೆ ಟ್ಯಾಂಕರ್ ಮೂಲಕ ನೀರು ಪೂರೈಸಲಾಗಿರುತ್ತದೆ,ಹೊಸದಾಗಿ 255 ಗ್ರಾಮಗಳಿಗೆ ಹೊಸದಾಗಿ ಕೊಳವೆಬಾವಿಗಳನ್ನು ಕೊರೆಸಿ ಮತ್ತು 172 ಗ್ರಾಮಗಳಿಗೆ ಹಳೆ ಕೊಳವೆಬಾವಿ ಪ್ಲಷಿಂಗ್ ಮೂಲಕ ನೀರು ಪೂರೈಸಲಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೇಳಿದರು.

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಸಲು ಖಾಸಗಿ ಕೊಳವೆಬಾವಿಗಳ ಬಾಡಿಗೆ ಹಾಗೂ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಒಟ್ಟು 30,60,798 ರೂ.ಗಳು ಖರ್ಚು ಮಾಡಲಾಗಿರುತ್ತದೆ.

2024-25ನೇ ಸಾಲಿನಲ್ಲಿ ಸರಾಸರಿಗಿಂತ ಹೆಚ್ಚು ಮಳೆಯಾಗಿರುತ್ತದೆ, ಈ ವರ್ಷದ ಮಾರ್ಚ್ ತಿಂಗಳಿನಲ್ಲಿ 2 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಮತ್ತು 10 ಗ್ರಾಮಗಳಿಗೆ ಬಾಡಿಗೆ ಕೊಳವೆಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ, ಮೇ ತಿಂಗಳ ವರೆಗೆ 91 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗುವ ಸಾಧ್ಯತೆ ಇರುತ್ತದೆ. ಕಳೆದ ವರ್ಷ ಗುರುಮಠಕಲ್ ಪುರಸಭೆಯಲ್ಲಿ 3 ದಿನಕ್ಕೊಮ್ಮೆ ನೀರು ಪೂರೈಸಲಾಗುತ್ತಿತ್ತು ಮತ್ತು ಉಳಿದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ 1 ಅಥವಾ 2 ದಿನಕ್ಕೊಮ್ಮೆ ಪೂರೈಸಲಾಗುತ್ತಿದೆ, ಒಟ್ಟು 21 ಕುಡಿಯುವ ನೀರಿನ ಕಾಮಗಾರಿಗಳಿಗೆ ಒಟ್ಟು 46.30 ಲಕ್ಷ ರೂ.ಗಳನ್ನು ಖರ್ಚು ಮಾಡಲಾಗಿರುತ್ತದೆ ಎಂದು ತಿಳಿಸಿದರು.

ಈ ವರ್ಷ ಗುರುಮಠಕಲ್‌ನಲ್ಲಿ ನೀರಿನ ಸಮಸ್ಯೆ ಬಗೆಹರಿಸಿ 2 ದಿನಕ್ಕೊಮ್ಮೆ ನೀರು ಪೂರೈಸಲಾಗುತ್ತಿದೆ, ಉಳಿದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸದ್ಯಕ್ಕೆ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ. ಕಳೆದ ವರ್ಷ ಗರಿಷ್ಠ ತಾಪಮಾನ 44.6' ಸಿ ನಷ್ಟು ದಾಖಲಾಗಿತ್ತು, ಆದರೆ ಈ ವರ್ಷ ಮಾರ್ಚ್ ತಿಂಗಳ 14ನೇ ತಾರೀಖಿನಂದು ಸೈದಾಪೂರ ಹೊಬ್ಬಳಿಯಲ್ಲಿ 41.8' ಸಿ ನಷ್ಟು ದಾಖಲಾಗಿದೆ, ಮುಂದುವರೆದು ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ತಾಪಮಾನ ಹೆಚ್ಚು ದಾಖಲಾಗುವ ಮುನ್ಸೂಚನೆ ಇದೆ ಎಂದು ಹೇಳಿದರು.

ಜಿಲ್ಲಾಡಳಿತ ಮತ್ತು ಜಿಲ್ಲಾ ವಿಪತ್ತು ನಿರ್ವಾಹಣ ಪ್ರಾಧಿಕಾರದಿಂದ ಹೆಚ್ಚುತ್ತಿರುವ ತಾಪಮಾನ ಬಿಸಿಗಾಳಿಯಿಂದಾಗುವ ಅವಘಡಗಳಿಂದ ರಕ್ಷಣೆ ಪಡೆಯಲು ಸಾರ್ವಜನಿಕರಿಗೆ ಗ್ರಾಮಗಳಲ್ಲಿ ಕಾರ್ಯಾಗಾರ,ಡಂಗೂರ ಸಾರುವ ಮೂಲಕ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಮತ್ತು ಪತ್ರಿಕಾ ಮಾಧ್ಯಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.

ಕಳೆದ ವರ್ಷ ಜಿಲ್ಲೆಯಲ್ಲಿ ಒಟ್ಟು 12 ಜನರು ಸಿಡಿಲಿನಿಂದ ಮೃತ ಪಟ್ಟಿರುತ್ತಾರೆ. ಗುಡುಗು ಸಿಡಿಲುಗಳಿಂದಾಗುವ ಅವಘಡಗಳಿಂದ ರಕ್ಷಣೆ ಪಡೆಯಲು ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಸಾಮಗ್ರಿಗಳನ್ನು ಉಪಯೋಗಿಸಿ ಸಾರ್ವಜನಿಕರಿಗೆ ಗ್ರಾಮಗಳಲ್ಲಿ ಕಾರ್ಯಾಗಾರ,ಡಂಗೂರ ಸಾರುವ ಮೂಲಕ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಮತ್ತು ಪತ್ರಿಕಾ ಮಾಧ್ಯಮಗಳಲ್ಲಿ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿರುವ ಜಲಾಶಯಗಳಲ್ಲಿ ನೀರಿನ ಮಟ್ಟವನ್ನು ನಾರಾಯಣಪೂರ, ಸನ್ನತಿ, ಗುರುಸಣಿಗಿದಲ್ಲಿ ಬೇಸಿಗೆ ಕಾಲದಲ್ಲಿ ಯಾವುದೇ ತರಹದ ನೀರಿನ ತೊಂದರೆ ಆಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿದೆ. ಜಿಲ್ಲೆಯಲ್ಲಿ 56 ವಾರಗಳಿಗಾಗುವಷ್ಟು ಮೇವಿನ ಸಂಗ್ರಹಣೆ ಇದ್ದು, ಜಾನುವಾರುಗಳಿಗೆ ಮೇವಿನ ಕೊರತೆಯಾಗುವ ಸಾಧ್ಯತೆ ಇರುವುದಿಲ್ಲ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ,ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ್ ಜಿಲ್ಲಾ

ಮಟ್ಟದ ಅಧಿಕಾರಿಗಳು ಹಾಗೂ ಇತ್ತಿತರರು ಉಪಸ್ಥಿತರಿದ್ದರು.

# 'ಕುಡಿಯುವ ನೀರಿನ ಸಮರ್ಪಕ ನಿರ್ವಹಣೆ ಮಾಡಿ:*ಬಿಸಿಗಾಳಿ,ಸಿಡಿಲು ಮುನ್ನೆಚ್ಚರಿಕೆಗಳ ಬಗ್ಗೆ ಅರಿವು ಮೂಡಿಸಿ.ಕೃಷಿ ಬೆಳೆಗೆ ಅವಶ್ಯಕ ನೀರಿನ ಬಗ್ಗೆ ವರದಿ ಕೊಡಿ' ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ:19-ಕುಡಿಯುವ ನೀರು,ಬಿಸಿಗಾಳಿ,ಸಿಡಿಲು ಹಾಗೂ ಕೃಷಿ ಬೆಳೆಗಳಿಗೆ ನೀರಿನ ಅವಶ್ಯಕತೆ ಕುರಿತಂತೆ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಕಾರ್ಯಪ್ರವೃತ್ತರಾಗುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕುಡಿಯುವ ನೀರು, ಬಿಸಿಗಾಳಿ ಹಾಗೂ ಪೂರ್ವ ಮುಂಗಾರು ಕುರಿತು ಸಭೆ ನಡೆಸಿ ಅವರು ಮಾತನಾಡಿದರು.

ಬಿಸಿಲಿನ ತಾಪಮಾನ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ನಿರ್ವಹಣೆ ಅತ್ಯಂತ ಮಹತ್ವದ್ದಾಗಿದೆ.ವಿವಿಧ ಗ್ರಾಮ ಪಂಚಾಯತ್ ಹಾಗೂ ನಗರಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತಪ್ಪದೆ ನೀರಿನ ಗುಣಮಟ್ಟ ಪರೀಕ್ಷಿಸಬೇಕು. ಯೋಗ್ಯವಿಲ್ಲದ ನೀರಿರುವ ಕಡೆಗಳಲ್ಲಿ ನೋಟಿಸ್ ಹಾಗೂ ಡಂಗುರದ ಮೂಲಕ ಅರಿವು ಮೂಡಿಸಬೇಕು.ನಿರಂತರ ಈ ಕುರಿತು ಗ್ರಾಮ ಪಂಚಾಯತ್ ವಾರು ಹಾಗೂ ನಗರ, ಪಟ್ಟಣಗಳ ವಾರ್ಡವಾರು ಅರಿವು ಮೂಡಿಸಿದ ಬಗ್ಗೆ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯ ಸಂಬಂಧಪಟ್ಟ ತಹಸೀಲ್ದಾರರು, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು,ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಕಾರ್ಯನಿರ್ವಾಹಕ ಅಭಿಯಂತರರು,ತಾಲೂಕ ಆರೋಗ್ಯ ಅಧಿಕಾರಿಗಳು, ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು.ನೀರಿನ ಮೂಲಗಳಿಗೆ ಹಾಗೂ ಪೈಪ್ಲೈನ್ ಗಳಿಗೆ ಕಲುಷಿತ ನೀರು ಸೇರ್ಪಡೆಯಾಗದಂತೆ ನಿಗಾವಹಿಸಿ,ಈ ಕುರಿತು ಖುದ್ದಾಗಿ ಪರಿಶೀಲನೆ ಮತ್ತು ಸರ್ವೆ ನಡೆಸಿ ಒಂದು ವಾರದಲ್ಲಿ ವರದಿ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬೇಸಿಗೆ ತಾಪಮಾನ ದೃಷ್ಟಿಯಲ್ಲಿಟ್ಟುಕೊಂಡು ವಿವಿಧ ಬೆಳೆಗಳಿಗೆ ಬೆಳೆ ಕಟಾವು ಆಗುವವರೆಗೆ ನೀರಿನ ಅವಶ್ಯಕತೆ,ಸಂಗ್ರಹ ಪ್ರಮಾಣ ಕುರಿತು ಪ್ರಸ್ತಾವನೆ ಸಲ್ಲಿಸಬೇಕು. ಕಾಲುವೆಗಳ ಮೂಲಕ ಜಿಲ್ಲೆಯ ಕೊನೆಯ ಭಾಗಕ್ಕೆ ನೀರು ಬೇಕಾದ ಪ್ರಮಾಣ ಹಾಗೂ ಭೀಮಾ

ನದಿ ಸುತ್ತಮುತ್ತಲಿನ ಬೆಳೆಗಳಿಗೆ ಬೇಕಾದ ನೀರಿನ ಪ್ರಮಾಣದ ಕುರಿತಂತೆ ಸಂಬಂಧಿಸಿದ ಅಧಿಕಾರಿಗಳು ಸಮನ್ವಯತೆ ಸಾಧಿಸಿ ಪರಿಶೀಲನಾ ವರದಿ ಸಲ್ಲಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಮುಂದಿನ 56 ವಾರಗಳವರೆಗೆ ಮೇವಿನ ಕೊರತೆ ಇಲ್ಲ.ತೀವ್ರ ಬೇಸಿಗೆ ಹಿನ್ನೆಲೆಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಪ್ರಾಣಿ ಪಕ್ಷಿಗಳಿಗೂ ನೀರಿನ ಸೌಲಭ್ಯ ಕಲ್ಪಿಸಲು ಗಮನ ನೀಡುವಂತೆ ಅವರು ಸೂಚನೆ ನೀಡಿದರು.

ಮುಂಬರುವ ಮೇ ವರೆಗೆ ಯಾವೊಂದು ಗ್ರಾಮದಲ್ಲಿಯೂ ಕು.ನೀರು ಕೊರತೆಯಾಗಬಾರದು. ಅಧಿಕಾರಿಗಳ ಕೆಳಸಿಬ್ಬಂದಿಗಳ ಮಧ್ಯ ಸಮನ್ವಯತೆ ಇರಬೇಕು.ವಿದ್ಯುತ್ ಅವಘಡಯಾಗದಿರಲು ಲೈನ್ಮನ್ಗಳಿಂದ ಅವಶ್ಯಕ ಸೇವೆ ಪಡೆಯುವಂತೆ ಜೆಸ್ಕಾಂ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಅವರು ಕುಡಿಯುವ ನೀರು ಪೂರೈಕೆ ಸಂದರ್ಭದಲ್ಲಿ ಕಡ್ಡಾಯವಾಗಿ ನೀರಿನ ಗುಣಮಟ್ಟ ಪರಿಶೀಲಿಸಿ ಪೂರೈಸಲು ಸೂಚಿಸಲಾಗಿದೆ.ಸಮರ್ಪಕ ನೀರಿನ ಪೂರೈಕೆ, ಜಲಮೂಲಗಳ,ಓಹೆಚ್‌ಡಿ ಟ್ಯಾಂಕ್ಗಳ ಸ್ವಚ್ಛತೆ, ಕ್ಲೋರಿನೇಶನ್ ಗೆ ಸೂಚನೆ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು.ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಚೀನಕೇರಾ: ಯುಗ ಪುರುಷ ಕ್ರಾಂತಿಯೋಗಿ ಶ್ರೀಜಗದ್ಗುರು ರೇವಣಸಿದ್ಧರು:-: ಶ್ರೀ ಷ.ಬ್ರ ಡಾ|| ರಾಜಶೇಖರ ಶಿವಾಚಾರ್ಯರು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಮನುಕುಲದ ದಿವ್ಯ ಜ್ಯೋತಿ ಶ್ರೀ ಜಗದ್ಗುರು ರೇವಣಸಿದ್ಧರ ಬೋಧನೆಗಳು ಸಾರ್ವಕಾಲಿಕವಾಗಿವೆ ಎಂದು ಬೇಮಳಖೇಡ,ಗೋರಟಾ,ಬೀದರ ಶ್ರೀ.ಷ.ಬ್ರ.ಡಾ|| ರಾಜಶೇಖರ ಶಿವಾಚಾರ್ಯರ್ಯ ಮಹಾ ಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ಹುಮನಾಬಾದ ತಾಲೂಕಿನ ಚೀನಕೇರಾ ಗ್ರಾಮದ ನಂದಿ ಬೆಟ್ಟದಲ್ಲಿ ನಡೆದ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ 8ನೇ ಜಾತ್ರಾಮಹೋತ್ಸವ ಧರ್ಮ ಸಮಾರಂಭದ ದಿವ್ಯ ಸಾನಿಧ್ಯವನ್ನುವಹಿಸಿ ಆಶೀರ್ವಚನ ನೀಡದರು. ಕ್ರಿ.ಶ.ಸು.9-10ನೇ ಶತಮಾನದಲ್ಲಿ ಬಾಳಿ ಬೆಳಗಿದ ಶ್ರೀ ಜಗದ್ಗುರು ರೇವಣಸಿದ್ಧರು ಅಗಣಿತ ಸಮಾಜೋಧಾರ್ಮಿಕ ಕಲ್ಯಾಣಕಾರ್ಯಗಳನ್ನು ಮಾಡಿತೋರಿದ ಮಹಿಮಾನ್ವಿತರು. ಇವರು ಶ್ರೀ ರಂಭಾಪುರಿ ಜಗದ್ಗುರು ಪೀಠ ಪರಂಪರೆಯಲ್ಲಿ ಬಾಳಿ ಬೆಳಗಿದ ನಾಲ್ಕು ಜನ ರೇವಣಸಿದ್ಧರಲ್ಲಿ ಮೂರನೇಯವರು.ಕಲಿಯುಗಾರಂಭದಲ್ಲಿ ಅವತಾರತಾಳಿದ ರೇವಣಾರಾಧ್ಯರು ಮೊದಲನೆಯವರು. ಶ್ರೀ ಆದಿ ಶಂಕರಿಗೆ ಚಂದ್ರ ಮಾಳೀಶ್ವರ ಲಿಂಗದೀಕ್ಷೆ ನೀಡಿರುವವರು ಎರಡನೆಯವರು. ಕ್ರಿ.ಶ.13ನೇ ಶತಮಾನದಲ್ಲಿ ಬಾಳಿ ಬೆಳಗಿದವರು ನಾಲ್ಕನೆಯವರು. ಇವರನ್ನು ಕಾಡಸಿದ್ದೇಶ್ವರ ಹೆಸರಿನಿಂದಲೂ ಕರೆಯುವರು.

ರೇವಣಸಿದ್ಧರು ಧಾರ್ಮಿಕ, ಸಾಮಾಜಿಕ,ಲೋಕೋತ್ತರ ಅನೇಕ ನೂರಾರು ಕಲ್ಯಾಣ ಕಾರ್ಯಗಳನ್ನು ಮಾಡಿ ತೋರಿರುವರು. ತಮ್ಮ ಅಸಮಾನ್ಯ ತಪಶಕ್ತಿಯಿಂದ ಸಮಾಜಕ್ಕೆ ಕಂಟಕ ಪ್ರಾಯರಾಗಿದ ಗೋರಕ್ಷ,ಮಾಯಾದೇವಿ,ಖರ್ಪರ ಮುಂತಾದ ವಾಮಾಚಾರಿ ತಾಂತ್ರಿಕರನ್ನು ಸದೆಬಡೆದಿರುವರು. ಕಲ್ಯಾಣ ಚಾಲುಕ್ಯ ಮುಂತಾದ ರಾಜ ಮಹಾರಾಜರುಗಳಿಗೆ ಧರ್ಮ ಬೋಧನೆ ಮಾಡಿ ಸುರಾಜ್ಯ ಧರ್ಮ ಮಾರ್ಗ ಬೋಧಿಸಿರುವರು. ದುಷ್ಟರಾಜನ ಬಂಧನದಲ್ಲಿದ್ದ ಹನ್ನೆರಡು ಸಾವಿರ ಮಹಿಳೆಯರನ್ನು ಬಂಧಮುಕ್ತಗೊಳಿಸಿ ಸಮಸ್ತ ಮಹಿಳಾ ಸಂಕುಲಕ್ಕೆ ಸಮಾನತೆ ಗೌರವ ನೀಡಿರುವರು. ಬಸವಕಲ್ಯಾಣದ ತ್ರಿಪುರಾಂತ ಮಂಗಳವೇಡ ಮತ್ತು ಮಾಸನೂರು ಮುಂತಾದ ಕಡೆಗಳಲ್ಲಿ ಬೃಹತ ಕೆರೆ, ತಟಾಕಗಳನ್ನು ನಿರ್ಮಾಣ ಮಾಡಿ ಜನ ಜಾನುವಾರಗಳಿಗೆ ನೀರುಣಿಸಿದ ಕರುಣಾಮಯಿಗಳು. ಬಹಿಷ್ಕೃತ ನಿಮ್ನ ವರ್ಗದ ಜನರಿರಿಗೆ ಅಪ್ಪಿಕೊಂಡು ಲಿಂಗ ದೀಕ್ಷೆಯನ್ನು ನೀಡುವ ಮೂಲಕ ಅವರೆಲ್ಲರಿಗೂ ಗಂಡು ಹೆಣ್ಣು, ಮೇಲು ಕೀಳು ಎನ್ನದೆ ಸರಿ ಸಮಾನತೆಯನ್ನು ನೀಡಿ ಸಮಾಜದ ಮುಖ್ಯವಾಹಿನಿಗೆ ತಂದಿರುವ ಶ್ರೀ ರೇವಣದ್ಧೇಶ್ವರ ಸಮಾಜ ಕಲ್ಯಾಣ ಕಾರ್ಯಗಳು ಒಂದಲ್ಲ ಎರಡಲ್ಲ ನೂರಾರು. ಹರಿಹರನ ರೇವಣಸಿದ್ಧೇಶ್ವರರಗಳೆ, ಬೊಮ್ಮರಸನ ರೇವಣಸಿದ್ಧೇಶ್ವರ ಪುರಾಣ ಮುಂತಾದ ಪ್ರಾಚೀನ ಗ್ರಂಥಗಳಲ್ಲಿ ರೇವಣಸಿದ್ಧೇಶ್ವರ ಲೀಲಾಮೃತಗಳು ಅಳವಟ್ಟಿವೆ.

ದೇಶಾದ್ಯಂತ ಅದರಲ್ಲೂ ರಾಜ್ಯದಲ್ಲಿ ರೇವಣಸಿದ್ಧೇಶ್ವರ ಸಾವಿರಾರು ಪುಣ್ಯ ಕ್ಷೇತ್ರಗಳಿವೆ. ಅವುಗಳಲ್ಲಿ ಕರ್ನಾಟಕದಲ್ಲಿ ಹೇರಳವಾಗಿವೆ. ರಾಮನಗರದ ರೇವಣಸಿದ್ಧೇಶ್ವರ ಬೆಟ್ಟ, ಕೊರಟಗೆರೆ ಸಿದ್ಧರ ಬೆಟ್ಟ, ಕೊಲ್ಹಾಪುರದ ಸಿದ್ಧರ ಬೆಟ್ಟ, ಕಲಬುರಗಿ ರೇವಗಿ ರೇವಣಸಿದ್ಧರ ಬೆಟ್ಟ, ಡಾವಣಗೆರೆಯ ಸಿದ್ಧರ ಬೆಟ್ಟ, ಶಿವಗಂಗೆಯ ಬೆಟ್ಟ, ಮಲ್ಗಿ ಸಿದ್ಧರ ಬೆಟ್ಟ ಮುಂತಾದ ನೂರಾರು ಬೆಟ್ಟದ ಕ್ಷೇತ್ರಗಳಾಗಿ ಪ್ರಸಿದ್ಧವಾಗಿವೆ. ರೇವಣಸಿದ್ಧರ ಕುರಿತು ನೂರಾರು ಪಿ.ಹೆಚ್.ಡಿ ಮಹಾಪ್ರಬಂಧಗಳನ್ನು ಹೊರತರಬಹುದು.

ಬೀದರ ಜಿಲ್ಲೆಯಲ್ಲಿಯ ತ್ರಿಪುರಾಂತ ಗವಿಮಠ,ಹೊನ್ನಕೇರಿ,ಅಲಿಯಾಬದ, ಹೊನ್ನಡ್ಡಿ ಮುಂತಾದ ಹತ್ತಾರು ರೇವಣಸಿದ್ಧೇಶ್ವರ ಗುಹಾಂತರ ದೇವಾಲಯಗಳಿವೆ. ಅದರಲ್ಲಿ ಚೀನಕೇರಾ ನಂದಿ ಬೆಟ್ಟದ ರೇವಣಸಿದ್ಧರ ದಿವ್ಯಕ್ಷೇತ್ರ ಪ್ರವರ್ಧಮಾನಕ್ಕೆಬರುತ್ತಿದೆ. ಕ್ಷೇತ್ರದ ಸರ್ವಾಂಗಿಣ ವಿಕಾಸಕ್ಕೆ ಎಲ್ಲರೂ ಕೈಜೋಡಿಸಬೇಕಿದೆ. ಭವಿಷ್ಯದಲ್ಲಿ ಚೀನಕೇರಾ ರೇವಣಸಿದ್ಧೇಶ್ವರ ಬೆಟ್ಟವು ರಾಜ್ಯದಲ್ಲಿಯೇ ಪ್ರಸಿದ್ಧವಾಗುವುದರಲ್ಲಿ ಯಾವುದೇ ಸಂದೇಹ ವಿಲ್ಲ.

ಕಳೆದ ವರ್ಷ ನಮ್ಮ ಜಿಲ್ಲೆಯಲ್ಲಿ ಎಲ್ಲಿಯೂ ಇರದಂತಹ ರೇವಣಸಿದ್ಧೇಶ್ವರರ ಭವ್ಯ ಮಹಾದ್ವಾರವನ್ನು ನಿರ್ಮಾಣ ಮಾಡಿರುವ ಚೀನಕೇರಾ ಭಕ್ತರು ಈ ವರ್ಷ ನೂತನ ಶ್ರೀ ಜಗದ್ಗುರು ಪಂಚಾಚಾರ್ಯರ ವೃತ್ತ'ವಂದು ಹೆಸರಿಡು ಮೂಲಕ ಮತ್ತೊಂದು ಹೊಸ ಇತಿಹಾಸವನ್ನು ನಿರ್ಮಾಣ ಮಾಡಿರುವ ಬಸಯ್ಯ ಸ್ವಾಮಿ, ಕಮಿಟಿಯ ಸದಸ್ಯರ ಮತ್ತು ಚೀನಕೇರಾ ಭಕ್ತರ ಸೇವಾ ಕಾರ್ಯ ಚಾರಿತ್ರಿಕವಾದುದು. ಮುಂದಿನ ದಿನ ಮಾನಗಳಲ್ಲಿ ಶ್ರೀ ರೇವಣಸಿದ್ಧಶ್ವರ ಭವ್ಯದೇವಾಲಯವನ್ನು ನಿರ್ಮಾಣ ಮಾಡೋಣ. ಅದಕ್ಕಾಗಿ ಎಲ್ಲ ಭಕ್ತರು ಕೈಜೋಡಿಸಬೇಕೆಂದು ಶ್ರೀಗಳು ಕರೆ ನೀಡಿದರು.

ಗೋದವಾರಿ ತಾಯಿ ನೇತೃತ್ವ ವಹಿಸಿದರು ಶರಣಯ್ಯಾ ಸ್ವಾಮಿ, ಚಂದ್ರಕಾಂತ ಚಂದನಹಳ್ಳಿ, ವಿಜಯಕುಮಾರ ಸ್ವಾಮಿ, ರೇವಣಸಿದ್ಧ ದಂಪತಿಗಳು, ಮುಖ್ಯ ಅತಿಥಿಗಳಾಗಿ ಭಾಗವಹಿಸಿದರು. ಬಸಯ್ಯಾ ಸ್ವಾಮಿ ಎಲ್ಲಾರನ್ನು ಸ್ವಾಗತಿಸಿದರು. ಸಾವಿರಾರು ಜನ ಭಕ್ತರು ಪಾಲ್ಗೊಂಡಿದರು.

ಭವ್ಯ ಮೆರವಣಿಗೆ: ಮುಂಜಾನೆ ಚೀನಕೇರಾ ಗ್ರಾಮದಿಂದ ಬೆಟ್ಟದವರೆಗೆ ರೇವಣಸಿದ್ಧಶೇವರ ಭಾವಚಿತ್ರದ ಪಲ್ಲಕ್ಕಿ ಮೆರವಣಿಗೆ ಭವವಾಗಿ ನಡೆಯಿತ್ತು.

# ಬಡತನ ಮುಕ್ತ ಜಿಲ್ಲೆಯನ್ನಾಗಿ ಮಾಡಲು ನಮ್ಮ ಜೊತೆ ಸಹಕರಿಸಿ : ಜಿಲ್ಲಾ ಪಂಚಾಯತ್ ನಿರ್ದೇಶಕ ಪ್ರಕಾಶ್ ಕರೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯನ್ನು ಕಡು ಬಡತನ ಮುಕ್ತ ಮಾಡುವದು ನನ್ನ ಕನಸ್ಸು ಆಗಿದೆ ಮುಕ್ತ ಮಾಡಲು ಸರ್ವೆ ಮಾಡುವ ಗಣತಿದಾರರಿಗೆ ಸಹಕಾರ ಅಗತ್ಯ ನಾರಿ ಕಿಲ್ಪಿ ಯೋಜನೆ ಕಾರ್ಯ ನಿರ್ವಹಿಸುವದು ಬಹಳ ಸಂತೋಷವಾಗಿದೆ ಎಂದು ಜಿಲ್ಲಾಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ ಹೇಳಿದರು

ಕೊಪ್ಪಳದ ಆರ್ ಸೆಟಿ ಸಂಸ್ಥೆಯ ತರಬೇತಿ ಕೇಂದ್ರದಲ್ಲಿ ಜರುಗಿದ ಕೌಶಲ್ಯ ಅಭಿವೃದ್ಧಿ ಹಾಗೂ ಜೀವನೊಪಾಯ ಇಲಾಖೆ ,ರಾಷ್ಟ್ರಿಯ ಜೀವನೊಪಾಯ ಕೆ ಎಸ್ ಆರ್ ಎಲ್ ಎಂ ಇಲಾಖೆ ಜಿಲ್ಲಾ ಪಂಚಾಯತ ಕೊಪ್ಪಳ, ನಾರಿ – ಕಿಲ್ಪಿ ಯೋಜನೆ ಆಶ್ರಯದಲ್ಲಿ ಜರುಗಿದ ಅತ್ಯಂತ ದುರ್ಬಲ ವರ್ಗದವರ ಗುರುತಿಸುವಿಕೆ ಸ್ವ ಸಹಾಯ ಗುಂಪಿನ ಮಹಿಳೆಯರಿಗೆ ನಾಲ್ಕು ದಿನಗಳ ವಸತಿ ಸಹಿತ ತರಬೇತಿ ಸಮಾರೋಪ ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಗಂಗಾವತಿ ,ಹಾಗೂ ಕನಕಗಿರಿ ತಾಲೂಕಗಳಿಗೆ ನಾರಿ-ಕಿಲ್ಪಿ ಯೋಜನೆಯು ಪ್ರಾಯೋಗಿಕವಾಗಿ ಜಾರಿಗೊಳಿಸಲಾಗಿದೆ ಅತಿ ದುರ್ಬಲ ವರ್ಗದವರ ಗುರುತಿಸುವ ಕಾರ್ಯ ನೆಡೆಯುತ್ತದೆ ತಾವುಗಳು ಸರ್ವೆ ಮಾಡುವಾಗ,ಪ್ರಾಮಾಣಿಕತೆಯಿಂದ, ದುರ್ಬಲ ವರ್ಗದ ಕುಟುಂಬ ಮಾನದಂಡಗಳನ್ನು ಅರಿತು-ಕೊಂಡು ಒಬ್ಬಂಟಿ ಮಹಿಳೆ,

ವಿಶೇಷ ಚೇತನರು, ಅತೀ ಕಡು ಬಡವರನ್ನು ಗುರುತಿಸಬೇಕು ಮತ್ತು ಸರ್ವೆ ಮಾಡುವಾಗ ಸಂಜೀವಿನಿ ಯೋಜನೆಯ ಸಿಬ್ಬಂದಿ ಸಹಕಾರ ನೀಡಿ ಕಡುಬಡವರನ್ನು ಗುರುತಿಸಿ ಅವರಿಗೆ ಹಲವಾರು ವಿಧದ ಜೀವನೋಪಾಯ ಚಟುವಟಿಕೆಗಳನ್ನು ಅಳವಡಿಸಿಕೊಳ್ಳಲು ಸಹಾಯ ಸಹಕಾರ ನೀಡಿದಾಗ ಮಾತ್ರ ಬಡತನ ಮುಕ್ತ ಜಿಲ್ಲೆಯನ್ನಾಗಿ ಮಾಡ ಬಹುದು ಎಂಧು ಹೇಳಿದರು.

ಕಾರ್ಯಕ್ರಮದಲ್ಲಿ ಸಂಜೀವಿನಿ ಯೋಜನೆಯ ಜಿಲ್ಲಾ ವ್ಯವಸ್ಥಾಪಕ ಕಟಗಿ ಅಂಬಣ್ಣ, ಎಸ್ ಬಿ,ಐ, ಆರ್ ಸೆಟಿ ಕೇಂದ್ರ ನಿರ್ದೇಶಕ ರಾಯೆಶ್ವರ,ಹಾಗೂ ಲಕ್ಷ್ಮೀಕಾಂತ, ಸಂಜೀವಿನಿ ಯೋಜನೆಯ ಜಿಲ್ಲಾ ಸಂಪನ್ಮೂಲ ವ್ಯಕ್ತಿ ಬಸವರಾಜ ಮಂಡರಗಿ , ನಾರಿ- ಕಿಲ್ಪಿ ಯೋಜನೆಯ ಜಿಲ್ಲಾ ಸಂಯೋಜಕಿ ಸವಿತಾ, ತರಬೇತಿ ಸಂಯೋಜಕಿ ಸೌಮ್ಯ, ಕನಕಗಿರಿ ವಿವಿಧ ತಾಲೂಕಿನ ಸಂಯೋಜಕರಾದ ರಾಜೇಶ , ಜ್ಯೋತಿ, ಮತ್ತು ಶಿಭಿರಾರ್ಥಿಗಳು ಮತ್ತಿತರರು ಉಪಸ್ಥಿತರಾಗಿದ್ದರು.

# ಕಾರ್ಮಿಕರಿಗೆ ಕನಿಷ್ಠ ವೇತನ ಜಾರಿಗೂಳಿಸಿಲು ಸಿ ಐ ಟಿ ಯು ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ.ಮಾ. 18.-ಕಾರ್ಮಿಕರಿಗೆ ಕನಿಷ್ಠ ವೇತನ ಜಾರಿಗೂಳಿಸಿ ಹಾಗೂ ಕಾರ್ಮಿಕರಿಗೆ 31 ಸಾವಿರ ರೂ ಹಚ್ಚಿಸಬೇಕು ನಾಲ್ಕು ಕಾರ್ಮಿಕ ಕಾಯ್ದೆಗಳನ್ನು ರದ್ದಗೂಳಿಸಬೇಕು ಮತ್ತು ವಲಸೆ ಕಾರ್ಮಿಕರಿಗೆ ಕಾನೂನು ರಕ್ಷಣೆ ನೀಡಬೇಕು ಹಾಗೂ ಕೇಂದ್ರ ಹಾಗೂ ರಾಜ್ಯ ಸರಕಾರಗಳು ಕಾರ್ಮಿಕರನ್ನು ಕಡೆಗಣಿಸುತ್ತಿದ್ದಾರೆ ಎಂದು ಒತ್ತಾಯಿಸಿ ಸಿಐಟಿಯು ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ರಾಷ್ಟಪತಿಗೆ ಬರೆದ ಮನವಿ ಪತ್ರವನ್ನು ಸಹಾಯಕ ಅಯುಕ್ತ ಬಸವಣಪ್ ಕಲಶೆಟ್ಟಿ ಅವರಿಗೆ ರಾಜ್ಯಾಧ್ಯಕ್ಷ ಎಂ.ಡಿ.ಅಮೀರ ಅಲಿ ನೇತೃತ್ವದಲ್ಲಿ ಕಾರ್ಮಿಕರು ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.

ಕಾರ್ಮಿಕರಿಗೆ 8 ಗಂಟೆಗಳ ಕೆಲಸ ರಜಾದಿನಗಳು ಮತ್ತು ಸಾಮಾಜಿಕ ಭದ್ರತಾ ಪ್ರಯೋಜನೆಗಳನ್ನು ಖಚಿತ ಪಡಿಸಬೇಕು, ಗುತ್ತಿಗೆ ಕಾರ್ಮಿಕರ ಪದ್ಧತಿಯನ್ನು ರದ್ದುಪಡಿಸಬೇಕು ಹಾಗೂ ಎಲ್ಲಾ ಕ್ಷೇತ್ರಗಳಲ್ಲಿ ಸಮಾನ ವೇತನ ಜಾರಿ ಮಾಡಬೇಕು ಮತ್ತು ದೇಶದಲ್ಲಿ ಉತ್ಪಾದನೆ ಹಾಗೂ ಅಗತ್ಯ ಸೇವೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಜನಸಂಖ್ಯೆ 60 ಕೋಟಿ ಇದ್ದು ಅವರ ಶ್ರಮಶಕ್ತಿ ಭಾರತದ ಆರ್ಥಿಕತೆ-ಯ ರಕ್ತ ಹಾಗೂ ಉಸಿರಾಗಿದೆ ಮತ್ತು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರತಿ ವರ್ಷ ಹೊರಡಿಸುವ ಅಧಿಸೂಚನೆಗಳ ಪ್ರಕಾರ ನಿಗದಿಯಾದ ಕನಿಷ್ಠ ದಿನಗೂಲಿಯಲ್ಲಿ ಶೇಕಡಾ ಹತ್ತರಷ್ಟು ಕಾರ್ಮಿಕರಿಗೆ ಸಿಗುತ್ತಿಲ್ಲ ಏಕೆಂದರೆ, ಕಾರ್ಮಿಕ ಇಲಾಖೆ ಮಾಲೀಕರ ಇಲಾಖೆಯಾಗಿ ಪರಿವರ್ತನೆಯಾಗಲು ಹೊಸ ಕಾನೂನು ಕಾಯ್ದೆ ಕಾರಣವಾಗಿದೆ ಎಂದು ಒತ್ತಾಯಿಸಿರುವರು.

ಗುಳೇ ಕಾರ್ಮಿಕ ನಿಯಂತ್ರಣ ಕಾಯ್ದೆ ಇದ್ದರೂ, ದೇಶದ ಯಾವುದೇ ರಾಜ್ಯದಲ್ಲಿ ಇದರ ಅನುಷ್ಠಾನವಿಲ್ಲ. ಕೋಟಿ ಕೋಟಿ ಜನ ಯುವಕರು ಕಾರ್ಮಿಕ ಕುಟುಂಬಗಳು ಕೆಲಸಕ್ಕಾಗಿ ಸಾವಿರಾರು ಕಿಲೋಮೀಟರ್ ವಲಸೆ ಹೋಗುತ್ತಿದ್ದಾರೆ.ಬಹುತೇಕ ಒಲಸೆ ಕಾರ್ಮಿಕರು ಮಾಲೀಕರ ಅಟ್ಟಹಾಸಕ್ಕೆ, ದೌರ್ಜನ್ಯಕ್ಕೆ, ಚಿತ್ರಹಿಂಸೆಗೆ, ಕೂಲಿ ನಿರಾ-ಕರಣೆಗೆ ಬಲಿಯಾಗುತ್ತಿದ್ದಾರೆ ಎಂದು ಆರೋಪಿಸಿರುವರು.

ಸಂದರ್ಭದಲ್ಲಿ ರಾಜ್ಯ ಸಮಿತಿ ಸದಸ್ಯರಾದ ತಿಪ್ಪಣ್ಣ ಗೆಜ್ಜಲಗಟ್ಟ, ದೇವಮ್ಮ, ಜಿಲ್ಲಾ ಸಮಿತಿ ಸದಸ್ಯರಾದ ಆದೇಶ ನಗನೂರು, ಬಸವರಾಜ ಹಿರೇಹೆಸರೂರು, ತಾಲೂಕು ಸಮಿತಿ ಸದಸ್ಯರು ಚಿದಾನಂದ, ಕಮಲಮ್ಮ, ಗೆದಮ್ಮ, ರೇಣುಕಾ, ಶಾಂತಮ್ಮ, ಆನಂದಮ್ಮ ಹಾಗೂ ಇತರರು ಇದ್ದರು.

# ಜಮೀನು ಖರೀದಿ: ಆಕ್ಷೇಪಣೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.19 -ಇಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಜಿಲ್ಲೆಯ ಭೂ ಮಾಲೀಕರ ಜಮೀನನ್ನು ಖರೀದಿಸಿದ್ದು, ಜಮೀನಿಗೆ ಸಂಬಂದಪಟ್ಟಂತೆ ಆಕ್ಷೇಪಣೆ ಅಥವಾ ತಕರಾರುಗಳಿದ್ದಲ್ಲಿ 07ರೊಳಗಾಗಿ ನಿಗಮದ ಜಿಲ್ಲಾ ವ್ಯವಸ್ಥಾಪಕರಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಜಮೀನನ್ನು ಧೂಳನಗೌಡ ತಂ:ವಿರುಪಾಕ್ಷಪ್ಪ ಸಾ:ಹರವಿ ತಾ:ಮಾನ್ವಿ ಸರ್ವೆ ನಂ; 170/6ರಲ್ಲಿ 5ಎಕರೆ, ಡಾ.ಶಿವಶಂಕರ ತಂ:ಫಕೀರಪ್ಪ ಬಿಂಕದಕಟ್ಟ ಸಾ: ಕಾರಟಗಿ ತಾ: ಸಿಂಧನೂರು ಸರ್ವೆ ನಂ: 113/1ರಲ್ಲಿ 1 ಎಕರೆ 18ಗುಂಟೆ, ತಾಳೂರಿ ಕೃಷ್ಣ ತಂ: ವೆಂಕಟಶಿವಯ್ಯ ಸಾ:ಸೀತಾನಗರ ಕ್ಯಾಂಪ್ ತಾ: ರಾಯಚೂರು ಸರ್ವೆ ನಂ: 144/4ರಲ್ಲಿ 24ಗುಂಟೆ ಹಾಗೂ ಶಾರದ ಗಂ: ಶಿವಶರಣ ಪಾಟೀಲ್ ಸಾ: ಗುಡದಿನ್ನಿ ತಾ: ಮಾನ್ವಿ 51/*/6ರಲ್ಲಿ 8ಎಕರೆ ಜಮೀನನ್ನು ಖರೀದಿಸಲಾಗಿದ್ದು, ಜಮೀನಿಗೆ ಸಂಬಂದಪಟ್ಟಂತೆ ಆಕ್ಷೇಪಣೆ ಅಥವಾ ತಕರಾರುಗಳಿದ್ದಲ್ಲಿ ಈ ಪ್ರಕಟಣೆ ನೀಡಿದ 07 ದಿನಗಳ ಒಳಗಾಗಿ ಜಿಲ್ಲಾ ವ್ಯವಸ್ಥಾಪಕರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಡ್ಯಾಡಿ ಕಾಲೋನಿ, ಚೈತನ್ಯ ಆಸ್ಪತ್ರೆ ಹತ್ತಿರ,ಲಿಂಗಸೂಗೂರು ರೋಡ್ ರಾಯಚೂರು-584101 ಇಲ್ಲಿಗೆ ಭೇಟಿ ನೀಡಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.19-ಸಿದ್ಧ ಉಡುಪು ಸಂಶೋಧನೆ ತರಬೇತಿ ವಿನ್ಯಾಸ ಮತ್ತು ಅಭಿವೃದ್ಧಿ ಕೇಂದ್ರ ಸಂಸ್ಥೆ ವತಿಯಿಂದ ಪ್ರಥಮ ಬಿಎಸ್ಸಿ (ಗಾರ್ಮೆಂಟ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಾಲಜಿ) ವೃತ್ತಿಪರ ಪದವಿ ಕೋರ್ಸ್ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಕೋರ್ಸ್:

ಮಹಿಳೆಯರ ಉಡುಪು ವಿನ್ಯಾಸ-04 ತಿಂಗಳ ಅವಧಿ.

ಹೊಲಿಗೆ ಯಂತ್ರ ತರಬೇತಿ-45 ದಿನ(ಉಚಿತ ತರಬೇತಿ ಮತ್ತು ವಿದ್ಯಾರ್ಥಿ ವೇತನ).

ವೃತ್ತಿಪರ ಕೋರ್ಸ್ ಪ್ರವೇಶಾತಿಗೆ ಯಾವುದೇ ದ್ವಿತೀಯ ಪಿಯುಸಿ (ಕಲೆ, ವಾಣಿಜ್ಯ, ವಿಜ್ಞಾನ, ಶಿಕ್ಷಣ ಹಾಗೂ ಯಾವುದೇ ಡಿಪ್ಲೋಮಾ) ವಿಭಾಗದಲ್ಲಿ ತೇರ್ಗಡೆ ಹೊಂದಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೆರುವು ಪ್ರದೇಶದ ಜಿಲ್ಲಾ ಕ್ರೀಡಾಂಗಣ ಮೈದಾನ ರಸ್ತೆಯ ಜಿಆರ್‌ಟಿಡಿಸಿ ಕಾಲೇಜಿನ ಪ್ರಾಂಶುಪಾಲರ ಕಚೇರಿ ಹಾಗೂ ಬೋಧಕ ಸಿಬ್ಬಂದಿಗಳ ಮೊ.8088227249,9741264655, 9844862576,9844474235, 8123126127ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತ ಚುನಾವಣಾ ಆಯೋಗ ಆಧಾರ್ ನೊಂದಿಗೆ ಎಪಿಕ್ (EPIC) ಜೋಡಣೆಗೆ ಶೀಘ್ರ ಕ್ರಮ: ಆಯುಕ್ತ ಜ್ಞಾನೇಶ್ ಕುಮಾರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.19–ಆಧಾರ್ ಕಾರ್ಡ್ ನೊಂದಿಗೆ ಎಪಿಕ್ (ಇಕಖಅ) ಸಂಖ್ಯೆಯನ್ನು ಕೂಡಲೇ ಜೋಡಣೆ (ಖಟಇ) ಮಾಡಲು ಕ್ರಮ ವಹಿಸಲಾಗುವುದು ಎಂದು ಭಾರತ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರು ತಿಳಿಸಿದ್ದಾರೆ.



ನವದೆಹಲಿಯ ನಿರ್ವಚನ ಸದನದಲ್ಲಿ ಚುನಾವಣಾ ಭಾರತೀಯ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಚುನಾವಣಾ ಆಯುಕ್ತರಾದ ಡಾ.ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರು ಕೇಂದ್ರ ಗೃಹ ಕಾರ್ಯದರ್ಶಿ, ಕಾರ್ಯದರ್ಶಿ ಶಾಸಕಾಂಗ ಇಲಾಖೆ, ಕಾರ್ಯದರ್ಶಿ ಮೇಟಿ ಮತ್ತು ಯುಐಡಿಎಐ ಮುಖ್ಯ ಕಾರ್ಯ ನಿರ್ವಣಾಧಿಕಾರಿ ಮತ್ತು ಇಸಿಐನ ತಾಂತ್ರಿಕ ತಜ್ಞರೊಂದಿಗೆ ಮಂಗಳವಾರ ಸಭೆ ನಡೆಸಿ ಚರ್ಚಿಸಿದರು.

ಚುನಾವಣಾ ಆಯೋಗವು ಆರ್ಟಿಕಲ್ 326, ಆರ್‌ಪಿ ಆಕ್ಟ್, 1950 ಮತ್ತು ಸುಪ್ರೀಂ ಕೋರ್ಟ್ ತೀರ್ಪುಗಳ ಪ್ರಕಾರ ಕ್ರಮ ಕೈಗೊಳ್ಳುತ್ತದೆ. ಯುಐ–ಡಿಎಐ ಮತ್ತು ಇಸಿಐ ಯ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ.


ಭಾರತದ ಸಂವಿಧಾನದ 326 ನೇ ವಿಧಿಯ ಪ್ರಕಾರ, ಮತದಾನದ ಹಕ್ಕನ್ನು ಭಾರತದ ನಾಗರಿಕರಿಗೆ ಮಾತ್ರ ನೀಡುವುದು, ಆಧಾರ್ ಕಾರ್ಡ್ ವ್ಯಕ್ತಿಯ ಗುರುತನ್ನು ಮಾತ್ರ ಸ್ಥಾಪಿಸುತ್ತದೆ. ಹಾಗಾಗಿ ಎಪಿಕ್ ಅನ್ನು ಆಧಾರ್‌ನೊಂದಿಗೆ ಲಿಂಕ್ ಮಾಡುವುದನ್ನು ಸಂವಿಧಾನದ 326 ನೇ ವಿಧಿ, 1950 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 23(4), 23(5) ಮತ್ತು 23(6) ರ ನಿಬಂಧನೆಗಳ ಪ್ರಕಾರ ಕ್ರಮವಹಿಸಲಾಗುವುದು.

ಅದರಂತೆ, ಯುಐಡಿಎಐ ಮತ್ತು ಇಸಿಐನ ತಾಂತ್ರಿಕ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಮಾ. 21 ರಿಂದ ಎಸ್. ಎಸ್. ಎಲ್. ಸಿ ಪರೀಕ್ಷೆ ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಎಸ್.ಎಸ್.ಎಲ್.ಸಿ ಪರೀಕ್ಷೆ–1ರ ವಾರ್ಷಿಕ ಪರೀಕ್ಷೆಗಳು ಮಾರ್ಚ್ 21 ರಿಂದ ಎಪ್ರಿಲ್ 4 ರವರೆಗೆ ಕೊಪ್ಪಳ ಜಿಲ್ಲೆಯಾದ್ಯಂತ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ್ ಆವರಣವನ್ನು ನಿರ್ಬಂಧಿತ ಪ್ರದೇಶ ಎಂದು ಘೋಷಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಲಿನ್ ಅತುಲ್ ಅವರು ಆದೇಶ ಹೊರಡಿಸಿದ್ದಾರೆ.



ಮೊದಲ ಹಂತದ ಎಸ್.ಎಸ್.ಎಲ್.ಸಿ ಪರೀಕ್ಷೆಯು ಮಾರ್ಚ್ 21 ರಿಂದ ಎಪ್ರಿಲ್ 4ರ ವರೆಗೆ ಬೆಳಿಗ್ಗೆ 10 ಗಂ–ಟೆ ಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಕೊಪ್ಪಳ ಜಿಲ್ಲೆಯ ಒಟ್ಟು 73 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಪರೀಕ್ಷೆಗಳನ್ನು ಸುಗಮ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

*ತಾಲ್ಲೂಕವಾರು ಪರೀಕ್ಷೆ ಕೇಂದ್ರಗಳ ವಿವರ:* ಕೊಪ್ಪಳ ತಾಲೂಕಿನಲ್ಲಿ 21 ಪರೀಕ್ಷಾ ಕೇಂದ್ರಗಳು, ಗಂಗಾವತಿ ತಾಲ್ಲೂಕಿನಲ್ಲಿ 14 ಪರೀಕ್ಷಾ ಕೇಂದ್ರಗಳು, ಕುಷ್ಟಗಿ ತಾಲ್ಲೂಕಿನಲ್ಲಿ 15 ಪರೀಕ್ಷಾ ಕೇಂದ್ರಗಳು ಯಲಬುರ್ಗಾ ತಾಲ್ಲೂಕಿನಲ್ಲಿ 8 ಪರೀಕ್ಷಾ ಕೇಂದ್ರಗಳು ಕುಕನುರು ತಾಲ್ಲೂಕಿನಲ್ಲಿ 6 ಪರೀಕ್ಷಾ ಕೇಂದ್ರಗಳು, ಕಾರಟಗಿ ತಾಲ್ಲೂಕಿನಲ್ಲಿ 5 ಪರೀಕ್ಷಾ ಕೇಂದ್ರಗಳು, ಕನಕಗಿರಿ ತಾಲ್ಲೂಕಿನಲ್ಲಿ 4 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ.

ನಿಷೇಧಾಜ್ಞೆ ಜಾರಿಯನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ. ಮೊಬೈಲ್, ಪೇಜರ್, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

## ಕದ್ರಳ್ಳಿ ಗ್ರಾಮದಲ್ಲಿ ಶರಣಬಸವೇಶ್ವರ ಪುರಾಣ ಮಹಾಮಂಲ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಕದ್ರಳ್ಳಿ ಗ್ರಾಮದಲ್ಲಿ ಶರಣಬಸವೇಶ್ವರ ಪುರಾಣಮಂಗಲ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಶಾಂತಲಿಂಗೇಶ್ವರ ಮಹಾಸ್ವಾಮಿಗಳು ಸಂಸ್ಥಾನ ನಗರಗಡ್ಡಿಮಠ ಪೂಜ್ಯರ ಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಿತು.

ಡಾ.ಮಹಾದೇವ ಮಹಾಸ್ವಾಮಿಗಳು ಕುಕನೂರ ಅನ್ನದಾನೇಶ್ವರ ಶಾಖಾಮಠ ಪರಮಪೂಜ್ಯರು ಆಶೀರ್ವಚನ ನೀಡಿ ಕದ್ರಳ್ಳಿ ಗ್ರಾಮ ಪ್ರತಿವರ್ಷದಂತೆ ಈ ವರ್ಷವೂ ಶರಣಬಸವೇಶ್ವರ ಪುರಾಣಮಂಗಲ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಂಡಿದ್ದು ನಮಗೆ ತುಂಬಾ ಸಂತೋಷವಾಗಿದೆ ಎಂದು ಹೇಳಿದರು ಈ ಗ್ರಾಮ ದಾನ, ಧರ್ಮ, ಸಾಮಾಜಿಕ ಕಾರ್ಯಗಳಲ್ಲಿ ಸದಾ ಮುಂಚೂಣಿಯಲ್ಲಿರುವ ಗ್ರಾಮವಾಗಿದೆ ಎಂದು ಹೇಳಿದರು. ಮುಂದಿನ ವರ್ಷ ಪುರಾಣಮಂಗಲದ ಜೊತೆಗೆ ಶ್ರೀ ಶಾಂತಲಿಂಗೇಶ್ವರ ನೂತನ ರಥೋತ್ಸವ ಮಾಡಬೇಕೆಂದು ಗ್ರಾಮದ ಗುರುಹಿರಿಯರಿಗೆ ಶ್ರೀಗಳು ಸಲಹೆ ನೀಡಿದರು.

ಹಿರೇಮಲ್ಲನಕೇರಿ ಪೂಜ್ಯರು, ಅಳವಂಡಿ ಪೂಜ್ಯರು ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿದ್ದರು.

ಪುರಾಣ ಪ್ರವಚನಕಾರರು ಪೂಜ್ಯಶ್ರೀ ಶರಣ ಶಿವಕವಿ ಶ್ರೀ ಉಮಾಪತಿ ಶಾಸ್ತ್ರಿಗಳು ರಾಜೂರ, ಸಂಗೀತ ಪುರಾಣ ಪಠಣಕಾರರು ಶ್ರೀಮತಿ ಎಸ್ ಅಕ್ಕಮಹಾದೇವಿ ರಾಜೂರ, ತಬಲವಾದಕರು ಬಸವರಾಜ ಹುಯಿಲಗೋಳ ಕುರಹಟ್ಟಿ.

ಈ ಸಂದರ್ಭದಲ್ಲಿ ಅಶೋಕ ತೋಟದ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯರು, ಸುಮಂಗಲಾ ಬಸವರಾಜ ಸಂಗನಾಳ ಗ್ರಾಮ ಪಂಚಾಯತಿ ಅಧ್ಯಕ್ಷರು, ಶಿವುಕುಮಾರ ಹಳ್ಳಿಗುಡಿ ಗ್ರಾಮ ಪಂಚಾಯತಿ ಸದಸ್ಯರು, ಶಾಂತಮ್ಮ ಚನ್ನಬಸಪ್ಪ ಮಡಿವಾಳರ ಗ್ರಾಮ ಪಂಚಾಯತಿ ಸದಸ್ಯರು, ಸಿದ್ದನಗೌಡ್ರ ಪೊಲೀಸ ಪಾಟೀಲ, ಹನುಮಂತಪ್ಪ ಬಂಡಿಹಾಳ, ಪ್ರಭುರಾಜ ಹಾಳಕೇರಿ, ದೇವೇಂದ್ರಪ್ಪ ಬಂಡಿಹಾಳ, ಚನ್ನನಗೌಡ್ರ ಇನಾಮತಿ, ಈರಪ್ಪ ಮುತ್ತಾಳ, ಚನ್ನಬಸಪ್ಪ ಮಡಿವಾಳರ ಮೊದಲಾದವರು ಹಾಜರಿದ್ದರು.

ಸ್ವಾಗತ ನಿರೂಪಣೆ, ಎಸ್. ಉದಯ ಕುಮಾರ,

ಅಮರೇಶಗೌಡ ಹಾಳಕೇರಿ, ಲಕ್ಷ್ಮಣ ಗುತ್ತೂರ ಶರಣಪ್ಪ ಬಂಡಿಹಾಳ ಆಬಾರಮನ್ನಿಸಿದರು.

ಗ್ರಾಮಸ್ಥರಿಂದ ಅಚ್ಚುಕಟ್ಟಾದ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಕಾರ್ಯಕ್ರಮದ ನಂತರ ರಾತ್ರಿ ನೇಗಿಲಿಗೆ ಸಿಂಗಾರ ರೈತನಿಗೆ ಬಂಗಾರ ಎಂಬ ಸುಂದರ ಸಮಾಜಿಕ ನಾಟಕವನ್ನು ಗ್ರಾಮದ ಕಲಾವಿದರಿಂದ ಪ್ರದರ್ಶನ ಮಾಡಿದರು.

## ಮಾ.24 ರಂದು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.19–ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಏ.02 ರಂದು ದೇವರದಾಸಿಮಯ್ಯ ಜಯಂತಿ, ಏ.10 ರಂದು ಭಗವಾನ್ ಮಹಾವೀರ ಜಯಂತಿ ಆಚರಣೆ ಕುರಿತು ಚರ್ಚಿಸಲು ಮಾ.24 ರಂದು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಮಾ.24 ರಂದು ಸಂಜೆ 4.30 ಗಂಟೆಗೆ ದೇವರ ದಾಸಿಮಯ್ಯ ಜಯಂತಿ, ಬಳಿಕ 05 ಗಂಟೆಗೆ ಭಗವಾನ್ ಮಹಾವೀರ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ನಡೆಯಲಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸುವರು.

ಸಭೆಗೆ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

## ಶ್ರೀಶೈಲಂಗೆ ವಿಶೇಷ ಸಾರಿಗೆ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.19–ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದಿಂದ ಶ್ರೀಶೈಲಂಗೆ ಹೋಗಲು ವಿಶೇಷ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್‌ಬಾನ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ಮೋಕಾ, ಕುರುಗೋಡು, ಕಂಪ್ಲಿ, ಎಮ್ಮಿಗನೂರು, ಸಿರುಗುಪ್ಪ, ತೆಕ್ಕಲಕೋಟೆ, ಹಳೇಕೋಟೆ, ತೋರಣಗಲ್ಲು, ಸಂಡೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಯುಗಾದಿ ಹಬ್ಬದ ಪ್ರಯುಕ್ತ ಶ್ರೀ ಭ್ರಮರಾಂಬಾ ಮಲ್ಲಿಕಾರ್ಜುನ ಸ್ವಾಮಿಯ ವಿಶೇಷ ದರ್ಶನಕ್ಕಾಗಿ ಶ್ರೀಶೈಲಂಗೆ ಹೋಗುತ್ತಿದ್ದು, ಭಕ್ತಾದಿಗಳ ಅನುಕೂಲಕ್ಕಾಗಿ ಮಾ.21 ರಿಂದ 31 ರ ವರೆಗೆ ರವರೆಗೆ ವಿಶೇಷ ಸಾರಿಗೆ ಒದಗಿಸಲಾಗಿದೆ.

ಮಾಹಿತಿಗಾಗಿ ಬಳ್ಳಾರಿ–1ನೇ ಘಟಕದ ವ್ಯವಸ್ಥಾಪಕರು–7760992163, ಬಳ್ಳಾರಿ–2ನೇ ಘಟಕ ವ್ಯವಸ್ಥಾಪಕರು–7760992164, ಸಿರುಗುಪ್ಪ ಘಟಕ ವ್ಯವಸ್ಥಾಪಕರು–7760992165, ಕುರುಗೋಡು ಘಟಕ ವ್ಯವಸ್ಥಾಪಕರು–9606483671, ಸಂಡೂರು ಘಟಕ ವ್ಯವಸ್ಥಾಪಕರು–7760992309 ಗೆ ಸಂಪರ್ಕಿಸಬಹುದು.

ಈ ಸಾರಿಗೆ ಸೇವೆಯನ್ನು ಸಾರ್ವಜನಿಕ ಪ್ರಯಾಣಿಕರು ಸದುಪಯೋಗಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಆದರ್ಶ ವಿದ್ಯಾಲಯ: ಪ್ರವೇಶ ಪತ್ರ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.19–ನಗರದ ಹಿರಾಳ್ ಕುಡಂನ ಈದ್ಗಾ ರಸ್ತೆಯ ಸರ್ಕಾರಿ ಆದರ್ಶ ವಿದ್ಯಾಲಯ(ಆರ್.ಎಂ.ಎಸ್.ಎ) ಶಾಲೆಗೆ 2025–26ನೇ ಸಾಲಿನ 6ನೇ ತರಗತಿ ದಾಖಲಾತಿಗೆ ಅರ್ಜಿ ಸಲ್ಲಿಕೆಯಾಗಿರುವ ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆನ್‌ಲೈನ್ ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ಶಾಲೆಯ ಮುಖ್ಯ ಗುರುಗಳು ತಿಳಿಸಿದ್ದಾರೆ.

ಪ್ರವೇಶ ಪತ್ರಗಳನ್ನು WWW. schooleducation.kar. nic.in ಅಥವಾ WWW. vidyavahini.karnataka.gov.in ಅಂತರ್ ಜಾಲದ (ಆನ್‌ಲೈನ್) ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಮಾ.15 ಕೊನೆಯ ದಿನ ಆಗಿದೆ.

ಕಡ್ಡಾಯವಾಗಿ ದೃಢೀಕರಿಸಿದ ಪ್ರವೇಶ ಪತ್ರವನ್ನು ಪ್ರವೇಶ ಪರೀಕ್ಷೆಗೆ ಹಾಜರುಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಆದರ್ಶ ವಿದ್ಯಾಲಯ ಅಥವಾ ಮೊ.9740738762 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.19–ನಗರದ ಬಿಮ್ಸ್ ಆಸ್ಪತ್ರೆಯ ಆವರಣದಲ್ಲಿ ಒಬಿಜಿ ವಾರ್ಡ್ ಹತ್ತಿರ ಸುಮಾರು 40 ವರ್ಷದ ಅಸ್ವಸ್ಥ ಅನಾಮಧೇಯ ವ್ಯಕ್ತಿಯು ಮಾ.17 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ಮಾಹಿತಿ ಇರುವುದಿಲ್ಲ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಕೌಲ್ ಬಜಾರ್ ಪೊಲೀಸ್ ಠಾಣಾಧಿಕಾರಿಗಳು ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5.6 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ಕಪ್ಪು ಮತ್ತು ಬಿಳಿ ಕೂದಲು, ಹಾಗೂ ಎದೆಯ ಮೇಲೆ ಹಳೆಗಾಯದ ಗುರುತು ಇರುತ್ತದೆ. ಬೂದಿ ಬಣ್ಣದ ಚೆಕ್ಸ್ ಶರ್ಟ್, ಬಿಳಿ ಬಣ್ಣದ ಲುಂಗಿ ಧರಿಸಿರುತ್ತಾನೆ.

ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, ಪಿಎಸ್‌ಐ ಮೊ.9480803084, ಪಿಐ ಮೊ.9480803047 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 258102 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಂತಿನಿಕೇತನ ಶಾಲೆಯ ವಿದ್ಯಾರ್ಥಿಗಳು ಮುರಾರ್ಜಿ ವಸತಿ ಪ್ರವೇಶ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಕುಕನೂರ ತಾಲೂಕಿನ ಮಂಗಳೂರು ಗ್ರಾಮದ ಶ್ರೀ ಮಂಗಳೇಶ್ವರ ಶಿಕ್ಷಣ ಸಂಸ್ಥೆ ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಇತ್ತೀಚೆಗೆ ನಡೆದ ಮುರಾರ್ಜಿ ವಸತಿ ಶಾಲೆಯ ಪ್ರವೇಶ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.



ಕಿರಣಕುಮಾರ ಬಾಳಪ್ಪ ದೇಸಾಯಿ 88 %, ಮಂಗಳೇಶ ನಿಂಗಪ್ಪ ಹಲಗೇರಿ 87%, ಅಮನ್ ಖಾಜಾಸಾಬ್ ಬಾಗಲಿ 85%, ಅರುಣಕುಮಾರ ಸುರೇಶ ಜಗಾಟ್ಟಿ 85%, ಬಸವಕುಮಾರ ಮುದಕಪ್ಪ ಕೌದಿ, ಸಮರ್ಥ ಶಶಿಧರ ಶ್ಯಾಗೋಟಿ 80% ಹಾಗೂ ಉಳಿದ ವಿದ್ಯಾರ್ಥಿಗಳು 75% ಅಂಕ ಪಡೆದು ತೇ–ರ್ಗಡೆಯಾಗಿದ್ದಾರೆ.

ಮುರಾರ್ಜಿ ವಸತಿ ಶಾಲೆಯ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ರವೀಂದ್ರನಾಥ ಕೊಟ್ರಪ್ಪತೋಟದ, ಕಾರ್ಯದರ್ಶಿ ಮೇಘನಾ ರವೀಂದ್ರನಾಥ ತೋಟದ, ಮುಖ್ಯಗುರುಗಳಾದ ದೇವಣ್ಣ ದೇಸಾಯಿ, ಶಿಕ್ಷಕರಾದ ಶರಣಪ್ಪ ಗೊಂಡಬಾಳ, ವೀರೇಶ ಕುಂಬಾರ, ನಾಗರತ್ನ ದೊಡ್ಡಮನಿ, ಗಾಯತ್ರಿ ತೊಂಡಿಹಾಳ, ದೀಪಾ ಬಾರಕೇರ, ಶಾರದಾ ಕೆಂಚನಗೌಡ್ರ, ಪರ್ವಿನ್, ಆಯಾ ಮುದುಕಮ್ಮ ಶಾಲೆಯ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

## ನೊಂದಾಯಿತವಲ್ಲದ ರೆಸಾರ್ಟ್, ಹೋಮ್ ಸ್ಟೇಗಳನ್ನು ಪತ್ತೆ ಹಚ್ಚಿ ಅಗತ್ಯ ಕ್ರಮ ಕೈಗೊಳ್ಳಿ : ವಿಠ್ಠಲ್ ಚೌಗಲಾ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ನೊಂದಾಯಿತವಲ್ಲದ ರೇಸಾರ್ಟ, ಹೋಮ್ ಸ್ಟೇಗಳನ್ನು ಪತ್ತೆಹಚ್ಚಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಕೊಪ್ಪಳ ತಹಶೀಲ್ದಾರ ವಿಠ್ಠಲ್ ಚೌಗಲಾ ಹೇಳಿದರು.

ಅವರು ಮಂಗಳವಾರ ಕೊಪ್ಪಳ ತಹಶೀಲ್ದಾರ ಕಛೇರಿಯಲ್ಲಿ ತಾಲ್ಲೂಕಿನ ರೇಸಾರ್ಟ, ಹೋಮ್ ಸ್ಟೇಗಳ ತೆರವುಗೊಳಿಸುವ ಕುರಿತಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಡಿದರು.

ಕೊಪ್ಪಳ ತಾಲ್ಲೂಕ ವ್ಯಾಪ್ತಿಯಲ್ಲಿನ ದಾಖಲೆಗಳಿಲ್ಲದಿರುವ ರೇಸಾರ್ಟ, ಹೋಮ್ ಸ್ಟೇಗಳ ತೆರವುಗೊಳಿಸುವ ಕುರಿತು ವಿವಿಧ ಇಲಾಖಾ ಅಧಿಕಾರಿಗಳನ್ನು ಒಳಗೊಂಡಂತೆ ತಾಲ್ಲೂಕ ಮಟ್ಟದ ತಂಡವನ್ನು ರಚನೆ ಮಾಡಿ ಕೊಪ್ಪಳ ಜಿಲ್ಲಾಧಿಕಾರಿಗಳು ಆದೇಶಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ತಾಲ್ಲೂಕ ವ್ಯಾಪ್ತಿಯಲ್ಲಿ ಸೂಕ್ತ ಪರವಾನಿಗೆ ಇಲ್ಲದೇ ಹೋಮ್ ಸ್ಟೇ ರೇಸಾರ್ಟಗಳನ್ನು ನಡೆಸುತ್ತಿರುವ ಬಗ್ಗೆ ಮಾಹಿತಿ ಇದ್ದು, ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಪ್ರವಾಸೋಧ್ಯಮ ಇಲಾಖೆ, ಅಬಕಾರಿ ಇಲಾಖೆ, ಪೋಲೀಸ್ ಇಲಾಖೆ, ಅರಣ್ಯ ಇಲಾಖೆ ಮತ್ತು ಜೇಸ್ಕಾಂ ಇಲಾಖೆಗಳ ಅಧಿಕಾರಿಗಳು ಸಮನ್ವಯ ಸಾಧಿಸಿಕೊಂಡು ಕಾರ್ಯನಿರ್ವಹಿಸಿ ಎಲ್ಲಾ ರೇಸಾರ್ಟ ಮತ್ತು ಹೋಮ್ ಸ್ಟೇಗಳ ದಾಖಲೆಗಳನ್ನು ಪರಿಶೀಲಿಸಿ, ಅಧಿಕೃತ ಹಾಗೂ ಅನಧೀಕೃತವಿರುವ ಕುರಿತಂತೆ ಪಟ್ಟಿಯನ್ನು ತಯಾರಿಸಬೇಕು.

## ಮಸಬಹಂಚಿನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಾವರಾಳ ಗ್ರಾಮದಲ್ಲಿ ರೋಜಗಾರ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಮಸಬಹಂಚಿನಾಳ ಗ್ರಾಮ ಪಾಮಚಾಯತಿ ವ್ಯಾಪ್ತಿಯ ಗಾವರಾಳ ಗ್ರಾಮದಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆ ಯಡಿ ನಾಲಾ ಸುಧಾರಣೆ ಕಾಮಗಾರಿ ಪ್ರಾರಂಭಿಸಲಾಯಿತು. ಕಾಮಗಾರಿ ಸ್ಥಳದಲ್ಲಿ ರೋಜದಾರ ದಿನಾಚರಣೆ ಆಚರಿಸಿ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಕೂಲಿಕಾರರಿಗೆ ಕಡ್ಡಾಯವಾಗಿ ಕಒಖಃಙ, ಕಒ–ಎಎಃಙ ಇನ್ಸೂರನ್ಸ ಗಳನ್ನು ಮಾಡಿಕೊಳ್ಳುವುದು, ಹಾಗೂ ಕಾಮಗಾರಿಯನ್ನು ಅಳತೆ ಪ್ರಕಾರ ಒಂದು ದಿನಕ್ಕೆ ಒಂದು ಕ್ಯೂಬಿಕ್ ಮೀಟರ್ ಕಡಿದಲ್ಲಿ ಮಾತ್ರ ಪೂರ್ತಿ ಹಣ ಬರುತ್ತದೆ. ಕಡಿಮೆ ಕಡಿದಲ್ಲಿ ಕಡಿಮೆ ಕೂಲಿ ಬರುತ್ತದೆ ಎಂದು ಮನವರಿಕೆ ಮಾಡಲಾಯಿತು. ಸ್ಥಳದಲ್ಲಿ ಗ್ರಾಮ ಕೂಲಿ ಸಹಾಯಕಿ ಗೀತಾ ಈಳಿಗೇರ, ಕಾಯಕಬಂಧುಗಳು, ಕೂಲಿಕಾರರು ಹಾಜರಿದ್ದರು.

## ತಾಲೂಕಿನ ವಿವಿಧ ಗ್ರಾಮಗಳ ಕೂಸಿನ ಮನೆಗೆ ಸಹಾಯಕ ನಿರ್ದೇಶಕರು ಭೇಟಿ, ಪರಿಶೀಲನೆ



ಲಿಂಗಸಗೂರು.ಮಾ. 18.– ತಾಲೂಕಿನ ವಿವಿದ ಗ್ರಾಮ ಪಂಚಾಯತಗಳಾದ ಸರ್ಜಾಪುರ, ಗೆಜ್ಜಲಗಟ್ಟ, ಅನ್ವರಿ, ಗೌಡೂರ, ಪೈದೊಡ್ಡಿ ಗ್ರಾಮಗಳ ಕೂಸಿನ ಮನೆಗೆ(ಗ್ರಾಉ.) ಯೋಜನೆಯ ನಿರ್ದೇಶಕರಾದ ವೆಂಕಟೇಶ್ ದೇಸಾಯಿ ಅವರು ಭೇಟಿ ನೀಡಿ ಪರಿಶೀಲನೆ ಮಾಡಿದರು.

ನಂತರ ಮಾತನಾಡಿದವರು ಪ್ರತಿಯೊಂದು ಕೂಸಿನ ಮನೆಯಲ್ಲಿ ಸ್ವಚ್ಛತೆ, ಸುರಕ್ಷತೆ, ಹಾಗೂ ಮಕ್ಕಳಿಗೆ ಸೂಚಿತ್ವ ಆಹಾರ, ಉಪಹಾರ ಹಾಗೂ ಪೌಷ್ಟಿಕ ಆಹಾರ ನೀಡಬೇಕು, ಮಕ್ಕಳಿಗೆ, ದೈಹಿಕ, ಮಾನಸಿಕ, ಬೌದಿಕ, ಶರೀರಕ, ಸೃಜನಾತ್ಮ ಬೆಳವಣಿಗೆಗೆ ಕೂಸಿನ ಮನೆಯು ಸಹಕಾರಿಯಾಗುವಂತೆ ನೋಡಿಕೊಳ್ಳುವ ಜವಾಬ್ದಾರಿ ಸಂಬಂಧಪಟ್ಟ ಅಧಿಕಾರಿಗಳ ಮೇಲಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಕೇರ್ ಟೆಕಾರ್ ಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಮೆನು ಪ್ರಕಾರ ಆಹಾರ ನೀಡಬೇಕು. ತಾಲೂಕಿನ ಎಲ್ಲಾ ಕೂಸಿನ ಮನೆಗೆ ಸರಕಾರದ ಮಾರ್ಗಸೂಚಿ ಪ್ರಕಾರ ಮೂಲಭೂತ ಸೌಕರ್ಯ ನೀಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ತಾಲೂಕು ಐ. ಇ. ಸಿ. ಸಂಯೋಜಕರು, ತಾಂತ್ರಿಕ ಸಹಾಯಕರು, gkm. Bfts ಕರವಸೂಲಿಗಾರರು, ಕೇರ್ ಟೆಕಾರ್‌ಗಳು, ಭಾಗವಹಿಸಿದ್ದರು.

# ನೀಲಾನಗರದಲ್ಲಿ ಪುನೀತ ಜನ್ಮದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19- ತಾಲೂಕಿನ ನೀಲಾನಗರದಲ್ಲಿ ರವಿವಾರ ಚಿತ್ರನಟ ದಿವಂಗತ ಪುನೀತ ರಾಜಕುಮಾರ 50 ನೇ ಜನ್ಮದಿನವನ್ನು ಆಚರಿಸಲಾಯಿತು.

ಬಂಜಾರಾ ಸಮಾಜದ ಯುವಕರು ಗ್ರಾಮದ ದುರ್ಗಾದೇವಿ ದೇವಸ್ಥಾನದ ಮುಂಭಾಗದಲ್ಲಿ ಪುನೀತ ಅವರ ಆಳೆತ್ತರದ ಕಟೌಟ್ ನಿರ್ಮಿಸಿ, ಕೇಕ್ ಕತ್ತರಿಸಿ, ಸಿಹಿ ಹಂಚುವ ಮೂಲಕ ಕಾರ್ಯಕ್ರಮ ಆಚರಿಸಿ ಪುಷ್ಪ ನಮನ ಸಲ್ಲಿಸಿದರು.

ಜಿಪಂ ಮಾಜಿ ಸದಸ್ಯ ರಂಗನಗೌಡ ಗೌಡರ ಮಾತನಾಡಿ, ಪುನೀತ ರಾಜಕುಮಾರ ಅವರ ಸದ್ದಿಲ್ಲದ ಸಮಾಜ ಸೇವೆ ಎಲ್ಲರಿಗೂ ಮಾದರಿಯಾಗಿದೆ. ಅವರ ಆದರ್ಶತೆಯನ್ನು ಯುವಕರು ಬೆಳೆಸಿಕೊಂಡು ಸಮಾಜದ ಒಳಿತಿಗೆ ಶ್ರಮಿಸಬೇಕು ಎಂದರು.

ನಾಗೇಶ ಪೂಜಾರಿ, ಶಂಕರ ಪೂಜಾರಿ, ಜಾನಪ್ಪ ಕುರಿಗಾರ, ಮೇಘಪ್ಪ ಪಮ್ಮಾರ, ಕಿರಣ ಬಾಗೇವಾಡಿ, ನಾರಾಯಣ ಕಟ್ಟಿಮನಿ, ಶೇಖರ ಪಮ್ಮಾರ, ಸಿಂಧೂರ ಕುರಿಗಾರ, ವಿಶಾಲ ಗೌಡರ, ಸುನೀಲ ಕಟ್ಟಿಮನಿ ಸೇರಿದಂತೆ ಅನೇಕ ಜನ ಅಪ್ಪು ಅಭಿಮಾನಿ ಬಳಗದ ಯುವಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಕುಡಿಯುವ ನೀರಿಗೆ ಕ್ರಮವಹಿಸಿ-ಡಾ.ಚರಂತಿಮಠ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19- ಬಿಸಿಲಿನ ತಾಪಮಾನ ಹೆಚ್ಚುತ್ತಿದ್ದು, ಜನರು ಸುರಕ್ಷತಾ ವಿಧಾನಗಳನ್ನು ಪಾಲಿಸಬೇಕು, ಸರಕಾರ ಹಾಗೂ ಜಿಲ್ಲಾಡಳಿತ ಸಾಂಕ್ರಾಮಿಕ ರೋಗಗಳು ಹರಡದಂತೆ, ಕುಡಿಯುವ ನೀರಿಗೂ ತೊಂದರೆಯಾಗದಂತೆ ಕ್ರಮಕೈಗೊಳ್ಳಬೇಕೆಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದ್ದಾರೆ.

ಈ ವರ್ಷ ಬಹು ಬೇಗನೆ



ಬಿಸಿಲಿನ ತಾಪ ಆರಂಭವಾಗಿದ್ದು, ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ- ಯಾಗದಂತೆ ಕ್ರಮವಹಿಸಬೇಕು. ಗ್ರಾಮೀಣ ಪ್ರದೇಶದಲ್ಲೂ ಕುಡಿಯುವ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಜನರೂ ಸಹ ಬಿಸಿಲಿನ ವೇಳೆಯಲ್ಲಿ ಹೊರಗಡೆ ತಿರುಗಾಡದೇ ಮನೆಯಲ್ಲಿರಬೇಕು. ವಯೋವೃದ್ಧರು, ಮಕ್ಕಳ ಆರೋಗ್ಯದ ಕಡೆ ಹೆಚ್ಚು ಗಮನಕೊಡಬೇಕು, ತಾಪಮಾನದಿಂದ ರಕ್ಷಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ಪಾಲಿಸಬೇಕು ಎಂದು ಚರಂತಿಮಠ ಹೇಳಿದ್ದಾರೆ.

# ಸಹಕಾರಿ ಸಂಘಗಳ ಬೆಳವಣಿಗೆಗೆ ಸಹಕಾರ ಅಗತ್ಯ-ಎಸ್.ಆರ್.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19-ಸಹಕಾರಿ ಸಂಘಗಳು ಅಭಿವೃದ್ಧಿ ಹೊಂದಿ ಉನ್ನತ ಮಟ್ಟಕ್ಕೆ ಬೆಳೆಯಬೇಕಾದರೆ ಸಂಸ್ಥೆಯಲ್ಲಿರುವ ಪ್ರತಿಯೊಬ್ಬರ ಸತತ ಪರಿಶ್ರಮ ಅಗತ್ಯವಾಗಿದೆ ಎಂದು ಮಾಜಿ ಸಚಿವ ಎಸ್.ಆರ್.ಪಾಟೀಲ ಹೇಳಿದ್ದಾರೆ.

ಜಿಲ್ಲೆಯ ಇಲಕಲ್ಲ ತಾಲೂಕಿನ ಕಂದಗಲ್ಲ ಗ್ರಾಮದ ನಾಡಗೌಡ್ರ ಕಾಂಪ್ಲೆಕ್ಸದಲ್ಲಿ ಪ್ರಾರಂಭಗೊಂಡ ಬಾಪೂಜಿ ಪತ್ತಿನ ಸಹಕಾರಿ ಸಂಘದ 80ನೇ ಶಾಖೆಯನ್ನು ಉದ್ಘಾಟಿಸಿ ಅವರು ಮಾತನಾಡಿ, ಸಹಕಾರಿ ಸಂಘಗಳಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬರೂ ಪ್ರಾಮಾಣಿಕತೆಯಿಂದ ನಡೆದುಕೊಂಡರೆ ಸಂಘವನ್ನು ಉನ್ನತ ಮಟ್ಟದಲ್ಲಿ ಬೆಳೆಬಹುದಾಗಿದೆ ಎಂದರು. ಗ್ರಾಮೀಣ ಜನರು ಪಟ್ಟಣಕ್ಕೆ ಹೋಗುವ ತಾಪತ್ರೆಯ ತಪ್ಪಿಸಲು ಗ್ರಾಮೀಣ ಭಾಗಗಲ್ಲಿಯೇ ಹೆಚ್ಚೆಚ್ಚು ಶಾಖೆಗಳನ್ನು ತೆರೆಯುತ್ತಿದ್ದೇವೆ. ಜನರು ಇದರ ಪ್ರಯೋಜನ ಪಡೆದು ಆರ್ಥಿಕವಾಗಿ ಸಬಲತೆ ಸಾಧಿಸಬೇಕು ಎಂದು ಪಾಟೀಲ ಹೇಳಿದರು. ನಂದವಾಡಗಿ ಶ್ರೀ ಮಠದ ಕಿರಿಯ ಪೂಜ್ಯರಾದ ಡಾ ಅಭಿನವ ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು. ಸುಕ್ಷೇತ್ರ ಸಜ್ಜಲಗುಡ್ಡ-ಕಂಬಳಿಹಾಳ ಮಠದ ಪೂಜ್ಯ ಶ್ರೀ ದೊಡ್ಡಬಸವಾರ್ಯ ತಾತನವರು ಕಾರ್ಯಕ್ರಮದ ನೇತೃತ್ವವಹಿಸಿದ್ದರು. ಸಭೆಯ ಅಧ್ಯಕ್ಷತೆ ವಹಿಸಿದ್ದ ಕಂದಗಲ್ಲ ಶಾಖೆಯ ಸಲಹಾ ಸಮಿತಿ ಅಧ್ಯಕ್ಷರಾದ ಚನ್ನಪ್ಪಗೌಡ್ರ ನಾಡಗೌಡ್ರ, ಮುಖ್ಯ ಅಥಿತಿಗಳಾದ ಸಿಂಗನಗುತ್ತಿಯ ಪರತಗೌಡ್ರ ಪಾಟೀಲ, ಸಂಸ್ಥೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್.ಸಿ.ಮೋಟಗಿ ಮಾತನಾಡಿದರು.

ಬಾಪೂಜಿ ಪತ್ತಿನ ಸಹಕಾರಿ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಎಸ್.ಆರ್.ಪಾಟೀಲ ಅವರನ್ನು ಕುರುಪೇಟೆ ಓಣಿ ಹಾಗೂ ಬಸವೇಶ್ವರ ಸಹಕಾರಿ ಸಂಘದಿಂದ ಸನ್ಮಾನಿಸಲಾಯಿತು.

ಗ್ರಾಮದ ಹಿರಿಯರಾದ ಶಶಿಧರ ನಾಡಗೌಡ್ರ, ಮಹಾಂತೇಶ ಕಡಿವಾಲ, ಬಸೆಟ್ಟೆಪ್ಪ ಸಜ್ಜನ, ಅಮೀರಹಮಜಾಸಾಹೇಬ ಭಾವಿಕಟ್ಟಿ, ಅರ್ಚಕ ಕೋನಪ್ಪ ನಾಯಕ, ಗ್ರಾಪಂ ಅಧ್ಯಕ್ಷ ಬಸವರಾಜ ಅಳ್ಳೊಳ್ಳಿ, ಶಿವಪ್ಪ ಭಜಂತ್ರಿ, ಮಾಜಿ ಸೈನಿಕ ರಾಮನಗೌಡ ಬೆಳ್ಳಿಹಾಳ, ಬಸವೇಶ್ವರ ಸಹಕಾರಿ ಸಂಘದ ಅಧ್ಯಕ್ಷ ಅಮಾತೆಪ್ಪ ಯರದಾಳ, ರೆಹಮಾನಸಾಬ ಬಾಗವಾನ, ಸಂಗಣ್ಣ ಹವಾಲ್ದಾರ, ಎಂ.ಎಸ್. ಪಾಟೀಲ, ಎ. ಎಸ್.ನಾಗಲೋಟಿ, ಸುರೇಶ ತಳವಾರ, ಸಂಘದ ಸಲಹಾ ಸಮಿತಿ ಸದಸ್ಯರುಗಳು, ಶಾಖೆ-ಯ ವ್ಯವಸ್ಥಾಪಕ ಮಹಾಂತೇಶ ಸಂಡೂರಿ ಉಪಸ್ಥಿತರಿದ್ದರು.

ವಿಶ್ವಚೇತನ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಸಲಹಾ ಸಮಿತಿಯ ಪಂಪಣ್ಣ ಸಜ್ಜನ ಸ್ವಾಗತಿಸಿದರು, ಮಹಮ್ಮದಸಾಬ ಭಾವಿಕಟ್ಟಿ ವಂದಿಸಿದರು, ಪತ್ರಕರ್ತ ವಿರೇಶ ಶಿಂಪಿ ನಿರೂಪಿಸಿದರು.

# ಯುವಕನ ಕೊಲೆ: ಮೂವರು ಆರೋಪಿಗಳ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.19-ನಗರದ ರಾಜಾಪುರ ಕ್ರಾಸ್ ಹತ್ತಿರ ಈಚೆಗೆ ನಡೆದ ಪ್ರಶಾಂತ ನಗರದ ರೇವಣಸಿದ್ದಪ್ಪ ತಂದೆ ರಾಮಣ್ಣ ಪಾಳೆಕಾರ್ (33) ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯ ಠಾಣೆ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ. ಆಕಾಶ, ಪ್ರಶಾಂತ ಪೂಜಾರಿ ಮತ್ತು ಕೃಷ್ಣ ರಾಠೋಡ್ ಬಂಧಿತ ಆರೋಪಿಗಳು.

# ಮಾ.21 ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19-ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮಾರ್ಚ 21 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ ಆಯೋಜಿಸಲಾಗಿದೆ.

ನೇರ ಸಂದರ್ಶನದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ಹಲವಾರು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. 19 ರಿಂದ 35 ವಯೋಮಿತಿಯಲ್ಲಿರುವ ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವೀಧರರು ಭಾಗವಹಿಸಬಹುದಾಗಿದೆ.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಬಯೋಡಾಟಾ ಮತ್ತು ಮೂಲ ಅಂಕಪಟ್ಟಿಗಳ ಝರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಿ ನೇರ ಸಂದರ್ಶನದ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354-235337ಗೆ ಸಂಪರ್ಕಿಸಬಹುದಾಗಿದೆ.

# ಬಾಗಲಕೋಟೆ ಜಿಲ್ಲೆಯಲ್ಲಿ ಗೋಡಂಬಿ ಬೆಳೆಯಲು ವಿಫುಲ ಅವಕಾಶ-ಡಾ.ವಸಂತ ಗಾಣಿಗೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19- ಜಿಲ್ಲೆಯಲ್ಲಿ ಫಲವತ್ತಾದ ಭೂಮಿ, ನೀರು ಇದೆ. ಜೊತೆಗೆ ಆಲಮಟ್ಟಿ ಹಿನ್ನೀರಿನಿಂದ ಸಾಕಷ್ಟು ಅವಕಾಶ ಇರುವುದರಿಂದ ಜಿಲ್ಲೆಯ ರೈತರು ಗೋಡಂಬಿ ಬೆಳೆ ಬೆಳೆಯಬಹುದಾಗಿದೆ ಎಂದು ತೋಟಗಾರಿಕೆ ವಿಶ್ವವಿದ್ಯಾಲಯದ ತರಬೇತಿ ಕೇಂದ್ರದ ಮುಖ್ಯಸ್ಥ ಡಾ.ವಸಂತ ಗಾಣಿಗೇರ ಹೇಳಿದರು.

ತಾಲ್ಲೂಕಿನ ತುಳಸಿಗೇರಿಯಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಮತ್ತು ರೈತ ಹಾಗೂ ಸಿಬ್ಬಂದಿ ತರಬೇತಿ ಕೇಂದ್ರ, ತೋಟಗಾರಿಕೆ ವಿವಿಯ ವಿಸ್ತರಣಾ ನಿರ್ದೇಶನಾಲಯ, ಗೇರು ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯ ಕೊಚ್ಚಿ ಇವರ ಸಹಯೋಗದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಗೋಡಂಬಿ ಬೆಳೆಯ ವೈಜ್ಞಾನಿಕ ಉತ್ಪಾದನೆ ಹಾಗೂ ಸಂಸ್ಕರಣಾ ತಂತ್ರಜ್ಞಾನ ಕುರಿತ ತರಬೇತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ರೋಗ, ಕೀಟಗಳ ಬಾಧೆ ಇಲ್ಲದ ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಗೋಡಂಬಿ ಬೆಳೆಯನ್ನು ಇಂದು ಬಾಗಲಕೋಟೆಯಲ್ಲಿ ಹಲವು ರೈತರು ಬೆಳೆಯುತ್ತಿದ್ದಾರೆ ಎಂದರು.

ಸಾಂಪ್ರದಾಯಿಕ ಬೆಳೆಗಳಾದ ಜೋಳ, ಗೋದಿ ಮತ್ತಿತರ ದವಸ ಧಾನ್ಯಗಳ ಜೊತೆಗೆ ಗೋಡಂಬಿಯನ್ನು ಬೆಳೆಯಬಹುದಾಗಿದೆ. ಗೋಡಂಬಿ ನಾಟಿ ಮಾಡಿದ ಮೂರು ವರ್ಷದವರೆಗೆ ಅದರಲ್ಲಿ ಪರ್ಯಾಯ ಬೆಳೆಗಳನ್ನು ಬೆಳೆದುಬಹುದಾಗಿದೆ. ನವೀನ ಮಾದರಿಯ ಕೃಷಿಗೆ ಒತ್ತು ಕೊಡುವದರ ಜೊತೆಗೆ ಸಾಂಪ್ರದಾಯ ಬೆಳೆಗಳನ್ನು ಕೂಡ ಬೆಳೆಸಬೇಕಾಗಿದೆ ಎಂದ ವಸಂತ ಗಾಣಿಗೇರ, ಈ ನಿಟ್ಟಿನಲ್ಲಿ ಗೋಡಂಬಿ ಬೆಳೆ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಲು ಅನುಕೂಲಕರ ಬೆಳೆಯಾಗಿದೆ ಎಂದು ಹೇಳಿದರು.

ತೋಟಗಾರಿಕೆ ವಿವಿಯ ಸಹಪ್ರಾಧ್ಯಾಪಕ ವಿಜಯಕುಮಾರ ನಾರಾಯಣಪುರ ಮಾತನಾಡಿ, ನಮ್ಮ ದೇಶದಲ್ಲಿ 8 ಲಕ್ಷ ಟನ್ ಗೋಡಂಬಿ ಬೆಳೆಯಲಾಗುತ್ತಿದ್ದು, 16 ಲಕ್ಷ ಟನ್ ಬೇಡಿಕೆ ಇದೆ. ಇದರಿಂದಾಗಿ ಆಫ್ರಿಕಾ ಹಾಗೂ ಇತರೆ ದೇಶಗಳಿಂದ ಗೋಡಂಬಿಯನ್ನು ತರಿಸಿಕೊಳ್ಳಲಾಗುತ್ತಿದೆ. ಇದನ್ನು ಮನಗಂಡು ನಮ್ಮ ರೈತರೂ ದಾಳಂಬಿ ಬೆಳೆಯನ್ನು ಬೆಳೆಯಲು ಮುಂದಾಗಬೇಕು ಎಂದರು.

ಸಹಪ್ರಾಧ್ಯಾಪಕ ಡಾ.ರಮೇಶ್, ದಾಳಿಂಬೆ ಹಾಗೂ ದ್ರಾಕ್ಷಿ ಬೆಳೆಗಳಿಗೆ ಹೋಲಿಸಿದಾಗ ಗೋಡಂಬಿಗೆ ರೋಗಗಳು ಕಡಿಮೆ. ಔಷಧಿ ಸಿಂಪಡಿಸಿ ರೋಗ ಹತೋಟಿಗೆ ತರಬಹುದಾಗಿದೆ ಎಂದರು. ಡಾ.ಚಂದನ, ಗೋಡಂಬಿಗೆ ತೋಟಗಾರಿಕೆ ವಿವಿಯಿಂದ ಮಾರಾಟ ವ್ಯವಸ್ಥೆ ಮಾಡಿಕೊಡಲಾಗುವುದು, ಸಹಾಯಧನದಲ್ಲಿ ಕೃಷಿ ಪರಿಕರಗಳ ಅನುಕೂಲತೆಯಿದೆ ಎಂದು ಹೇಳಿದರು.

ಗೋಡಂಬಿ ಬೆಳೆದ ರೈತರಾದ ಸಿ.ಎಂ.ದಾಸನ್ನವರ ಹಾಗೂ ಪ್ರಭು ಮುಗಳೊಳ್ಳಿ ಅವರನ್ನು ಸತ್ಕರಿಸಲಾಯಿತು. ಎಲ್.ಆರ್.ಪಾಟೀಲ್ ಉಪಸ್ಥಿತರಿದ್ದರು. ವೆಂಕಣ್ಣ ಬಾಲರೆಡ್ಡಿ ಸ್ವಾಗತಿಸಿದರು. ಬಾಲಚಂದ್ರ ರೂಗಿ ನಿರೂಪಿಸಿದರು.

**CITATION**

**IN THE COURT OF THE PRL, CIVIL JUDGE AND IMFC HUMNABAD AT HUMNABAD**

**CRL MISC. NO. 41/2025**

**PETITIONERS:-**

1. Mastan Miyan S/o Nabi Sab Age. 41
2. Sayyad Ali S/o Nabi Sab Age. 56
1. Munwar S/o Nabi Sab Sayyad Age. 48
4. Chand Pasha S/o Nabi Sab Age. 71
5. Sharee bee D/o Nabi Sab Age. 40

All R/o Hudgi village Tq: Humnabad, Dist: Bidar

RESPONDENT:-

The Registrar of Birth and Death-through the Tahasildar, Humnabad

Whereas the above named petitioners have filed the petition under section 13 (3) of Birth and Death Registration Act 1969 praying this Honorable court to issue Death Certificate of of petitioner No.1 and mother of petitioners No.2 to 4 namely; LATE Bismilla Bee W/o Nabi Sab Who died on 24.02.2015 at Hudgi village, Tq:Humnabad.

The petitioners claiming the death certificate of deceased Mastan for transfer of property and other official purpose and home record. Therefore it is hereby proclaimed that if any person or persons have got any objection in this regard he/they may approach to this Honorable court on 16.04.2025 at 11.00 AM. in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this 11th day of March-2025

Sd/-

Chief Ministerial Officer,

Prl, Civil Judge and JMFC Court Humnabad

# ರಸ್ತೆ ಅಪಘಾತ-ಬೈಕ್ ಸವಾರ ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19-ರಸ್ತೆ ಡಿವೈಡರಿಗೆ ಡಿಕ್ಕಿ ಹೊಡೆದು ಮೋಟಾರ ಸೈಕಲ್ ಸವಾರ ಮೃತಪಟ್ಟ ಘಟನೆ ಸಮೀಪದ ಶಿರೂರ ಪಟ್ಟಣದ ಬಳಿ ಮಂಗಳವಾರ ನಡೆದಿದೆ.

ಬಾಗಲಕೋಟೆಯಿಂದ ಶಿರೂರ ಮಾರ್ಗವಾಗಿ ಬೈಕ್ ಮೇಲೆ ತನ್ನೂರಿಗೆ ಹೊರಟಿದ್ದ ಹುನಗುಂದ ತಾಲ್ಲೂಕಿನ ಅಮೀನಗಡದ ನಿವಾಸಿ ಹನಮಂತಪ್ಪ ಗೋಲಪ್ಪ ಶಾಂತಗಿರಿ(50) ರಸ್ತೆ ಡಿವೈಡರಿಗೆ ಹಾಯಿಸಿ ಬಿದ್ದು ತಲೆಗೆ ಪೆಟ್ಟಾಗಿ ಸಾವನ್ನಪ್ಪಿದ್ದಾನೆ.

ಬಾಗಲಕೋಟೆ ಗ್ರಾಮೀಣ ಠಾಣೆಯ ಪಿಎಸ್ಐ ಶರಣಬಸಪ್ಪ ಸಂಗನಾಳ ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ವಾಹನ ಚಾಲನಾ ತರಬೇತಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19- ಕೆನರಾ ಬ್ಯಾಂಕ್ ದೇಶಪಾಂಡೆ ಆರ್ಸೆಟ್ ಸಂಸ್ಥೆ 18 ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗ ಯುವಕರಿಗಾಗಿ ಏಪ್ರಿಲ್ ತಿಂಗಳಲ್ಲಿ ಜೆ.ಸಿ.ಬಿ ಚಾಲನೆ ಹಾಗೂ ಮೇ ತಿಂಗಳಲ್ಲಿ ಲಘು ಮೋಟಾರ ವಾಹನ ಚಾಲನೆಗೆ ಉಚಿತ ತರಬೇತಿ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಿದೆ.

ತರಬೇತಿ ಊಟ, ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸ ನೊಂದಾಯಿಸಲು ಕೊನೆಯ ದಿನ ಮಾರ್ಚ 28 ಆಗಿದ್ದು, ಆಸಕ್ತರು ಆರ್ಸೆಟ್ ಸಂಸ್ಥೆಯ ಮೊಬೈಲ್ ನಂ. 8217236973, 9483485489, 9482188780 ಹಾಗೂ ಆನ್ಲೈನ್ ತಿತಿತಿ.ಧಿಜಣುಚಿಟುಥಿಚಿಟ.ಠಡಿರ ಮೂಲಕ ಅರ್ಜಿ ಸಲ್ಲಿಸಬಹುದು.

ತರಬೇತಿಯಲ್ಲಿ ಭಾಗವಹಿಸುವ ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಸಂಪರ್ಕಿಸಲು ಕೋರಲಾಗಿದ್ದು, ಸಂಸ್ಥೆಯ ಮೇಲಿನ ಮೊಬೈಲ್ ನಂಬರಗಳಿಗೆ ಸಂಪರ್ಕಿಸಲು ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

# ಶೌಚಾಲಯ ನಿರ್ಮಾಣಕ್ಕೆ ಸಹಾಯಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19-ಸ್ವಚ್ಛ ಭಾರತ ಮಿಷನ್ ಮಾರ್ಗಸೂಚಿಯನ್ವಯ ವೈಯಕ್ತಿಕ ಶೌಚಾಲಯಗಳ ನಿರ್ಮಾಣಕ್ಕಾಗಿ ಬಾಗಲಕೋಟೆ ನಗರಸಭೆಗೆ 22.55 ಲಕ್ಷ ರೂ.ಗಳ ಅನುದಾನ ಬಿಡುಗಡೆಯಾಗಿದೆ. 75 ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾಲಿನ ಈ ಅನುದಾನ ಬಿಡುಗಡೆ-ಯಾಗಿದ್ದು, ಸಾರ್ವಜನಿಕರು ಮನೆ ಉತಾರ, ಅರ್ಜಿದಾರರ ಭಾವಚಿತ್ರ, ಅಧಾರ ಕಾರ್ಡ, ರೇಷನ್ ಕಾರ್ಡ, ಬ್ಯಾಂಕ್ ಪಾಸಬುಕ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಉಚಿತ ಧ್ಯಾನ, ಆತ್ಮಜ್ಞಾನ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.19- ನಗರದ ವಿದ್ಯಾಗಿರಿ ಸಾಯಿ ಮಂದಿರದಲ್ಲಿ ಮಾ.20 ರಂದು ಉಚಿತ ಧ್ಯಾನ ಮತ್ತು ಆತ್ಮಜ್ಞಾನ ಶಿಬಿರ ನಡೆಯಲಿದೆ.

ಬುಧವಾರ ಸುದ್ದಿಗೋಷ್ಠಿಯಲ್ಲಿ ವಿಷಯ ತಿಳಿಸಿದ ರಾಜಶೇಖರ ಅಡಿಕೆನ್ನವರ, ಗುರುದತ್ತ ಪತ್ರೀಜಿ ಪಿರಮಿಡ್ ಧ್ಯಾನ ಕೇಂದ್ರದ ವತಿಯಿಂದ ನಡೆಯುವ ಈ ಶಿಬಿರದಲ್ಲಿ ತಟವರ್ತಿ ವೀರರಾಘವರಾವ್ ಧ್ಯಾನ ಮತ್ತು ಆತ್ಮಜ್ಞಾನದ ಕುರಿತು ತಿಳಿಸಿಕೊಡಲಿದ್ದಾರೆ.

ಗುರುವಾರ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಈ ಶಿಬಿರ ನಡೆಯಲಿದ್ದು, ನಗರದ ಸಾರ್ವಜನಿಕರು ಭಾಗವಹಿಸಿ ಪ್ರಯೋಜನ ಪಡೆಯಬೇಕೆಂದು ಅಡಿಕೆನ್ನವರ ತಿಳಿಸಿದರು.

ಮಲ್ಲಿಕಾರ್ಜುನ ಹವಾಲ್ದಾರ, ಸತೀಶ ಢಗೆ, ಅನ್ನಪೂರ್ಣಾ ಕಲಬುರ್ಗಿ, ಬಸವರಾಜ ಮಿಟ್ಟಲಕೋಡ ಇದ್ದರು.

# ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.19 -ಇಲ್ಲಿನ ರೈಲ್ವೇ ಪೊಲೀಸ್ ಠಾಣೆ-ಯ ವ್ಯಾಪ್ತಿಯ ರಾಯಚೂರು ಮತ್ತು ಮರಿಚಟ್ಬಾಳ ರೈಲ್ವೇ ನಿಲ್ದಾಣಗಳ ಮದ್ಯೆ ರೈಲ್ವೆ ಕೀ.ಮೀ ನಂ: 562/6-8 ಡೌನ್ ಲೈನ್‌ನಲ್ಲಿ ಮಾ.18 ರಂದು ಯಾವುದೋ ಚಲಿಸುವ ರೈಲುಗಾಡಿಯಿಂದ ಆಯಾತಪ್ಪಿ ಕೆಳಗೆಬಿದ್ದು ಸುಮಾರು 55 ವರ್ಷದ ಅಪರಿಚಿತ ಹೆಂಗಸ್ಸು ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ:21/2025 ಕಲಂ 194ಬಿ. ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಿಸಿಕೊಂಡು ಮೃತಳ ವಾರಸುದಾರರ ಪತ್ತೆಗೆ ಮನವಿ ಮಾಡಲಾಗಿದೆ. ಮೃತಳ ಚಹರೆ ಪಟ್ಟಿಯ ವಿವರ; ವಯಸ್ಸು ಸುಮಾರು 55 ವರ್ಷ, ಎತ್ತರ ಸುಮಾರು 5.1 ಅಡಿ, ಸಾದಾಕೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ, ಸಣ್ಣ ಕಿವಿ, ದಪ್ಪ ಮೂಗು ತಲೆಯಲ್ಲಿ 01 ಇಂಚು ಬಿಳಿ ಕೂದಲು ಹೊಂದಿಲಾಗಿದ್ದು, ಒಂದು ಬೂದು ಬಣ್ಣದ ಹೂವಿನ ಡಿಸೈನ್ ಪಾಲಿಸ್ಟರ್ ಸೀರೆ, ಒಂದು ಹಸಿರು ಬಣ್ಣದ ಕುಪ್ಪಸ, ಒಂದು ನೀಲಿ ಬಣ್ಣದ ಲಂಗಾ. ಒಂದು ಬಿಳಿ ಬಣ್ಣದ ದಾರ ಕೊರಳಲ್ಲಿ ಧರಿಸಲಾಗಿದೆ. ಈ ಮೃತಳ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತಳ ಹೋಲಿಕೆಯ ಮಹಿಳೆ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532-231716 ಅಥವಾ ಮೊ.ನಂ:9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರೈಲ್ವೇ ಪೊಲೀಸ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

